ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೯

ಪಟ್ಟಿ – ೧೭

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೆಯ ಅಧಿವೇಶನ
(ಮುಂದುವರೆದ ಉಪವೇಶನ)

ಗುರುವಾರ, ದಿನಾಂಕ : ೦೮ನೇ ಜೂನ್, ೨೦೧೭

---

## ಸಮೂಹ – IV

೧. ಮುಖ್ಯಮಂತ್ರಿಗಳು.

೨. ಗೃಹ ಸಚಿವರು.

೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು.

೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು.

---

# ೭ನೇ ವೇತನ ಆಯೋಗದ ಸಮಿತಿ ರಚನೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೦೪೧ (೨೪೪೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:--

(ಅ) ರಾಜ್ಯದಲ್ಲಿ ೦೭ನೇ ವೇತನ ಆಯೋಗ ನೇಮಕ ಮಾಡುವುದಾಗಿ ಘೋಷಣೆ ಮಾಡಿದ್ದು ಯಾವಾಗ;

(ಆ) ೦೭ನೇ ವೇತನ ಆಯೋಗದ ಸಮಿತಿಯನ್ನು ಆ ಸಮಿತಿಯ ಅಧ್ಯಕ್ಷರನ್ನು ಸರ್ಕಾರ ನೇಮಕ/ರಚನೆ ಮಾಡಿದೆಯೇ; ಮಾಡಿದ್ದಲ್ಲಿ, ಆ ಸಮಿತಿಯಲ್ಲಿರುವವರ ಸಂಪೂರ್ಣ ವಿವರಗಳನ್ನು ನೀಡುವುದು;

(ಇ) ಸದರಿ ಸಮಿತಿಗೆ ವರದಿಯನ್ನು ನೀಡಲು ನೀಡಿರುವ ಕಾಲಮಿತಿ ಎಷ್ಟು; ಸಮಿತಿಯು ವರದಿ ಬರುವುದಕ್ಕೂ ಮುನ್ನ ರಾಜ್ಯ ಸರ್ಕಾರಿ ನೌಕರರಿಗೆ ಮಧ್ಯಂತರವಾಗಿ ಪರಿಹಾರವನ್ನು ನೀಡಲು ಸರ್ಕಾರ ಚಿಂತಿಸಿದೆಯೇ;

(ಈ) ವೇತನ ಆಯೋಗದ ಸಮಿತಿಯನ್ನು ರಚನೆ ಮಾಡದೇ ಇದ್ದಲ್ಲಿ ರಚನೆ ಮಾಡಲು ಸರ್ಕಾರಕ್ಕೆ ಇರುವ ಅಡೆತಡೆಗಳೇನು; ಈ ಕುರಿತು ಈಗಾಗಲೇ ಕೈಗೊಂಡಿರುವ ಕ್ರಮಗಳೇನು; ಕೈಗೊಳ್ಳಬೇಕಾಗಿರುವ ಕ್ರಮಗಳೇನು;

(ಉ) ವೇತನ ಆಯೋಗದ ರಚನೆ ಮಾಡಲು ಈಗಾಗಲೇ ಸರ್ಕಾರಿ ನೌಕರರು ಹೋರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವೇತನ ಆಯೋಗ ರಚನೆ ಮಾಡಲು ಎಷ್ಟು ವಿಳಂಬವಾಗಲು ಕಾರಣವೇನು ; (ಸಂಪೂರ್ಣ ವಿವರಗಳನ್ನು ನೀಡುವುದು)

(ಊ) ವೇತನ ಆಯೋಗದ ವರದಿಯನ್ನು ಜಾರಿ ಮಾಡುವುದು ಯಾವಾಗ? (ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೪೨ (೨೪೧೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೩ ವರ್ಷದ ಅವಧಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಪ್ರಾರಂಭವಾದ ಕಾಮಗಾರಿಗಳು ಯಾವುವು;

(ಆ) ಈ ಕಾಮಗಾರಿಗಳಿಗೆ ಟೆಂಡರ್ ಕರೆಯಲಾಗಿತ್ತೇ; ಆಗಿದ್ದಲ್ಲಿ, ಯಾವ ಯಾವ ಕಾಮಗಾರಿಗಳನ್ನು ಯಾವ ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ; ಈ ಕಾಮಗಾರಿಗಳ ಮೊತ್ತವೆಷ್ಟು; (ಪೂರ್ಣ ವಿವರ ನೀಡುವುದು)

(ಇ) ಪ್ರಾರಂಭಗೊಂಡ ಕಾಮಗಾರಿಗಳಿಗೆ ಪೂರ್ಣಗೊಳಿಸಲು ನೀಡಿದ ಸಮಯ ಎಷ್ಟು ಮತ್ತು ಎಷ್ಟು ಕಾಮಗಾರಿಗಳು ಪೂರ್ಣಗೊಂಡಿರುತ್ತದೆ; ಹಾಗೂ ಎಷ್ಟು ಕಾಮಗಾರಿಗಳು ನಿಗಧಿತ ಸಮಯದಲ್ಲಿ ಪೂರ್ಣವಾಗಿರುವುದಿಲ್ಲ; (ವಿವರ ನೀಡುವುದು)

(ಈ) ಪೂರ್ಣಗೊಂಡ ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗಿದೆಯೇ? (ಪೂರ್ಣ ಮಾಹಿತಿ ನೀಡುವುದು)

## ಜೀವನೋಪಾಯ ಇಲಾಖೆಯಿಂದ ಇರುವ ಯೋಜನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೪೩ (೨೪೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಜೀವನೋಪಾಯ ಇಲಾಖೆಯಿಂದ ಜನಸಾಮಾನ್ಯರಿಗೆ ಇರುವ ಯೋಜನೆಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು)

(ಆ) ಜೀವನೋಪಾಯ ಇಲಾಖೆಯಲ್ಲಿರುವ ಯೋಜನೆಗಳ ಬಗ್ಗೆ ಜನಸಾಮಾನ್ಯರಿಗೆ ಮಾಹಿತಿಯನ್ನು ಯಾವರೀತಿಯಲ್ಲಿ ನೀಡಲಾಗುತ್ತಿದೆ;

(ಇ) ೨೦೧೬-೧೭ನೇ ಸಾಲಿನಲ್ಲಿ ಜೀವನೋಪಾಯ ಇಲಾಖೆಯಿಂದ ಉಪಯೋಗ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ವಿವರ ನೀಡುವುದು)

**ಅಂಡರ್ ಪಾಸ್‌ಗಳ ನಿರ್ವಹಣೆಗಳ ಬಗ್ಗೆ**

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೪೪ (೨೪೧೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೆಂಗಳೂರು ನಗರದ ರಸ್ತೆಗಳಲ್ಲಿ ಅಂಡರ್ ಪಾಸ್‌ಗಳನ್ನು ನಿರ್ಮಿಸಿದ್ದು ಆ ಅಂಡರ್ ಪಾಸ್‌ಗಳನ್ನು ಶುಚಿಯಾಗಿಡದೇ ಸಾರ್ವಜನಿಕರಿಗೆ ಉಪಯೋಗವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಎಷ್ಟು ಅಂಡರ್ ಪಾಸ್‌ಗಳು ಉಪಯೋಗಕ್ಕೆ ಯೋಗ್ಯವಾಗಿರುವುದಿಲ್ಲ; (ನಿರ್ಮಿಸಲಾದ ದಿನಾಂಕ ವಿವರ ನೀಡುವುದು)

(ಆ) ಈ ಅಂಡರ್ ಪಾಸ್‌ಗಳನ್ನು ಶುಚಿಯಾಗಿಟ್ಟು ಸಾರ್ವಜನಿಕರಿಗೆ ಉಪಯೋಗವಾಗುವಂತೆ ಮಾಡಲು ಇರುವ ತೊಂದರೆಗಳೇನು;

(ಇ) ಈ ಅಂಡರ್ ಪಾಸ್‌ಗಳ ನಿರ್ವಹಣೆಯನ್ನು ಹೊರ ಗುತ್ತಿಗೆ ನೀಡಲಾಗಿದೆಯೇ; ನೀಡಿದ್ದಲ್ಲಿ, ಗುತ್ತಿಗೆದಾರರ ಪೂರ್ಣ ವಿವರ ನೀಡುವುದು?

## ರೈತರ ಸಾಲ ಮನ್ನಾ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೪೫ (೨೪೧೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆಯಲ್ಲಿ ರೈತರು ಸಹಕಾರ ಸಂಘಗಳಿಂದ/ಸಹಕಾರ ಬ್ಯಾಂಕುಗಳಿಂದ ಪಡೆದುಕೊಂಡಿರುವ ಸಾಲದ ಮೊತ್ತವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಿಂದ ಬರಗಾಲ ಇರುವುದರಿಂದ ರೈತರ ಸಾಲ ಅಥವಾ ಬಡ್ಡಿ ಮನ್ನಾ ಮಾಡುವ ಚಿಂತನೆ ಸರ್ಕಾರದ ಮಟ್ಟದಲ್ಲಿ ಇದೆಯೇ ;

(ಇ) ೨೦೧೭-೧೮ರ ಆಯವ್ಯಯದಲ್ಲಿ ಮಂಡ್ಯ ಜಿಲ್ಲೆಯ ರೈತರಿಗೆ ನೀಡಲು ಮೀಸಲಿಟ್ಟ ಸಾಲದ ಮೊತ್ತವೆಷ್ಟು?

## ನಕಲಿ ಅಂಕಪಟ್ಟಿ ಸಲ್ಲಿಸಿ ಉದ್ಯೋಗ ಪಡೆದವರ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೪೬ (೨೪೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿವಿಧ ಇಲಾಖೆಯ ನೇರ ನೇಮಕಾತಿಗಳಲ್ಲಿ ನಕಲಿ ಅಂಕಪಟ್ಟಿ ಸಲ್ಲಿಸಿ ಉದ್ಯೋಗ ಪಡೆದವರ ಸಂಖ್ಯೆ ಎಷ್ಟು;

(ಆ) ನಕಲಿ ಅಂಕಪಟ್ಟಿ ಸಲ್ಲಿಸಿ ಉದ್ಯೋಗ ಪಡೆದವರ ವಿರುದ್ಧ ಯಾವ ರೀತಿ ಕ್ರಮ ಕೈಗೊಳ್ಳಲಾಗುವುದು;

(ಇ) ಈ ಅಂಕಪಟ್ಟಿಗಳ ನೈಜತೆಯನ್ನು ಪರಿಶೀಲಿಸಲು ವಿಶ್ವವಿದ್ಯಾನಿಲಯ/ಬೋರ್ಡ್‌ಗಳಲ್ಲಿ ತೆಗೆದುಕೊಂಡಿರುವ ಕ್ರಮಗಳೇನು?

## ಹೈದ್ರಾಬಾದ್-ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಉಗ್ರಾಣ ನಿಗಮ ಹಾಗೂ ಕೇಂದ್ರ ಕಛೇರಿಯಲ್ಲಿ ನೇರ ನೇಮಕಾತಿ ಹಾಗೂ ಮುಂಬಡ್ತಿಗೆ ಮೀಸಲಿರಿಸಿದ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೦೪೭ (೨೪೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ೬ ಜಿಲ್ಲೆಗಳಲ್ಲಿ ಇರುವ ಇಲಾಖೆಗಳಲ್ಲಿ ಹುದ್ದೆಗಳನ್ನು ಸಂವಿಧಾನದ ಕಲಂ ೩೭೧(ಜೆ) ಅನುಷ್ಠಾನಗೊಂಡ ನಂತರ ಹೈದ್ರಾಬಾದ್-ಕರ್ನಾಟಕ ಭಾಗದವರಿಗಾಗಿ ಪ್ರತ್ಯೇಕವಾಗಿ ವಿಂಗಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಇದ್ದರೆ, ಜಿಲ್ಲಾವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ವಿಂಗಡಿಸಲಾದ ಹುದ್ದೆಗಳಲ್ಲಿ ಹೈದ್ರಾಬಾದ್-ಕರ್ನಾಟಕದ ಆರು ಜಿಲ್ಲೆಗಳಲ್ಲಿನ ಉಗ್ರಾಣ ನಿಗಮದಲ್ಲಿ ಹಾಗೂ ಕೇಂದ್ರ ಕಛೇರಿಯಲ್ಲಿ ನೇರ ನೇಮಕಾತಿಗಾಗಿ ಹಾಗೂ ಮುಂಬಡ್ತಿಗಾಗಿ ಮೀಸಲಿರಿಸಿದ ಹುದ್ದೆಗಳು ಯಾವುವು; ಮೀಸಲಿರಿಸಿದ ಪ್ರಮಾಣ ಎಷ್ಟು; (ವೃಂದವಾರು, ಹುದ್ದೆವಾರು ಸಂಪೂರ್ಣ ವಿವರ ನೀಡುವುದು)

(ಇ) ರಾಯಚೂರು ಘಟಕ-೨ರಲ್ಲಿ ಸಹಾಯಕ ವ್ಯವಸ್ಥಾಪಕರ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸೇವಾ ಜೇಷ್ಠತೆಯಲ್ಲಿ ಹಿರಿಯರಾಗಿದ್ದು, ಹೈದ್ರಾಬಾದ್-ಕರ್ನಾಟಕ ಪ್ರದೇಶದವರಿಗೆ ಮುಂಬಡ್ತಿಗಾಗಿ ಮೀಸಲಿಟ್ಟ ಉಪ ಸಹಾಯಕ (ಫೀಲ್ಡ್) ಹುದ್ದೆಗಳಿಗೆ ಅರ್ಹರಾಗಿದ್ದರೂ. ಪದೋನ್ನತಿ ನೀಡದೆ ಮುಂದೂಡುತ್ತಿರುವ

ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಉಪ ಸಹಾಯಕ(ಫೀಲ್ಡ್) ಹುದ್ದೆಗಳಗೆ ಬಡ್ತಿ ನೀಡದೆ ಇರುವುದಕ್ಕೆ ಕಾರಣವೇನು? (ಮಾಹಿತಿ ನೀಡುವುದು)

## ಬೆಳಗಾವಿ, ಮೈಸೂರು ಹಾಗೂ ಬೆಂಗಳೂರು ವಿಭಾಗಗಳಲ್ಲಿ ೩೭೧ (ಜೆ) ಅಡಿಯಲ್ಲಿ ಶೇ.೮ರಷ್ಟು ಮೀಸಲಾತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೦೪೮ (೨೪೩೭) ಮಾನ್ಯ ಮುಖ್ಯಮಂತ್ರಿಗಳು ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಬೆಳಗಾವಿ, ಮೈಸೂರು ಹಾಗೂ ಬೆಂಗಳೂರು ವಿಭಾಗದಲ್ಲಿ ಸಂವಿಧಾನ ೩೭೧(ಜೆ) ಅಡಿಯಲ್ಲಿ ಶೇ.೮ರಷ್ಟು ಮೀಸಲಾತಿ ಪ್ರಕಾರ ಆದ ನೇಮಕಾತಿಗಳು ಎಷ್ಟು; ವಿವಿಧ ಇಲಾಖೆಗಳಲ್ಲಿ ಆದ ಬಡ್ತಿಗಳು ಎಷ್ಟು; (ಇಲಾಖಾವಾರು, ವಿಭಾಗವಾರು ಸಂಪೂರ್ಣ ವಿವರ ನೀಡುವುದು)

(ಆ) ಹೈದ್ರಾಬಾದ್-ಕರ್ನಾಟಕ ಪ್ರದೇಶ ಹೊರತುಪಡಿಸಿ ೩೭೧(ಜೆ) ಅಡಿಯಲ್ಲಿ ರಾಜ್ಯದ ಇತರೆ ವಿಭಾಗಗಳಲ್ಲಿ ೩೭೧ (ಜೆ) ಆಶಯ ಪ್ರಕಾರ ನೇಮಕಾತಿ ಹಾಗೂ ಮುಂಬಡ್ತಿಗಳಲ್ಲಿ ಶೇ.೮ರಷ್ಟು ಮೀಸಲಾತಿ ಕಲ್ಪಿಸದೆ ಇದ್ದಲ್ಲಿ, ಕಾರಣವೇನು; (ಕಾರಣಗಳೊಂದಿಗೆ ಸಂಪೂರ್ಣ ವಿವರ ನೀಡುವುದು)

(ಇ) ಹೈದ್ರಾಬಾದ್-ಕರ್ನಾಟಕ ಪ್ರದೇಶ ಹೊರತುಪಡಿಸಿ ೩೭೧(ಜೆ) ಅಡಿಯಲ್ಲಿ ರಾಜ್ಯದ ಇತರೆ ವಿಭಾಗಗಳಲ್ಲಿ ೩೭೧ (ಜೆ) ಆಶಯ ಪ್ರಕಾರ ನೇಮಕಾತಿ ಹಾಗೂ ಮುಂಬಡ್ತಿಗಳಲ್ಲಿ ಶೇ.೮ರಷ್ಟು ಮೀಸಲಾತಿ ಯಲ್ಲಿ ಗೊಂದಲ ಸೃಷ್ಟಿಯಾಗಿ ನ್ಯಾಯಾಲಯದಲ್ಲಿ

ವ್ಯಾಜ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದರೆ, ಸರ್ಕಾರ ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು; ಪ್ರಸ್ತುತ ವ್ಯಾಜ್ಯ ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಈ) ಸದರಿ ೩೭೧ (ಜೆ) ಅಡಿಯಲ್ಲಿರುವಂತಹ ಶೇ.೮೦ರಷ್ಟು ಮೀಸಲಾತಿ ಗೊಂದಲಗಳನ್ನು ನಿವಾರಣೆ ಮಾಡಲು ಸರ್ಕಾರ ಸಂವಿಧಾನದಲ್ಲಿ ತಿದ್ದುಪಡಿ ತರಲು ಮುಂದಾಗುವುದೇ; ಇದ್ದರೆ, ವಿಧಾನಸಭೆಯಲ್ಲಿ ಹಾಗೂ ಸಂಸತ್ ಸದನದಲ್ಲಿ ತಿದ್ದುಪಡಿ ತರಲು ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ೨ ವರ್ಷಗಳಿಂದ ಖಾಲಿ ಇರುವ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೦೪೯ (೨೪೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:--

(ಅ) ಹೈದ್ರಾಬಾದ್–ಕರ್ನಾಟಕದ ೬ ಜಿಲ್ಲೆಗಳಲ್ಲಿ ೩೭೧ (ಜೆ) ಅಡಿಯಲ್ಲಿ ಕಳೆದ ೨ ವರ್ಷಗಳಿಂದ ಖಾಲಿ ಹುದ್ದೆಗಳ ಭರ್ತಿಗಾಗಿ ಅಧಿಸೂಚನೆ ಹೊರಡಿಸಿ ನೇಮಕಾತಿ ಮಾಡಲಾಗಿದೆಯೇ; ಇದ್ದರೆ, ಸರ್ಕಾರಿ ಹಾಗೂ ಅರೆಸರ್ಕಾರಿ ಇಲಾಖೆಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ೩೭೧ (ಜೆ) ಅಡಿಯಲ್ಲಿರುವ ವೃಂದವಾರು ಹುದ್ದೆಗಳನ್ನು ಗುರುತಿಸಿ ಅಧಿಸೂಚನೆಯನ್ನು ಹೊರಡಿಸುವಲ್ಲಿ ವಿಫಲವಾದ ಸರ್ಕಾರಿ ಹಾಗೂ ಅರೆ ಸರ್ಕಾರಿ ಇಲಾಖೆಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ೩೭೧ (ಜೆ) ಅಡಿಯ ಮೀಸಲಾತಿಯಲ್ಲಿ ನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಆಗುತ್ತಿರುವ ಗೊಂದಲ ಹಾಗೂ ವಿಳಂಬವು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಮಾಹಿತಿ ನೀಡುವುದು;

(ಈ) ಸದರಿ ನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಗೊಂದಲ ಹಾಗೂ ವಿಳಂಬ ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು; ಇದನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸುವುದು? (ಸಂಪೂರ್ಣ ಮಾಹಿತಿ ನೀಡುವುದು)

## ೩೭೧ (ಜೆ) ಅನುಷ್ಠಾನಗೊಂಡ ನಂತರ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ವರ್ಗೀಕರಣದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೦೫೦ (೨೪೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಂವಿಧಾನದ ಕಲಂ ೩೭೧(ಜೆ) ಅನುಷ್ಠಾನಗೊಂಡ ನಂತರ ಇಲಾಖೆಯಲ್ಲಿರುವ ಹುದ್ದೆಗಳನ್ನು ಹೈದ್ರಾಬಾದ್-ಕರ್ನಾಟಕ ಭಾಗದವರಿಗಾಗಿ ಪ್ರತ್ಯೇಕವಾಗಿ ವಿಂಗಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದರೆ, ಜಿಲ್ಲಾವಾರು, ಇಲಾಖಾವಾರು, ವೃಂದವಾರು ವರ್ಗೀಕರಿಸಲಾದ ಹುದ್ದೆಗಳು ಸಂಪೂರ್ಣ ಮಾಹಿತಿ ನೀಡುವುದು;

(ಆ) ಸಂವಿಧಾನದ ಕಲಂ ೩೭೧(ಜೆ) ಪ್ರಕಾರ ಹುದ್ದೆಗಳನ್ನು ವರ್ಗೀಕರಿಸಿದ ನಂತರ ಹೈದ್ರಾಬಾದ್-ಕರ್ನಾಟಕದ ಆರು ಜಿಲ್ಲೆಗಳಲ್ಲಿನ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ

ಎಷ್ಟು; ನೇರ ನೇಮಕಾತಿಗಾಗಿ ಹಾಗೂ ಮುಂಬಡ್ತಿಗಾಗಿ ಮೀಸಲಿರಿಸಿದ ಹುದ್ದೆಗಳು ಎಷ್ಟು; (ಜಿಲ್ಲಾವಾರು, ಇಲಾಖಾವಾರು, ವೃಂದವಾರು ಹುದ್ದೆಗಳ ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಖಾಲಿ ಇರುವ ಹುದ್ದೆಗಳ ಭರ್ತಿಗಾಗಿ ಸರ್ಕಾರದ ಮುಂದಿರುವ ಕ್ರಮವೇನು? (ಮಾಹಿತಿ ನೀಡುವುದು)

## ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮವು ನಿರುದ್ಯೋಗಿ ವಿದ್ಯಾವಂತ ಯುವಕರಿಗೆ "ಆನ್‌ಲೈನ್ ನೋಂದಣಿ"ಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೦೫೧ (೨೪೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:--

(ಅ) ನಿರುದ್ಯೋಗಿ ಯುವಕರಿಗೆ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಡಿಯಲ್ಲಿ ಆನ್‌ಲೈನ್ ನೋಂದಣಿ ಮಾಡಲಾಗಿದೆಯೇ; ಇದ್ದರೆ, ಈ ಯೋಜನೆಯ ಸಂಪೂರ್ಣ ಮಾಹಿತಿ ನೀಡುವುದು;

(ಆ) ಸದರಿ ಆನ್‌ಲೈನ್ ನೋಂದಣಿಯಲ್ಲಿ ಹೈದ್ರಾಬಾದ್-ಕರ್ನಾಟಕ ಆರು ಜಿಲ್ಲೆಗಳು ಹಾಗೂ ಹರಪನಹಳ್ಳಿ ಸೇರಿದಂತೆ ನೋಂದಣಿ ಮಾಡಿದ ಪದವೀಧರರು ಹಾಗೂ ಪದವೀಧರೇತರರು ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ನೋಂದಣಿಯಲ್ಲಿ ಹೈದ್ರಾಬಾದ್-ಕರ್ನಾಟಕದ ಆರು ಜಿಲ್ಲೆಗಳು ಹಾಗೂ ಹರಪನಹಳ್ಳಿಯಲ್ಲಿ ನೋಂದಣಿ ಮಾಡಿಸಿದ ಜಾತಿವಾರು ಯುವಕರು ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ಜಾತಿವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಈ) ನೋಂದಣಿ ಮಾಡಿದ ಯುವಕರಿಗೆ ಇಲಾಖೆಯ ವತಿಯಿಂದ ಸಿಗುವ ಸೌಲಭ್ಯಗಳು ಯಾವುವು; ಹಾಗೂ ಉದ್ಯೋಗ ಅವಕಾಶಗಳು ಯಾವುವು; ವಿಶೇಷ ಆರ್ಥಿಕ ನೆರವು ನೀಡುವ ಯೋಜನೆ ಸರ್ಕಾರದ ಮುಂದಿದೆಯೇ? (ಮಾಹಿತಿ ನೀಡುವುದು)

## ರಾಯಚೂರು ಜಿಲ್ಲೆ ದೇವದುರ್ಗ ಪಟ್ಟಣದ ೨೪/೭ ಕುಡಿಯುವ ನೀರಿನ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೫೨ (೨೩೫೬) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆ ದೇವದುರ್ಗ ಪಟ್ಟಣಕ್ಕೆ ನೀರು ಪೂರೈಸುವ (೨೪/೭) ಕಾಮಗಾರಿ ಪೂರ್ಣಗೊಂಡಿದೆಯೇ; ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು;

(ಆ) ಈ ಕಾಮಗಾರಿಯಲ್ಲಿ ಪಟ್ಟಣಕ್ಕೆ ಸರಬರಾಜು ಮಾಡಲು Distribution line ಸೇರದೆ ಇರುವುದು ತಮ್ಮ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, Distribution line ಗೆ ಹಣ ಮಂಜೂರು ಮಾಡಿರುವುದು ಯಾವಾಗ?

## ಮಹಾನಗರ ಪಾಲಿಕೆಯ ಲೀಜ್ ಆಸ್ತಿಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೦೫೩ (೨೩೭೫) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಜಯಪುರ ಮಹಾನಗರ ಪಾಲಿಕೆಯ ಲೀಜ್ ಆಸ್ತಿಗಳು ಖರೀದಿ ಹಾಕಲು ಇರುವ ಮಾನದಂಡಗಳೇನು;

(ಆ) ವಿಜಯಪುರ ಮಹಾನಗರ ಪಾಲಿಕೆಯ ಲೀಜ್ ಆಸ್ತಿಗಳು ಬಹುತೇಕ ಖರೀದಿಗಳಾಗಿದ್ದು, ಉಳಿದ ಶೇಕಡಾ ೧೦ರಷ್ಟು ಖರೀದಿಯನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇವುಗಳನ್ನು ಯಾವ ಕಾಲಮಿತಿಯೊಳಗೆ ಖರೀದಿ ಹಾಕಲು ಸರ್ಕಾರವು ಅನುಮತಿ ನೀಡುವುದು? (ವಿವರವಾದ ಮಾಹಿತಿ ನೀಡುವುದು)

## ರಾಜ್ಯದ ವಿವಿಧ ಇಲಾಖೆಯಲ್ಲಿ ತಾತ್ಕಾಲಿಕವಾಗಿ ನೇಮಕಗೊಂಡಿರುವ ಇಂಜಿನಿಯರ್‌ಗಳ ಕುರಿತು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೦೫೪ (೨೩೨೬) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯಪಿಟ್ಟು ತಿಳಿಸುವರೆ:-

(ಅ) ರಾಜ್ಯದ ವಿವಿಧ ಇಲಾಖೆಗಳಲ್ಲಿ ತಾತ್ಕಾಲಿಕವಾಗಿ ನೇಮಕಗೊಂಡಂತಹ ಇಂಜಿನಿಯರ್‌ಗಳ ಸಂಖ್ಯೆ ಎಷ್ಟು; (ಇಲಾಖಾವಾರು ಮಾಹಿತಿ ಸಲ್ಲಿಸುವುದು)

(ಆ) ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ತಾತ್ಕಾಲಿಕವಾಗಿ ನೇಮಕಗೊಂಡಂತಹ ಅಭಿಯಂತರರು ಎಷ್ಟು;

(ಇ) ಸದರಿ ಅಭಿಯಂತರರುಗಳನ್ನು ಖಾಯಂ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ; ಇದ್ದರೆ, ಯಾವ ಕಾಲಮಿತಿಯ ಒಳಗೆ ಖಾಯಂಗೊಳಿಸಲಾಗುವುದು;

(ಈ) ಈ ತಾತ್ಕಾಲಿಕ ಅಭಿಯಂತರರುಗಳಿಗೆ ಸುಪ್ರೀಂ ಕೋರ್ಟ್ (ಉಮಾದೇವಿ ಪ್ರಕರಣ) ಆದೇಶದ ಪ್ರಕಾರ ಸಮಾನ ವೇತನ ನೀಡಲಾಗುತ್ತಿದೆಯೇ; ಇಲ್ಲದಿದ್ದರೆ ನೀಡದಿರಲು ಕಾರಣವೇನು;

(ಉ) ಸಮಾನ ಹುದ್ದೆ ಸಮಾನ ವೇತನ ಜಾರಿಗೆ ತರುವ ಉದ್ದೇಶ ಸರ್ಕಾರಕ್ಕಿದೆಯೇ; ಇದ್ದರೆ, ಯಾವ ಕಾಲಮಿತಿಯೊಳಗೆ ಜಾರಿಗೆ ತರಲಾಗುವುದು? (ವಿವರವಾದ ಮಾಹಿತಿ ನೀಡುವುದು)

## ವಿಜಯಪುರ ಮಹಾನಗರ ಪಾಲಿಕೆ ಹಗರಣದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್(ಯತ್ನಾಳ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೨೦೫೫ (೨೩೭೪) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆದಿರುವ ಹಗರಣ ಕುರಿತು ತನಿಖೆಗಾಗಿ ರಾಜ್ಯ ಮಟ್ಟದ ಅಧಿಕಾರಿಗಳನ್ನು ಕಳುಹಿಸಲು ಆದೇಶಿಸಲಾಗಿದ್ದರೂ, ಈವರೆಗೂ ಯಾವುದೇ ತನಿಖೆ ನಡೆಯದಿರುವುದಕ್ಕೆ ಕಾರಣವೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ವಿಷಯವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ತನಿಖೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ವಿವಿಧ ಇಲಾಖೆಗಳಲ್ಲಿ ಉಪಯೋಗಕ್ಕೆ ಬಾರದೇ ಇರುವ ವಾಹನಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್(ಯತ್ನಾಳ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೨೦೫೬ (೨೩೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿವಿಧ ಇಲಾಖೆಗಳಲ್ಲಿ ಉಪಯೋಗಕ್ಕೆ ಬಾರದೇ, ವಿವಿಧ ಪ್ರಕರಣಗಳಲ್ಲಿ ಸರ್ಕಾರದ ವಶದಲ್ಲಿರುವ ವಾಹನಗಳ ಸಂಖ್ಯೆ ಎಷ್ಟು ಪ್ರಸ್ತುತ ಸುಸ್ಥಿತಿಯಲ್ಲಿ ಲಭ್ಯವಿರುವ ವಾಹನಗಳ ಸಂಖ್ಯೆ ಎಷ್ಟು ; ಹಾಗೂ ದುರಸ್ಥಿತಿಯಲ್ಲಿರುವ ವಾಹನಗಳ ಸಂಖ್ಯೆ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ಹಲವಾರು ವರ್ಷಗಳಿಂದ ಈ ವಾಹನಗಳನ್ನು ಉಪಯೋಗಿಸದೇ ತುಕ್ಕು ಹಿಡಿದು ಕೊಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ವಾಹನಗಳನ್ನು ಸುಸ್ಥಿತಿಗೆ ತರಲು ಸರ್ಕಾರವು ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಇವುಗಳನ್ನು ಹರಾಜು ಮಾಡಿ ಸರಕಾರಕ್ಕೆ ಮೊತ್ತವನ್ನು ಜವಾ ಮಾಡುವುದಾಗಲೀ ಅಥವಾ ಅಂತಹ ಬೆಲೆಬಾಳುವ ವಾಹನಗಳನ್ನು ಉಪಯೋಗಿಸಿಕೊಳ್ಳುವಂತಹ ಯೋಜನೆ ಸರ್ಕಾರಕ್ಕಿದೆಯೇ ? (ವಿವರವಾದ ಮಾಹಿತಿ ನೀಡುವುದು)

## ಭ್ರಷ್ಟಾಚಾರ ನಿಗ್ರಹದಳ ಸ್ಥಾಪನೆಯಾದಾಗಿನಿಂದ ಭ್ರಷ್ಟ ಅಧಿಕಾರಿ ವಿರುದ್ಧ ನಡೆಸಿರುವ ದಾಳಿಗಳ ಬಗ್ಗೆ

**ಶ್ರೀಮತಿ ತಾರಾ ಅನುರಾಧ (ನಾಮನಿರ್ದೇಶನ) :–**

೨೦೫೭ (೨೩೪೭.) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ: -

(ಅ) ರಾಜ್ಯದಲ್ಲಿ ಭ್ರಷ್ಟಾಚಾರ ನಿಗ್ರಹ ದಳ ಸ್ಥಾಪನೆಯಾದಾಗಿನಿಂದ ಭ್ರಷ್ಟ ಅಧಿಕಾರಿಗಳ ವಿರುದ್ಧ ನಡೆಸಿರುವ ದಾಳಿಗಳೆಷ್ಟು ; ಒಟ್ಟು ಎಷ್ಟು ಅಧಿಕಾರಿಗಳ ವಿರುದ್ಧ ದಾಳಿ ನಡೆದಿವೆ ; ಅವುಗಳ ವಿವರ ನೀಡುವುದು)

(ಆ) ದಾಳಿಯ ಸಂದರ್ಭದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಂದ ವಶಪಡಿಸಿಕೊಂಡ ವಸ್ತು ಅಥವಾ ದಾಖಲೆಗಳೇನು ;

(ಇ) ದಾಳಿ ಪ್ರಕರಣಗಳು ಈಗ ಯಾವ ಹಂತದಲ್ಲಿವೆ ?

## ಇಲಾಖೆಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೫೮ (೨೪೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಇಲಾಖೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; (ಇಲಾಖಾವಾರು ವರ್ಷವಾರು ಮಾಹಿತಿ ನೀಡುವುದು)

(ಆ) ಆ ಪೈಕಿ ಖರ್ಚಾದ ಮೊತ್ತ ಎಷ್ಟು ; ಬಾಕಿ ಉಳಿದಿರುವ ಮೊತ್ತ ಎಷ್ಟು ? (ಇಲಾಖಾವಾರು ವರ್ಷವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು)

## ಮೀಸಲು ಬಡ್ತಿ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೦೫೯ (೨೪೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸುಪ್ರೀಂ ಕೋರ್ಟ್ ನಿರ್ದೇಶನದಂತೆ ರಾಜ್ಯದಲ್ಲಿ ಎಷ್ಟು ಜನ ಅಧಿಕಾರಿಗಳು ಮೀಸಲು ಬಡ್ತಿ ಕಳೆದುಕೊಳ್ಳುವ ಸಂದರ್ಭ ಎದುರಾಗಿದೆ ; (ವೃಂದಾವಾರು ಮಾಹಿತಿ ನೀಡುವುದು)

(ಆ) ಮೀಸಲು ಬಡ್ತಿಯ ವಿಚಾರದಲ್ಲಿ ಹಿರಿಯ ಅಧಿಕಾರಿಗಳು ನಿಯಮಗಳನ್ನು ಪಾಲಿಸಿಲ್ಲ ಎಂಬುದು ನಿಜವೇ ; ಹಾಗಿದ್ದಲ್ಲಿ, ಕಾರಣಗಳೇನು ;

(ಇ) ಜ್ಯೇಷ್ಠತೆ ಇದ್ದರೂ ಕಳೆದ ೨ ವರ್ಷಗಳಲ್ಲಿ ಸಾವಿರಾರು ಅಧಿಕಾರಿ ವೃಂದದವರು ಸರ್ಕಾರ ಮಾಡಿದ ತಪ್ಪಿನಿಂದ ಬಡ್ತಿ ಇಲ್ಲದೆ ನಿವೃತ್ತಿ ಹೊಂದಿದ ಅಧಿಕಾರಿಗಳ ಸಂಖ್ಯೆ ಎಷ್ಟು ; ಸದರಿ ವಿಷಯದಲ್ಲಿ ಯಾರೋ ಮಾಡಿದ ತಪ್ಪಿಗೆ ಬಡ್ತಿಯಿಂದ ವಂಚಿತರಾದವರಿಗೆ ಸರ್ಕಾರ ಸರಿಪಡಿಸಲು ಕ್ರಮ ಕೈಗೊಳ್ಳುವುದೇ ;

(ಈ) ಬಡ್ತಿ ಮೀಸಲು ನೀಡುವಾಗ ಕೋರ್ಟ್ ಆದೇಶ ಪಾಲನೆ ಮಾಡದೇ ಇದ್ದುದರಿಂದ ಸಾಮಾನ್ಯ ವರ್ಗದವರಿಗೂ ಅನ್ಯಾಯವಾದದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಉ) ಸಂಸತ್ತಿನಲ್ಲಿ ೨೦೦೧ ರಿಂದ ಕಾನೂನು ತಿದ್ದುಪಡಿ ತಂದ ನಂತರ ಬಡ್ತಿಯಲ್ಲಿ ಮೀಸಲು ಕೊಡುವ ವಿಚಾರದಲ್ಲಿಯ ಮುಖ್ಯಾಂಶಗಳೇನು ; ಇದರಲ್ಲಿ ನಿಯಮ ಉಲ್ಲಂಘಿಸಿದ್ದಕ್ಕೆ ಕಾರಣಗಳೇನು ; ಕಾರಣವಾದವರ ಮೇಲೆ ಕ್ರಮ ಕೈಗೊಳ್ಳಲಾಗುವುದೇ ?

## ಬೆಂಗಳೂರು ಮೆಟ್ರೋ ರೈಲು ನಿಗಮದ ನೌಕರರ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೨೦೬೦ (೨೪೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ (B.M.R.C.L)ದಲ್ಲಿ ಹಾಲಿ ಕೆಲಸ ನಿರ್ವಹಿಸುತ್ತಿರುವ ಖಾಯಂ ಉದ್ಯೋಗಿಗಳು ಎಷ್ಟು ; (ಉದ್ಯೋಗಿ ಹೆಸರು, ಹುದ್ದೆ, ವೃಂದವಾರು ಜ್ಯೇಷ್ಠತಾ ಪಟ್ಟಿಯೊಡನೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನೌಕರರ ಮುಂಬಡ್ತಿಗೆ ಆಂತರಿಕ ಸ್ಪರ್ಧಾತ್ಮಕ ಪರೀಕ್ಷೆ ಇಟ್ಟಿರುವುದು ಕೆ.ಸಿ.ಎಸ್.ಆರ್. ನಿಯಮಗಳಿಗೆ ಅನುಸಾರವಾಗಿದೆಯೇ ; (ವಿವರವಾದ ಮಾಹಿತಿ ಕೊಡುವುದು)

(ಇ) ಬೆಂಗಳೂರು ಮೆಟ್ರೋ ರೈಲು ನಿಗಮದ ಸಂಸ್ಥೆಯು ನೇಮಕಾತಿಗೆ ಕರ್ನಾಟಕ ಸರ್ಕಾರದ ಮೀಸಲಾತಿ ನಿಯಮಗಳನ್ನು ಮಾತ್ರ ಪಾಲಿಸಿ ಮುಂಬಡ್ತಿಗೆ ನಿಯಮಗಳನ್ನು ಪಾಲಿಸದಿರಲು ಕಾರಣಗಳೇನು ;

(ಈ) ಸರ್ಕಾರ ಹಾಗೂ ಸರ್ಕಾರದ ಇತರೆ ನಿಗಮಗಳು ಮುಂಬಡ್ತಿಗೆ ಜ್ಯೇಷ್ಠತೆಯನ್ನು ಪಾಲಿಸುವಾಗ ಬೆಂಗಳೂರು ಮೆಟ್ರೋ ರೈಲು ನಿಗಮದ ಸಂಸ್ಥೆಯವರು ಪರೀಕ್ಷೆ ಇಟ್ಟು pick And choose ಮಾರ್ಗ ಅನುಸರಿಸುತ್ತಿರುವುದು ಸರಿಯೇ ;

(ಉ) ಈ ತಾರತಮ್ಯವನ್ನು ಸರ್ಕಾರ ಯಾವ ಕಾಲಮಿತಿಯೊಳಗೆ ಬಗೆಹರಿಸುವುದು ?

## ನಗರಾಭಿವೃದ್ಧಿ ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಪ್ರಸ್ತಾವನೆ ಪ್ರಗತಿಯ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೨೦೬೧ (೨೦೧೬ಬಿ) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನಗರಾಭಿವೃದ್ಧಿ ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಪ್ರಸ್ತಾವನೆಯನ್ನು ೬ ತಿಂಗಳುಗಳಲ್ಲಿ ಅಂತಿಮಗೊಳಿಸುವುದಾಗಿ ಈ ಹಿಂದೆ ನಡೆದ ಅಧಿವೇಶನದಲ್ಲಿ ದಿನಾಂಕ: ೧೮-೦೨-೨೦೧೪ರಂದು ಲಿಖಿತ ಉತ್ತರ ಹೇಳಿಕೆಯನ್ನು ನೀಡಲಾಗಿತ್ತು. ಆದರೆ ಈವರೆಗೂ ಪ್ರಸ್ತಾವನೆಯನ್ನು ಅಂತಿಮಗೊಳಿಸದಿರಲು ಕಾರಣಗಳೇನು ;

(ಆ) ನಿಯಮಗಳ ತಿದ್ದುಪಡಿ ಪ್ರಕ್ರಿಯೆ ಯಾವಾಗ ಅಂತಿಮಗೊಳಿಸಲಾಗುವುದು ; ಅಂತಿಮಗೊಳಿಸಲು ಇನ್ನೂ ಎಷ್ಟು ಕಾಲಾವಕಾಶಬೇಕು ; ತಕ್ಷಣ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ ?

## ಹೈದರಾಬಾದ್-ಕರ್ನಾಟಕ ಪ್ರದೇಶಗಳಲ್ಲಿ ಹುದ್ದೆಗಳನ್ನು ತುಂಬುವ ಬಗ್ಗೆ

**ಶ್ರೀ ಎನ್.ಎಸ್.ಬೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೬೨ (೨೪೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹೈದರಾಬಾದ್-ಕರ್ನಾಟಕ ಪ್ರದೇಶದಲ್ಲಿ ವಿಶೇಷ ಸ್ಥಾನಮಾನ ಅನ್ವಯ ೨೦೧೩ರಿಂದ ಇಲ್ಲಿಯವರೆಗೂ ಭರ್ತಿ ಮಾಡಿದ ಹುದ್ದೆಗಳೆಷ್ಟು ;

(ಆ) ಹೈದರಾಬಾದ್-ಕರ್ನಾಟಕ ಪ್ರದೇಶದಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ;

## ಪತ್ರಕರ್ತರಿಗೆ ಆರೋಗ್ಯ ಭಾಗ್ಯ ಯೋಜನೆ ಬಗ್ಗೆ

**ಶ್ರೀ ಎನ್.ಎಸ್.ಬೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೬೩ (೨೪೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪತ್ರಕರ್ತರಿಗೆ ಘೋಷಣೆ ಮಾಡಿದ ಆರೋಗ್ಯ ಭಾಗ್ಯ ಯೋಜನೆ ಜಾರಿಗೆ ಬಂದಿದೆಯೇ ;

(ಆ) ಜಾರಿಗೆ ಬಂದಿದ್ದರೆ, ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳು ಈ ಯೋಜನೆಯು ಉಪಯೋಗ ಪಡೆದಿರುತ್ತಾರೆ ;

(ಇ) ಪತ್ರಕರ್ತರಿಗೆ ನಿವೃತ್ತಿ ಮಾಶಾಸನ ಪಡೆಯಲು ಮಾನದಂಡ ಸರಳೀಕರಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು ;

(ಈ) ಜಿಲ್ಲಾ ಹಾಗೂ ಪ್ರಾದೇಶಿಕ ಪತ್ರಿಕೆಗಳಲ್ಲಿ ಸರ್ಕಾರದ ವಿವಿಧ ಯೋಜನೆಗಳನ್ನು ಪ್ರಚಾರ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮ ಏನು ?

## ರಾಜ್ಯದಲ್ಲಿ ಸಕಾಲ ಯೋಜನೆ ಜಾರಿಗೆ ತಂದಿದ್ದರೂ ತನ್ನ ಉದ್ದೇಶವನ್ನು ಈಡೇರಿಸುವಲ್ಲಿ ವಿಫಲವಾಗಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್** (ಶಿಕ್ಷಕರ ಕ್ಷೇತ್ರ) :-

೨೦೬೪ (೨೪೨೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರದಿಂದ ನಾಗರೀಕರಿಗೆ ಸಿಗಬೇಕಾದ ಸೇವೆ ಮತ್ತು ಸೌಲಭ್ಯಗಳನ್ನು ನಿಗಧಿತ ಸಮಯಕ್ಕೆ ತಲುಪಿಸುವ ಉದ್ದೇಶದಿಂದ ಸಕಾಲ ಯೋಜನೆ ಜಾರಿಗೆ ತಂದಿದ್ದರೂ ತನ್ನ ಉದ್ದೇಶಗಳನ್ನು ಈಡೇರಿಸುವಲ್ಲಿ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರಿ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಹಾಗೂ ಅಧಿಕಾರಿಗಳ ವಿಳಂಬ ಧೋರಣೆಯಿಂದ ನಾಗರೀಕರು ಅರ್ಜಿ ಸಲ್ಲಿಸಿ ಹತ್ತಾರು ತಿಂಗಳಾದರೂ ಮಾಹಿತಿ ದೊರೆಯುತ್ತಿಲ್ಲವೆಂದು ಮಾಧ್ಯಮಗಳಲ್ಲಿ ಪ್ರಕಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಯೋಜನೆ ಆರಂಭದಿಂದ ೨೦೧೫ರವರೆಗೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು ೨೦೧೬–೧೭ರವರೆಗೆ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಈ) ಸಕಾಲದಲ್ಲಿ ಸಲ್ಲಿಕೆಯಾಗುವ ಅರ್ಜಿಗಳ ವಿಲೇವಾರಿ ಮಾಡುವ ಪ್ರಕ್ರಿಯೆಯಲ್ಲಿ ವಿಳಂಬವಾದಾಗ ಕಟ್ಟಬೇಕಾದ ದಂಡದಿಂದ ಈವರೆಗೆ ಜಮೆ ಆದ ಮೊತ್ತವೆಷ್ಟು ;

(ಉ) ಈ ಮಹತ್ವದ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರ ಏನು ಕ್ರಮ ಕೈಗೊಳ್ಳುವುದು ?

## ಬೆಂಗಳೂರು ರೈಲು ನಿಲ್ದಾಣ, ಬಸ್ ನಿಲ್ದಾಣ ಹಾಗೂ ವಾಣಿಜ್ಯ ಸಂಕೀರ್ಣಗಳ ಮುಂದೆ ಪ್ರೀ–ಪೇಡ್ ಆಟೋ ಸ್ಟ್ಯಾಂಡ್ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೦೬೫ (೨೪೨೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ರೈಲು ನಿಲ್ದಾಣ, ಬಸ್ ನಿಲ್ದಾಣ ಹಾಗೂ ವಾಣಿಜ್ಯ ಸಂಕೀರ್ಣಗಳ ಮುಂದೆ ಜನರ ಸಂಚಾರ ಒತ್ತಡ ಹೆಚ್ಚಾಗಿದ್ದು ಸಾರ್ವಜನಿಕರು ತಮ್ಮ ಸಂಚಾರಕ್ಕೆ ಆಟೋ ರಿಕ್ಷಾವನ್ನು ಅವಲಂಭಿಸಿದ್ದು, ಸಂಚಾರಿ ಪೊಲೀಸರು ಇದ್ದರೂ ಪ್ರಯಾಣಿಕರು ಹೋಗುವ ಸ್ಥಳಕ್ಕೆ ಅವರು ಹೋಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಎಲ್ಲಾ ಸ್ಥಳಗಳಲ್ಲಿ ಪ್ರೀ–ಪೇಡ್ ಆಟೋ ಸ್ಟ್ಯಾಂಡ್ ಇದ್ದರೂ ಹೆಚ್ಚಿನ ರಿಕ್ಷಾಗಳು ಪ್ರೀ–ಪೇಡ್ ಲೈನ್‌ನಲ್ಲಿ ಬಾರದೇ ಹೊರಗಿನಿಂದಲೇ ಸಾರ್ವಜನಿಕರನ್ನು ಕರೆದುಕೊಂಡು ಹೆಚ್ಚಿನ ಹಣ ವಸೂಲಾತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮಳೆಗಾಲದ ದಿನಗಳಲ್ಲಿ ವಿಶೇಷವಾಗಿ ಸಾಯಂಕಾಲದ ಸಮಯದಲ್ಲಿ ಸಾರ್ವಜನಿಕರು ವಿಶೇಷವಾಗಿ ವಯೋವೃದ್ಧರು, ಮಹಿಳೆಯರು ಮತ್ತು ಮಕ್ಕಳು ತಮ್ಮ ಸ್ಥಳವನ್ನು ತಲುಪಲು ಆಟೋ ರಿಕ್ಷಗಳ ಈ ಧೋರಣೆಯಿಂದ ಪರದಾಟ ಮಾಡುತ್ತಿದ್ದು, ಇದನ್ನು ತಪ್ಪಿಸಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ; ನಿಯಂತ್ರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಕೇಂದ್ರ ಪುರಸ್ಕೃತ ಅಟಲ್‌ನಗರ ಪರಿವರ್ತನಾ ಪುನರಜ್ಜೀವನ ಯೋಜನೆಯ ಅನುಷ್ಠಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೦೬೬ (೨೩೮೪) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಪುರಸ್ಕೃತ ಅಟಲ್ ನಗರ ಪರಿವರ್ತನಾ ಪುನರಜ್ಜೀವನ ಯೋಜನೆ (ಅಮೃತ್)ನ್ನು ರಾಜ್ಯದಲ್ಲಿ ಎಂದಿನಿಂದ ಅನುಷ್ಠಾನಗೊಳಿಸಲಾಗಿದೆ ; ಈ ಯೋಜನೆಯ ವಿವರಗಳನ್ನು ನೀಡುವುದು ;

(ಆ) ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿರುವ ನಗರಗಳು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಯೋಜನೆಯ ಅನುಷ್ಠಾನದಲ್ಲಿ ಕೇಂದ್ರ ಮತ್ತು ರಾಜ್ಯಗಳ ಪಾತ್ರವೇನು ; (ಯೋಜನೆಯ ಆರ್ಥಿಕ ನಿರ್ವಹಣೆ ಹಾಗೂ ಅನುಷ್ಠಾನ)

(ಈ) ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಈ ಯೋಜನೆಯ ಅನುಷ್ಠಾನದಲ್ಲಿ ಅನಗತ್ಯ ವಿಳಂಬವಾಗುತ್ತಿರಲು ಕಾರಣವೇನು?

## ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಮಾಹಿತಿ ತಂತ್ರಜ್ಞಾನ ಅಳವಡಿಸಿ ಪೇಪರ್‌ಲೆಸ್ ಆಫೀಸ್ ಮಾಡುವ ಪ್ರಕ್ರಿಯೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೨೦೬೭ (೨೩೮೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಮಾಹಿತಿ ತಂತ್ರಜ್ಞಾನ ಅಳವಡಿಸಿ ಪೇಪರ್ ಲೆಸ್ ಆಫೀಸ್ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆಯೇ ;

(ಆ) ಯಾವ ಯಾವ ಇಲಾಖೆಗಳಲ್ಲಿ ಈ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ ; ಹಾಗೂ ಈ ಕಾರ್ಯಕ್ರಮಗಳು ಯಾವ ಹಂತಕ್ಕೆ ತಲುಪಿವೆ ;

(ಇ) ಗ್ರಾಮೀಣ ಪ್ರದೇಶದಲ್ಲಿ ಜನಸಾಮಾನ್ಯರಿಗೆ ಅವಶ್ಯವಿರುವ ಪಡಿತರ ಚೀಟಿ, ಪಹಣಿ ಪತ್ರ, ವಾಸ್ತವ್ಯ ಧೃಢೀಕರಣ ಪತ್ರ, ಆದಾಯ ಧೃಢೀಕರಣ ಪತ್ರ ಈ ರೀತಿಯ ಹತ್ತು ಹಲವಾರು ಧೃಢೀಕರಣ ಪತ್ರಗಳು ದೈನಂದಿನ ಚಟುವಟಿಕೆಗಳಿಗೆ ಅವಶ್ಯವಿರುವುದರಿಂದ ಸರ್ಕಾರ ಈ ದಾಖಲಾತಿಗಳನ್ನು ನೀಡಲು ಸರಳೀಕರಣಗೊಳಿಸಿ ಜನರಿಗೆ ಅನುಕೂಲ ಮಾಡಲು ಯಾವ ಕಾರ್ಯಕ್ರಮ ಕೈಗೊಳ್ಳಲಾಗಿದೆ ?

## ಬಿಬಿಎಂಪಿ ವ್ಯಾಪ್ತಿಯಲ್ಲಿ ಟೆಂಡರ್ ಸ್ಯೂರ್ ಯೋಜನೆ ಅನುಷ್ಠಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೨೦೬೮ (೨೩೮೫) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:-

(ಅ) ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಟೆಂಡರ್ ಶ್ಯೂರ್ ಯೋಜನೆ ಅಡಿಯಲ್ಲಿ ಎಷ್ಟು ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗಿದೆ ;

(ಆ) ಈ ರಸ್ತೆ ನಿರ್ಮಾಣಕ್ಕಾಗಿ ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ಟೆಂಡರ್ ಶ್ಯೂರ್ ಶೀರ್ಷಿಕೆ ಯೋಜನೆಯ ವ್ಯಾಪ್ತಿಯಲ್ಲಿ ಈ ವರ್ಷ ತೆಗೆದುಕೊಳ್ಳಲಾಗುವ ರಸ್ತೆಗಳು ಯಾವುವು ; (ವಿವರ ನೀಡುವುದು)

(ಈ) ಈ ಯೋಜನೆ ಅಡಿಯಲ್ಲಿ ಪ್ರತಿ ಕಿಲೋಮೀಟರ್‌ಗೆ ತಗಲುವ ವೆಚ್ಚ ಎಷ್ಟು ;

(ಉ) ಈ ಯೋಜನೆಯ ರಸ್ತೆ ಹಾಗೂ ರಸ್ತೆಯಲ್ಲಿ ನೆಡುವ ಗಿಡಮರಗಳ ನಿರ್ವಹಣೆ ಮಾಡಲು ಯಾರಿಗೆ ವಹಿಸಲಾಗಿದೆ ?

## ಇಲಾಖಾ ಯೋಜನೆಗಳ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ)** :–

೨೦೬೯ (೨೪೦೭೭) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕೌಶಲ್ಯಾಭಿವೃದ್ಧಿ ಉದ್ಯಮ ಶೀಲತೆ, ಮತ್ತು ಜೀವನೋಪಾಯ ಇಲಾಖೆಯಡಿ ಹಾಲಿ ಜಾರಿ ಇರುವ ಯೋಜನೆಗಳಾವುವು ; ಇವುಗಳಿಗೆ ಕಳೆದ ೩ ವರ್ಷಗಳಿಂದ ಎಷ್ಟು ಹಣ ಖರ್ಚು ಮಾಡಲಾಗಿದೆ ; (ವಿವರವಾಗಿ ಯೋಜನೆವಾರು ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಗೆ ಕಳೆದ ೩ ವರ್ಷಗಳಿಂದ ಕೇಂದ್ರ ಸರ್ಕಾರದಿಂದ ಎಷ್ಟು ಹಣ ಬಂದಿದೆ ; ಇದನ್ನು ಯಾವ ಯಾವ ಯೋಜನೆಗಳಿಗೆ ವಿನಿಯೋಗಿಸಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಈ ಇಲಾಖೆಯಡಿ ಕೆಲಸ ನಿರ್ವಹಿಸುತ್ತಿರುವ ನೌಕರರು ಎಷ್ಟು ; (ವಿವರವಾಗಿ ನೌಕರರ ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ ಪಡೆಯುತ್ತಿರುವ ತಿಂಗಳ ವೇತನ ಸಹಿತ ಮಾಹಿತಿ ನೀಡುವುದು)

(ಈ) ಸಮಾಲೋಚನಾ ಶುಲ್ಕ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ನೌಕರರು ಎಷ್ಟು ; (ವಿವರವಾಗಿ ಹುದ್ದೆಯ ಪದನಾಮ, ಪಡೆಯುತ್ತಿರುವ ಸಮಾಲೋಚನಾ ಶುಲ್ಕದೊಂದಿಗೆ ಮಾಹಿತಿ ನೀಡುವುದು)

(ಉ) ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಯಾವ ಯಾವ ಸಂಸ್ಥೆಗಳಿಗೆ ಎಷ್ಟು ಹಣ ನೀಡಲಾಗಿದೆ? (ಸಂಸ್ಥೆವಾರು ವಿವರವಾದ ಮಾಹಿತಿ ಕೊಡುವುದು)

## ಖಾಲಿಯಿರುವ ಪೌರಕಾರ್ಮಿಕರ ಹುದ್ದೆಗಳನ್ನು ಭರ್ತಿಮಾಡುವ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):-**

೨೦೭೦ (೨೪೦೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ ಪೌರಕಾರ್ಮಿಕರ ಹುದ್ದೆಗಳೆಷ್ಟು ; ದಿನಾಂಕ: ೦೧-೦೭-೨೦೧೪ ರಂದು ಎಷ್ಟು ಹುದ್ದೆಗಳನ್ನು ತುಂಬಲು ಅರ್ಜಿ ಕರೆಯಲಾಗಿತ್ತು ;

(ಆ) ಇಲಾಖೆಗೆ ಬಂದ ಅರ್ಜಿಗಳು ಎಷ್ಟು ; ಇವುಗಳಿಂದ ಬಂದ ಅರ್ಜಿ ಶುಲ್ಕವೆಷ್ಟು ; ಎಸ್.ಸಿ., ಎಸ್.ಟಿ., ಇತರೆಗಳೊಂದಿಗೆ ವಿವರವಾದ ಮಾಹಿತಿ ಕೊಡುವುದು ;

(ಇ) ಹಾಲಿ ಕೆಲಸ ನಿರ್ವಹಿಸುತ್ತಿರುವ ಪೌರ ಕಾರ್ಮಿಕರನ್ನು ಖಾಯಂ ಮಾಡುವಂತೆ ಮಾನ್ಯ ಉಚ್ಚನ್ಯಾಯಾಲಯದಿಂದ ಆದೇಶ ಬಂದಿರುವುದೇ ; ನಿಜವೇ ; ಹಾಗಾದರೆ ನ್ಯಾಯಾಲಯದ ಪ್ರತಿ ನೀಡುವುದು ;

(ಈ) ಸದರಿ ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿದೆಯೇ ; ಸ್ಥಗಿತಗೊಳಿಸಲಾಗಿದ್ದರೆ, ಅರ್ಜಿ ಸಲ್ಲಿಸಿ ಅಭ್ಯರ್ಥಿಗಳಿಗೆ ಅವರು ತುಂಬಿದ ಅರ್ಜಿ ಶುಲ್ಕವನ್ನು ಯಾವ ರೀತಿ ಮತ್ತು ಯಾವಾಗ ಹಿಂದಿರುಗಿಸಲಾಗುವುದು ? (ವಿವರವಾದ ಮಾಹಿತಿ ನೀಡುವುದು)

## ಪಾಲಿಕೆಯಲ್ಲಿ ಖಾಲಿಯಿರುವ ಹುದ್ದೆಗಳ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ :-**

೨೦೭೧ (೨೪೦೮) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ವಿವಿಧ ಮಹಾನಗರ ಪಾಲಿಕೆ ಹಾಗೂ ನಗರ ಪಾಲಿಕೆಗಳಲ್ಲಿ ಖಾಲಿಯಿರುವ ಕಂಪ್ಯೂಟರ್ ಆಪರೇಟರ್ ಹಾಗೂ 'ಡಿ' ವರ್ಗದ ನೌಕರರ ಹುದ್ದೆಗಳೆಷ್ಟು ;

(ಆ) ಈ ಹುದ್ದೆಗಳ ನೇಮಕಾತಿ ಮಾಡಲು ಸರ್ಕಾರ ಉದ್ದೇಶಿಸಿದೆಯೇ ; ಉದ್ದೇಶಿಸಿದ್ದರೆ, ಯಾವ ಕಾಲಮಿತಿಯೊಳಗೆ ನೇಮಕಾತಿ ಮಾಡಲಾಗುವುದು ;

(ಇ) ಹಾಗಿದ್ದಲ್ಲಿ, ಈ ಹುದ್ದೆಗಳ ನೇಮಕಾತಿಗೆ ನಿಗದಿಪಡಿಸಿದ ವಿದ್ಯಾರ್ಹತೆಗಳೇನು ; ದಾವಣಗೆರೆ ಮಹಾನಗರ ಪಾಲಿಕೆಯಲ್ಲಿ ಖಾಲಿ ಇರುವ ಕಂಪ್ಯೂಟರ್ ಆಪರೇಟರ್ ಹಾಗೂ 'ಡಿ' ವರ್ಗದ ನೌಕರರ ಹುದ್ದೆಗಳೆಷ್ಟು ;

(ಈ) ಈ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಯೋಜನೆಗಳ ಪ್ರಚಾರ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):-**

೨೦೭೨ (೨೪೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಡಿ ಹಾಲಿ ಜಾರಿ ಇರುವ ಯೋಜನೆಗಳಾವುವು ; ಇವುಗಳಿಗೆ ಕಳೆದ ೩ ವರ್ಷಗಳಿಂದ ಎಷ್ಟು ಹಣ ಖರ್ಚು ಮಾಡಲಾಗಿದೆ ; (ವಿವರವಾಗಿ ಯೋಜನೆವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಸದರಿ ಇಲಾಖೆಯ ಅಧೀನದಲ್ಲಿ ಎಷ್ಟು ವಿನಯಿಲ್‌ಗಳು ಇವೆ ; ಇವುಗಳನ್ನು ಯಾವಾಗ ನಿರ್ಮಿಸಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸರ್ಕಾರದ ಯೋಜನೆಗಳ ಪ್ರಚಾರಕ್ಕಾಗಿ ೨೦೧೬-೧೭ ನೇ ಸಾಲಿನಲ್ಲಿ ಖರ್ಚು ಮಾಡಲಾಗಿರುವ ಹಣವೆಷ್ಟು ; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

## ಅಕ್ರಮ ಕಟ್ಟಡಗಳ ನಿರ್ಮಾಣದ ವಿರುದ್ಧ ಕ್ರಮ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೦೭೩ (೨೪೦೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಂಜೂರಾದ ಪ್ಲಾನ್ ಮತ್ತು ನಕ್ಷೆಯನ್ನು ಉಲ್ಲಂಘಿಸಿ ಕಟ್ಟಡ ನಿರ್ಮಾಣ ಮಾಡಿರುವ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಿ ಕ್ರಮ ಕೈಗೊಳ್ಳಲಾಗಿದೆ ; (ಕಳೆದ ೩ ವರ್ಷಗಳ ಮಾಹಿತಿ ನೀಡುವುದು)

(ಆ) ಸಾರ್ವಜನಿಕರಿಂದ ಮತ್ತು ಅಕ್ಕ ಪಕ್ಕದ ಮನೆ ಮಾಲೀಕರಿಂದ ಬಂದಿರುವ ದೂರುಗಳ ಸಂಖ್ಯೆ ಎಷ್ಟು; ಈ ಬಗ್ಗೆ ಪರಿಶೀಲಿಸಿ ಸಂಬಂಧಪಟ್ಟ ಅಧಿಕಾರಿಗಳು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಮಂಜೂರಾದ ನಕ್ಷೆ ಉಲ್ಲಂಘಿಸಿ ಕಾನೂನು ಬಾಹಿರವಾಗಿ ಕಟ್ಟಡ ನಿರ್ಮಾಣ ಮಾಡುತ್ತಿದ್ದರೂ ಕ್ರಮ ಕೈಗೊಳ್ಳದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ಕಳೆದ ೩ ವರ್ಷಗಳ ವಿವರ ನೀಡುವುದು)

## ಸಂಚಾರ ನಿಯಮ ಪಾಲನೆಗೆ ಕ್ರಮ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೦೭೪ (೨೪೦೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇತ್ತೀಚೆಗೆ ಎಲ್ಲಾ ಕಡೆಗಳಲ್ಲಿ ಸಂಚಾರ ನಿಯಮ ಉಲ್ಲಂಘನೆ ಹೆಚ್ಚಾಗಿದ್ದು ಅದರಲ್ಲೂ ಪ್ರಮುಖವಾಗಿ ಸಿಗ್ನಲ್ ಜಂಪಿಂಗ್ ಹೆಚ್ಚಾಗಿದ್ದು, ಇದನ್ನು ತಡೆಗಟ್ಟಲು ಪೊಲೀಸರು ಕಠಿಣ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಆ) ಸಿಗ್ನಲ್ ಜಂಪಿಂಗ್‌ನಿಂದ ಅಪಘಾತಗಳು ಹೆಚ್ಚಾಗುವುದರಿಂದ ಇದಕ್ಕಾಗಿ ವಿಶೇಷ ಡ್ರೈವ್ ಮಾಡಿ ಜನರಲ್ಲಿ ಜಾಗೃತಿ ಮೂಡಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದೇ ;

(ಇ) ಎಲ್ಲ ಪ್ರಮುಖ ಸರ್ಕಲ್‌ಗಳಲ್ಲಿ ಮತ್ತು ರಸ್ತೆಗಳಲ್ಲಿ ಮಫ್ತಿಯಲ್ಲಿ ಅಥವಾ ಮರೆಯಲ್ಲಿ ನಿಂತು ಸಿಗ್ನಲ್ ಜಂಪ್ ಮಾಡುವವರನ್ನು ಹಿಡಿದು ದಂಡ ಹಾಕಿ ಕಟ್ಟುನಿಟ್ಟಾದ ಕ್ರಮ ಕೈಗೊಳ್ಳಲಾಗುವುದೇ ?

## ಹಾಸನ ಜಿಲ್ಲಾ ಕೇಂದ್ರ ಕಾರಾಗೃಹದ ಸಿಬ್ಬಂದಿ ಮತ್ತು ಖೈದಿಗಳ ವಿವರ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೦೭೫ (೨೩೬೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲಾ ಕೇಂದ್ರ ಕಾರಾಗೃಹಕ್ಕೆ ಮಂಜೂರಾಗಿರುವ ಹುದ್ದೆಗಳು (ಕೇಡರ್) ಎಷ್ಟು; (ವಿವರ ನೀಡುವುದು)

(ಆ) ಜಿಲ್ಲಾ ಕೇಂದ್ರ ಕಾರಾಗೃಹದಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಮತ್ತು ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಹಾಸನ ಜಿಲ್ಲಾ ಕೇಂದ್ರ ಕಾರಾಗೃಹದಲ್ಲಿರುವ ಪುರುಷ ಮತ್ತು ಮಹಿಳಾ ಖೈದಿಗಳ ಸಂಖ್ಯೆ ಎಷ್ಟು; ಶಿಕ್ಷೆಗೆ ಒಳಪಟ್ಟಿರುವವರೆಷ್ಟು; (ಪ್ರಕರಣವಾರು ವಿವರಗಳನ್ನು ಒದಗಿಸುವುದು)

(ಈ) ಜಿಲ್ಲಾ ಕೇಂದ್ರ ಕಾರಾಗೃಹದಲ್ಲಿರುವ ಪುರುಷ ಮತ್ತು ಮಹಿಳಾ ಖೈದಿಗಳಿಗೆ ಅಗತ್ಯನುಗುಣವಾಗಿ ಮೂಲಭೂತ ಸೌಕರ್ಯವನ್ನು ಒದಗಿಸಲಾಗುತ್ತಿದೆಯೇ ;

(ಉ) ಕಾರಾಗೃಹದಲ್ಲಿ ವಿವಿಧ ಪ್ರಕರಣಗಳಲ್ಲಿ ಶಿಕ್ಷೆಗೆ ಒಳಪಟ್ಟಿರುವ ಖೈದಿಗಳ ಮನಃ ಪರಿವರ್ತನೆ ಮಾಡಲು ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಹಾಸನ ಜಿಲ್ಲೆಯಲ್ಲಿ ಹೊಸದಾಗಿ ಕೇಂದ್ರ ಕಾರಾಗೃಹ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಎಂ.ವಿ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೧೯೬ (೨೩೬೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನದಲ್ಲಿ ಹೊಸದಾಗಿ ಜಿಲ್ಲಾ ಕೇಂದ್ರ ಕಾರಾಗೃಹ ನಿರ್ಮಾಣ ಮಾಡಲು ಶಾಂತಿಗ್ರಾಮ, ರಂಗನಾಥಪುರ, ಹಾಸನ ತಾಲ್ಲೂಕು ಇಲ್ಲಿ ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ ಹಾಗೂ ಭೂಸ್ವಾಧೀನ ಮಾಡಿಕೊಳ್ಳುವ ಪ್ರಕ್ರಿಯೆ ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಆ) ಹಾಸನದಲ್ಲಿ ಹೊಸದಾಗಿ ಜಿಲ್ಲಾ ಕೇಂದ್ರ ಕಾರಾಗೃಹ ನಿರ್ಮಾಣ ಮಾಡಲು ಜಿಲ್ಲಾಡಳಿತ ಕೈಗೊಂಡಿರುವ ಕ್ರಮಗಳಾವುವು ? (ವಿವರ ನೀಡುವುದು)

## ಮಹಿಳೆಯರು, ಹೆಣ್ಣು ಮಕ್ಕಳ ನಾಪತ್ತೆ ಮತ್ತು ಕಳ್ಳ ಸಾಗಣೆ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):-**

೨೦೭೭ (೨೩೨೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ಐದು ವರ್ಷಗಳಿಂದ ಎಷ್ಟು ಜನ ಮಹಿಳೆಯರು ಮತ್ತು ಹೆಣ್ಣು ಮಕ್ಕಳ ನಾಪತ್ತೆ ಮತ್ತು ಕಳ್ಳಸಾಗಣೆ ಪ್ರಕರಣಗಳು ದಾಖಲಾಗಿವೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಇದರಲ್ಲಿ ಪತ್ತೆಯಾದ ಪ್ರಕರಣಗಳು ಎಷ್ಟು; ಪತ್ತೆಯಾಗದ ಪ್ರಕರಣಗಳು ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಪತ್ತೆಯಾಗದ ಪ್ರಕರಣಗಳನ್ನು ಪತ್ತೆ ಹಚ್ಚಲು ಸರ್ಕಾರ ಕೈಗೊಂಡ ಕ್ರಮಗಳೇನು

(ಈ) ಮಹಿಳೆಯರು ಮತ್ತು ಹೆಣ್ಣು ಮಕ್ಕಳ ರಕ್ಷಣೆಗೆ ಸರ್ಕಾರ (ಏನ್ನೆಲ್ಲಾ ಕ್ರಮ ವಹಿಸಿದೆ ತಿಳಿಸುವುದು) ಕೈಗೊಂಡಿರುವ ಕ್ರಮಗಳೇನು ?

## ಜವಾಹರಲಾಲ್ ನೆಹರು ರಾಷ್ಟ್ರೀಯ, ನಗರ ನವೀಕರಣ ಅಭಿಯಾನ ಯೋಜನೆಯ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):-**

೨೦೭೮ (೨೩೨೭) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಜವಾಹರಲಾಲ್ ನೆಹರು ರಾಷ್ಟ್ರೀಯ ನಗರ ನವೀಕರಣ ಅಭಿಯಾನದಲ್ಲಿ (Jn nurm) ಮೈಸೂರು ನಗರಕ್ಕೆ ಮಂಜೂರಾದ ಯೋಜನೆಗಳೆಷ್ಟು; ಅದರ ಅಂದಾಜು ಮೊತ್ತ ಎಷ್ಟು; (ವಿವರ ನೀಡುವುದು)

(ಆ) ಈ ಮಂಜೂರಾದ ಯೋಜನೆಗಳಲಿ ಮುಕ್ತಾಯವಾಗಿರುವ ಯೋಜನೆಗಳೆಷ್ಟು; ಪ್ರಗತಿಯಲ್ಲಿರುವ ಹಾಗೂ ಇನ್ನು ಪ್ರಾರಂಭವಾಗದಿರುವ ಯೋಜನೆಗಳೆಷ್ಟು;

(ಇ) ಪ್ರಗತಿಯಲ್ಲಿರುವ ಯೋಜನೆಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ;

(ಈ) ಪ್ರಾರಂಭವಾಗದಿರುವ ಯೋಜನೆಗಳನ್ನು ಯಾವಾಗ ಪ್ರಾರಂಭಿಸಲಾಗುವುದು ; ಯಾವ ಕಾಲಮಿತಿಗಳಲ್ಲಿ ಪೂರ್ಣಗೊಳಿಸಲಾಗುವುದು ?

## ಸರ್ಕಾರಿ ಇಲಾಖೆಗಳಲ್ಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೨೦೭೯ (೨೩೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಅಧೀನದಲ್ಲಿ ಬರುವ ಸರ್ಕಾರಿ ಇಲಾಖೆಗಳು ಎಷ್ಟು ;

(ಆ) ಈ ವಿವಿಧ ಇಲಾಖೆಗಳಲ್ಲಿ ಮಂಜೂರಾಗಿರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕ್ಲಬ್‌ಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೨೦೮೦ (೨೩೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ನೋಂದಾಯಿತ ಕ್ಲಬ್‌ಗಳಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕ್ಲಬ್‌ಗಳಿಗೆ ಸರ್ಕಾರ ಜಮೀನನ್ನು ಗುತ್ತಿಗೆ ಅಥವಾ ಬಾಡಿಗೆ ಆಧಾರದಲ್ಲಿ ನೀಡಿದೆಯೇ ;

(ಇ) ನೀಡಿದ್ದಲ್ಲಿ, ಜಿಲ್ಲಾವಾರು ಕ್ಲಬ್‌ಗಳ ವಿವರ ನೀಡುವುದು ?

## ರಾಜ್ಯ ಸರ್ಕಾರದ ಸಾಧನೆಗಳ ಬಗ್ಗೆ ಜಾಹೀರಾತು ನೀಡಿರುವ ಬಗ್ಗೆ

**ಶ್ರೀ ಕಾಂತ್‌ರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೦೮೧ (೨೩೪೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯ ಸರ್ಕಾರದ ಸಾಧನೆಗಳನ್ನು ಪ್ರಚಾರ ಪಡಿಸಲು ನೀಡಿರುವ ಜಾಹೀರಾತುಗಳ ಸಂಖ್ಯೆ ಎಷ್ಟು; ಇದಕ್ಕಾಗಿ ಖರ್ಚಾಗಿರುವ ಹಣವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಇಲಾಖಾವಾರು ಯೋಜನೆಗಳನ್ನು ಪ್ರಚಾರ ಪಡಿಸಲು ನೀಡಿರುವ ಜಾಹೀರಾತುಗಳ ಸಂಖ್ಯೆ ಎಷ್ಟು; ಹಾಗೂ ಇದಕ್ಕಾಗಿ ಖರ್ಚು ಮಾಡಿರುವ ಹಣವೆಷ್ಟು; (ಮಾಹಿತಿ ನೀಡುವುದು)

(ಇ) ಈ ಸಾಧನೆಗಳ ಮತ್ತು ಇಲಾಖಾವಾರು ಯೋಜನೆಗಳ ಬಗ್ಗೆ ಇಷ್ಟೊಂದು ದೊಡ್ಡ ಮಟ್ಟದಲ್ಲಿ ಸಾರ್ವಜನಿಕರ ಹಣವನ್ನು ಖರ್ಚು ಮಾಡಿ ಜಾಹೀರಾತು ನೀಡುವುದು ಅವಶ್ಯಕತೆ ಇದೆಯೇ; ಇದರಿಂದ ಸಾರ್ವಜನಿಕರಿಗೆ ಆಗುವ ಪ್ರಯೋಜನವಾದರೂ ಏನು; (ವಿವರ ನೀಡುವುದು)

(ಈ) ಈ ಜಾಹೀರಾತು ನೀಡಲು ಯಾವ ಏಜನ್ಸಿಯನ್ನು ನೇಮಕ ಮಾಡಿಕೊಳ್ಳಲಾಗಿದೆ ಯಾವ ಮಾನದಂಡ ಅನುಸರಿಸಿ ಜಾಹೀರಾತನ್ನು ನೀಡಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು)

## ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಇಲಾಖೆಯ ಚಟುವಟಿಕೆಗಳ ಬಗ್ಗೆ

**ಶ್ರೀ ಕಾಂತ್‌ರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೦೮೨ (೨೩೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ನಡೆಸುವ ಕಾರ್ಯಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು) ಹಾಗೂ ಈ ಬಗ್ಗೆ ಹೊರಡಿಸಿರುವ ಸುತ್ತೋಲೆಗಳ ಆದೇಶಗಳ ಪ್ರತಿಯನ್ನು ಒದಗಿಸುವುದು ;

(ಆ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ವಿದ್ಯಾರ್ಹತೆಗೆ ತಕ್ಕಂತೆ ಉದ್ಯೋಗಗಳನ್ನು ಪಡೆಯಲು ಕೌಶಲ್ಯಾಭಿವೃದ್ಧಿ ತರಬೇತಿ ಸಂಸ್ಥೆಗಳನ್ನು ಸ್ಥಾಪಿಸಲಾಗಿದೆ. ಅವುಗಳ ಚಟುವಟಿಕೆಗಳೇನು ; (ವಿವರ ನೀಡುವುದು)

(ಇ) ತುಮಕೂರು ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಇಂತಹ ಸಂಸ್ಥೆಗಳನ್ನು ಸ್ಥಾಪನೆ ಮಾಡಲಾಗಿದೆ ಹಾಗೂ ಈ ಇಲಾಖೆಯ ಮೂಲಕ ಇಲ್ಲಿಯ ತನಕ ವಿವಿಧ ಸಂಸ್ಥೆಗಳಲ್ಲಿ ಎಷ್ಟು ಉದ್ಯೋಗಗಳನ್ನು ಒದಗಿಸಿಕೊಡಲಾಗಿದೆ ? (ವಿವರ ನೀಡುವುದು)

## ಆರೋಗ್ಯ ಇಲಾಖೆಯ ಆಯುಕ್ತರ ವಿರುದ್ಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿನ ದೂರುಗಳ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೦೮೩ (೨೩೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

F.S.L.

(ಅ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿ ಆರೋಗ್ಯ ಇಲಾಖೆ ಆಯುಕ್ತರು ಹಾಗೂ ಆಹಾರ ಸುರಕ್ಷತಾ ಆಯುಕ್ತರು ಇವರ ವಿರುದ್ಧ ಯಾವ ಯಾವ ದೂರುಗಳು ದಾಖಲಾಗಿರುತ್ತದೆ; (ವಿವರ ಒದಗಿಸುವುದು)

(ಆ) ಸದರಿ ಅಧಿಕಾರಿಗಳ ಸೇವಾ ಅವಧಿಯಲ್ಲಿ ಒಟ್ಟು ಎಷ್ಟು ದೂರುಗಳು ಯಾವ ಯಾವ ಇಲಾಖೆಗಳಲ್ಲಿ ಬಂದಿರುತ್ತದೆ; ಪ್ರಸ್ತುತ ಈ ದೂರುಗಳು ಯಾವ ಹಂತದಲ್ಲಿರುತ್ತದೆ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ದೂರುಗಳ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ಸದರಿ ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಇರುವ ತೊಂದರೆಗಳೇನು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಆರೋಗ್ಯ ಇಲಾಖೆ ಆಯುಕ್ತರು ಹಾಗೂ ಆಹಾರ ಸುರಕ್ಷತಾ ಆಯುಕ್ತರು ಎಂಬ ಎರಡು ಪ್ರತ್ಯೇಕ ಆಯುಕ್ತರ ಹುದ್ದೆಗಳಿದ್ದು, ಕಳೆದ ಆರು ವರ್ಷಗಳಿಂದ ಆಹಾರ ಸುರಕ್ಷತಾ ಆಯುಕ್ತರ ಹುದ್ದೆಯನ್ನು ಭರ್ತಿಗೊಳಿಸದೇ ಆರೋಗ್ಯ ಇಲಾಖೆ ಆಯುಕ್ತರನ್ನೇ ಪ್ರಭಾರಿ ಆಹಾರ ಸುರಕ್ಷತಾ ಆಯುಕ್ತರನ್ನಾಗಿ ನೇಮಕ ಮಾಡಲಾಗಿದ್ದು, ಅಭಿವೃದ್ಧಿ ಹಾಗೂ ಆಡಳಿತದ ಹಿತದೃಷ್ಟಿಯಿಂದ ಖಾಯಂ ಆಹಾರ ಸುರಕ್ಷತಾ ಆಯುಕ್ತರ ಹುದ್ದೆಯನ್ನು ಯಾವಾಗ ಭರ್ತಿಗೊಳಿಸಲಾಗುವುದು? (ವಿವರ ನೀಡುವುದು)

## ಗೃಹ ಇಲಾಖೆಯಲ್ಲಿನ ಖಾಲಿ ಹುದ್ದೆ ಭರ್ತಿ ಹಾಗೂ ಅತಿಯಾದ ಒತ್ತಡದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೦೮೪ (೨೪೩೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗೃಹ ಇಲಾಖೆಯಲ್ಲಿ ಸಾವಿರಾರು ಖಾಲಿ ಹುದ್ದೆಯಿಂದಾಗಿ, ಅನೇಕ ಪ್ರಕರಣಗಳ ತನಿಖೆಯು ವಿಳಂಬವಾಗುತ್ತಿರುವುದು ಹಾಗೂ ಕೆಳಹಂತದ ಸಿಬ್ಬಂದಿಗಳಿಗೆ ಕೆಲಸದ ಒತ್ತಡ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗೃಹ ಇಲಾಖೆಯಲ್ಲಿ ಮಂಜೂರಾಗಿರುವ ಹಾಗೂ ಖಾಲಿ ಇರುವ ಒಟ್ಟು ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳ ನೇಮಕಾತಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಗೃಹ ಇಲಾಖೆಯಲ್ಲಿ ಆರ್ಡರ್ಲಿ ಪದ್ಧತಿ ಸಂಪೂರ್ಣವಾಗಿ ನಿಲ್ಲಿಸಲಾಗಿದೆಯೇ; ಇಲ್ಲವಾದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಿದೆ ?

## ಬಹುಮಹಡಿ ಕಟ್ಟಡಗಳಲ್ಲಿ ಸಾರ್ವಜನಿಕರಿಗೆ ಅಗತ್ಯ ಸೌಲಭ್ಯ ಹಾಗೂ ಸುರಕ್ಷತೆ ಒದಗಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೮೫ (೨೪೩೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಬಹುಮಹಡಿ ಕಟ್ಟಡಗಳ ಸಂಖ್ಯೆ ಎಷ್ಟು ; (ಜಿ+೧ ಗಿಂತ ಹೆಚ್ಚಿನ ವಾಣಿಜ್ಯ ಮತ್ತು ವಾಸ್ತವ್ಯ ಮಹಡಿ ಮತ್ತು ವಾರ್ಡ್‌ವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಬಹುಮಹಡಿ ಕಟ್ಟಡ ನಿರ್ಮಾಣ ಸಂದರ್ಭದಲ್ಲಿ ನಡೆದ ಅವಘಡಗಳ ಸಂಖ್ಯೆ ಎಷ್ಟು ; ನಿರ್ಲಕ್ಷಿತರ ವಿರುದ್ಧ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಬಹುಮಹಡಿ ಕಟ್ಟಡಗಳಿಗೆ ಆಗಮಿಸುವ ಸಾರ್ವಜನಿಕರ ವಾಹನ ಪಾರ್ಕಿಂಗ್, ಅಗತ್ಯ ಸಂಖ್ಯೆಯ ಶೌಚಾಲಯದ ಲಭ್ಯತೆ ಇಲ್ಲದೆ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಬಹುಮಹಡಿ ವಾಣಿಜ್ಯ ಕಟ್ಟಡಗಳಲ್ಲಿ ಸಾರ್ವಜನಿಕರಿಗೆ ಶೌಚಾಲಯ, ವಾಹನಗಳ ಪಾರ್ಕಿಂಗ್ ಗಳಿಗೆ ಅಗತ್ಯ ಸ್ಥಳಾವಕಾಶ ಮತ್ತು ಸಾರ್ವಜನಿಕರ ಸುರಕ್ಷತೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೌಶಲ್ಯಾಭಿವೃದ್ಧಿಗಾಗಿ ಕೇಂದ್ರ ಸರ್ಕಾರ ನೀಡಿರುವ ಅನುದಾನದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೮೬ (೨೯೨೮) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) "ಕೌಶಲ್ಯ ಕರ್ನಾಟಕ" ಯೋಜನೆಯು ಕೇಂದ್ರ ಸರ್ಕಾರದ "ಸ್ಕಿಲ್ ಇಂಡಿಯಾ" ಯೋಜನೆಯ ಒಂದು ಭಾಗವೇ ; ಕೌಶಲ್ಯ ಕರ್ನಾಟಕ ಯೋಜನೆಯ ಕಾರ್ಯಕ್ರಮಗಳೇನು ; ಕೌಶಲ್ಯ ಕರ್ನಾಟಕ ಯೋಜನೆಗೆ ಕಾಯ್ದಿರಿಸಿದ ಅನುದಾನವೆಷ್ಟು ; ಇದರಲ್ಲಿ ಕೇಂದ್ರ ಮತ್ತು ರಾಜ್ಯದ ಪಾಲು ಎಷ್ಟು ;

(ಆ) ಕೌಶಲ್ಯ ಕರ್ನಾಟಕ ಯೋಜನೆಯಡಿ ತರಬೇತಿ ಮತ್ತು ಉದ್ಯೋಗಕ್ಕಾಗಿ ಇಲ್ಲಿಯವರೆಗೆ ನೋಂದಣಿ ಮಾಡಿಕೊಂಡ ಅಭ್ಯರ್ಥಿಗಳ ಸಂಖ್ಯೆ ಎಷ್ಟು ;

(ಇ) ಯಾವ ಯಾವ ತರಬೇತಿ ಮತ್ತು ಉದ್ಯೋಗಿಗಳನ್ನು ನೀಡಲಾಗುವುದು ; ರಾಜ್ಯದ ಎಲ್ಲೆಲ್ಲಿ ತರಬೇತಿ ಆಯೋಜಿಸಲಾಗುವುದು; ತರಬೇತಿ ಮತ್ತು ಉದ್ಯೋಗ ನೀಡಲು ಯಾವ ಯಾವ ಸರ್ಕಾರೇತರ ಸಂಸ್ಥೆಗಳೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ ;

(ಈ) ತರಬೇತಿಯನ್ನು ಯಾವಾಗ ಪ್ರಾರಂಭಿಸಲಾಗುವುದು ; ಉದ್ಯೋಗವನ್ನು ಯಾವಾಗ ನೀಡಲು ಉದ್ದೇಶಿಸಲಾಗಿದೆ ; ತರಬೇತಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ ಯಾವ ಸೌಲಭ್ಯ ಒದಗಿಸಲಾಗುವುದು ?

## ಕೇಂದ್ರದ ಮಹತ್ವಾಕಾಂಕ್ಷಿಯ "ಸ್ಮಾರ್ಟ್ ಸಿಟಿ" ಯೋಜನೆ ಆರಂಭಕ್ಕೆ ರಾಜ್ಯದ ನಿರ್ಲಕ್ಷದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೮೭ (೨೪೨೯) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಡಿ ಸ್ಮಾರ್ಟ್ ಸಿಟಿ ಕಾಮಗಾರಿ ಆರಂಭಕ್ಕೆ ರಾಜ್ಯ ಸರ್ಕಾರವೇ ಅಡ್ಡಿಯಾಗಿರುವುದು ನಿಜವೇ ;

(ಆ) ಸ್ಮಾರ್ಟ್ ಸಿಟಿ ಯೋಜನೆಗೆ ಆಯ್ಕೆಯಾಗಿರುವ ರಾಜ್ಯದ ನಗರಗಳು ಯಾವುವು ;

(ಇ) ಸ್ಮಾರ್ಟ್ ಸಿಟಿ ಯೋಜನೆಗೆ ಕೇಂದ್ರ ಸರ್ಕಾರವು ಮಂಜೂರು ಮಾಡಿರುವ ಹಾಗೂ ಇದುವರೆಗೂ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಈ) ಸ್ಮಾರ್ಟ್ ಸಿಟಿ ಕಾಮಗಾರಿಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಅಧಿಕಾರ ಹಂಚಿಕೆ ಪ್ರಸ್ತಾವಕ್ಕೆ ಸರ್ಕಾರ ಅನುಮೋದನೆ ನೀಡದೆ ವಿಳಂಬ ನೀತಿಯನ್ನು ಅನುಸರಿಸುತ್ತಿರುವುದು ನಿಜವೇ; ವಿಳಂಬಕ್ಕೆ ಕಾರಣಗಳೇನು ;

(ಉ) ವಿಳಂಬ ನೀತಿಯನ್ನು ಬಿಟ್ಟು ಸ್ಮಾರ್ಟ್ ಸಿಟಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಸರ್ಕಾರ ಹಮ್ಮಿಕೊಂಡ ಕಾರ್ಯಕ್ರಮಗಳೇನು?

## ಕಾಮಗಾರಿ ಸ್ಥಗಿತಗೊಂಡಿರುವ ಕುರಿತು

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೮೮ (೨೩೭೦) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಮನಗರ ಜಿಲ್ಲೆ, ರಾಮನಗರ ಟೌನಿನ ಅಗ್ರಹಾರದ ಅಭಯ ಆಂಜನೇಯ ಸ್ವಾಮಿ ದೇವಸ್ಥಾನದ ರಸ್ತೆಯಿಂದ (ವಾರ್ಡ್ ನಂಬರ್ ೬) ಇಂಡಸ್ಟ್ರೀಯಲ್ ಏರಿಯಾಗೆ (ಬಿ.ಎಂ.ರಸ್ತೆಗೆ) ಸಂಪರ್ಕ ಕಲ್ಪಿಸುವ ಅರ್ಕಾವತಿ ನದಿಗೆ ಅಡ್ಡವಾಗಿ ನಿರ್ಮಿಸುತ್ತಿರುವ ಸೇತುವೆಯ ಅಂದಾಜು ಮೊತ್ತವೆಷ್ಟು ; (ವರ್ಕ್ ಆರ್ಡರ್ ನಂಬರ್ ಮತ್ತು ಮಂಜೂರಾತಿ ಸಂಖ್ಯೆಗಳ ವಿವರ ನೀಡುವುದು)

(ಆ) ರಾಮನಗರ ಜಿಲ್ಲೆ, ರಾಮನಗರ ಟೌನಿನ ರಾಯರದೊಡ್ಡಿಯಿಂದ ವಿವೇಕಾನಂದನಗರದ ಮೂಲಕ ಬಿ.ಎಂ.ರಸ್ತೆಯವರೆಗಿನ ಹಳ್ಳಕ್ಕೆ (ರಾಜಕಾಲುವೆಗೆ) ನಿರ್ಮಿಸಲಾಗುತ್ತಿರುವ ರಕ್ಷಣಾ ಗೋಡೆಯ (storm water drain) ಅಂದಾಜು ಮೊತ್ತವೆಷ್ಟು ; (ವರ್ಕ್ ಆರ್ಡರ್ ನಂಬರ್ ಮತ್ತು ಮಂಜೂರಾತಿ ಸಂಖ್ಯೆಗಳ ವಿವರ ನೀಡುವುದು)

(ಇ) ಈ ಎರಡು ನಿರ್ಮಾಣ ಕಾಮಗಾರಿಗಳು ಸ್ಥಗಿತಗೊಂಡಿರುವುದಕ್ಕೆ ಕಾರಣಗಳೇನು ;

(ಈ) ಕಾಮಗಾರಿಗಳು ಸ್ಥಗಿತಗೊಂಡಿರುವುದರಿಂದ, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಈ ಎರಡು ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಕೆಂಗೇರಿ ಉಪನಗರದಲ್ಲಿ ಕೈಗೊಂಡಿರುವ ಕಾಮಗಾರಿಗಳು

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೮೯ (೨೩೭೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರಿನ ಕೆಂಗೇರಿ ಉಪನಗರದ ಸಮಗ್ರ ಅಭಿವೃದ್ಧಿಗೆ ಕೈಗೊಂಡಿರುವ ಮೂಲಭೂತ ಸೌಕರ್ಯಗಳು/ಅಭಿವೃದ್ಧಿ ಕಾಮಗಾರಿಗಳು ಹಾಗೂ ಯೋಜನೆಗಳಾವುವು ;

(ಆ) ಪ್ರಸ್ತುತ ಕಾಮಗಾರಿಗಳು ಯಾವ ಹಂತದಲ್ಲಿವೆ ;

(ಇ) ಕೆಂಗೇರಿ ಉಪನಗರದ ಸನ್‌ಸಿಟಿ ರಸ್ತೆಯ ಅಗಲವನ್ನು ವಿಸ್ತರಿಸುವ ಉದ್ದೇಶವಿದೆಯೇ ?

## ಮುಖ್ಯಮಂತ್ರಿಗಳ ಪರಿಹಾರ ನಿಧಿ ಶಾಖೆಯಲ್ಲಿ ಪರಿಹಾರ ವಿತರಣೆ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕನಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೯೦(೨೪೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಇತರ ಗಂಭೀರ ಖಾಯಿಲೆಗಳಿಗೂ ಪರಿಹಾರ ನೀಡುತ್ತೇವೆಂದು ಮುಖ್ಯಮಂತ್ರಿಗಳು ಭರವಸೆ ನೀಡಿದ್ದರೂ, ಅದು ಕಾರ್ಯಗತವಾಗದೆ ಆರು ಖಾಯಿಲೆಗಳಿಗೆ ಪರಿಹಾರ ವಿತರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮುಖ್ಯಮಂತ್ರಿಗಳ ಭರವಸೆ ಆದೇಶಕ್ಕಾಗಿ ಮಾರ್ಪಾಡಾಗುವುದು ಯಾವಾಗ ಯಾವ ಯಾವ ಗಂಭೀರ ಖಾಯಿಲೆಗಳಿಗೂ ಪರಿಹಾರ ವಿತರಿಸಲಾಗುವುದು ;

(ಇ) ಮುಖ್ಯಮಂತ್ರಿಗಳ ಪರಿಹಾರ ನಿಧಿ ಶಾಖೆಯಲ್ಲಿ ಪರಿಹಾರ ವಿತರಣೆಯಲ್ಲಿ ತೀರ ವಿಳಂಭವಾಗುತ್ತಿದ್ದು, ಪರಿಹಾರದ ಅರ್ಜಿಗಳ ಶೀಘ್ರ ವಿಲೇವಾರಿಗೆ ಸರ್ಕಾರವು ತೆಗದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಫಲಾನುಭವಿಯು ಪರಿಹಾರಕ್ಕಾಗಿ ಅರ್ಜಿ ಸಲ್ಲಿಸಿದಾಗ, ಪರಿಹಾರದ ವಿತರಣೆಗೆ ಮತ್ತು ಅದರ ಪ್ರಕ್ರಿಯೆಗೆ ಬೇಕಾಗುವ ಕಾಲಾವಕಾಶವೆಷ್ಟು?

**ವಾಹನ ಸವಾರರು ಸಂಚಾರಿ ನಿಯಮಗಳನ್ನು ಪಾಲಿಸದೇ ರಸ್ತೆಯಲ್ಲಿ ದಿನನಿತ್ಯ ಸಾವು ನೋವುಗಳು ಸಂಭವಿಸುತ್ತಿರುವ ಬಗ್ಗೆ**

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೯೯೧ (೨೪೧೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ರಾಜ್ಯದಲ್ಲಿ ವಾಹನ ಸವಾರರು ಸಂಚಾರಿ ನಿಯಮ ಪಾಲಿಸದೇ ರಸ್ತೆಯಲ್ಲಿ ದಿನನಿತ್ಯ ಅನಾಹುತಗಳು, ಸಾವು ನೋವುಗಳು ಸಂಭವಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರಸ್ತೆಯಲ್ಲಾಗುತ್ತಿರುವ ಅವಘಡಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳಾವುವು; ರೂಪಿಸಿರುವ ಕಠಿಣ ಸಂಚಾರಿ ನಿಯಮಗಳೇನು ; ಇವು ಕಟ್ಟುನಿಟ್ಟಾಗಿ ಯಾವಾಗ ಜಾರಿಗೆ ಬರುತ್ತವೆ ;

(ಇ) ಕೇಂದ್ರ ಸರ್ಕಾರ ರೂಪಿಸಿರುವ ಸಂಚಾರಿ ನಿಯಮಗಳು ಯಾವುವು; ಅವುಗಳು ರಾಜ್ಯದಲ್ಲಿ ಯಥಾವತ್ ಜಾರಿಯಾಗಿವೆಯೇ ; ಇವು ಕಟ್ಟುನಿಟ್ಟಾಗಿ ಜಾರಿಗೆ ಬರುವುದು ಯಾವಾಗ ;

(ಈ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ರಸ್ತೆ ಅಪಘಾತಗಳಿಂದ ಸಂಭವಿಸಿರುವ ಸಾವಿನ ಸಂಖ್ಯೆ ಎಷ್ಟು ; ಎಷ್ಟು ಜನ ಶಾಶ್ವತ ಅಂಗವಿಕಲರಾಗಿದ್ದಾರೆ ; ಉಂಟಾಗಿರುವ ಆಂದಾಜಿನ ನಷ್ಟ ಎಷ್ಟು ; (ವಿವರ ನೀಡುವುದು)

(ಉ) ಸಂಚಾರಿ ನಿಯಮ ಉಲ್ಲಂಘಿಸಿದ ವಾಹನ ಸವಾರರ ವಿರುದ್ಧ ಕಠಿಣ ಕ್ರಮ ಹಾಗೂ ಶುಲ್ಕ ವಿಧಿಸುವ ಬದಲು ಅವರೊಂದಿಗೆ ಪೊಲೀಸರು ಚೌಕಾಸಿಗೆ ಇಳಿದು ಲಂಚ ಪಡೆದು ಸಂಚಾರಿ ನಿಯಮಗಳು ಸಡಿಲವಾಗಲು ಕಾರಣರಾಗುತ್ತಿರುವುದು ನಿಜವೇ;

(ಊ) ಹಾಗಾದರೆ, ಅಂತಹವರ ವಿರುದ್ಧ ಸರ್ಕಾರ ಏನು ಕ್ರಮಗಳನ್ನು ತೆಗೆದುಕೊಳ್ಳುವುದು ? (ವಿವರ ನೀಡುವುದು)

## ಬೆಳಗಾವಿಯ ಪ್ರವಾಸಿ ಸ್ಥಳ ಕೋಟೆಕೆರೆ ಅಕ್ರಮ ಚಟುವಟಿಕೆಗಳ ಅಡ್ಡವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೯೨ (೨೪೪೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಬೆಳಗಾವಿಯ ಪ್ರವಾಸಿ ಸ್ಥಳಗಳಲ್ಲಿ ಒಂದಾದ ನಗರದ ಕೋಟೆ ಕೆರೆ ಆವರಣವು ಗಾಂಜಾ ಸೇದುವವರ ಹಾಗೂ ಕಾನೂನು ಬಾಹಿರ ಅಕ್ರಮ ಚಟುವಟಿಕೆಗಳ ಅಡ್ಡವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಗಾಂಜಾ ಸೇದುವವರ ಉಪಟಳವನ್ನು ತಪ್ಪಿಸಿ, ಕೆರೆಯನ್ನು ಹಾಗೂ ಕೋಟೆಯ ಪಾವಿತ್ರ್ಯತೆಯನ್ನು ಉಳಿಸುವ ನಿಟ್ಟಿನಲ್ಲಿ ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳಾವುವು; ರೂಪಿಸಿರುವ ಕಠಿಣ ನಿಯಮಗಳೇನು ; ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲಾಗುವುದು ಯಾವಾಗ ; (ವಿವರ ನೀಡುವುದು)

(ಇ) ಸದರಿ ಕೋಟೆ ಕೆರೆಯ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ? (ವಿವರ ನೀಡುವುದು)

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಸಾರ್ವಜನಿಕರಿಗೆ ಹಂಚಬೇಕಾದ ಫ್ಲಾಟ್‌ಗಳನ್ನು ಪ್ರಾಧಿಕಾರದಿಂದ ನೌಕರರಿಗೆ ಹಳೆ ದರದಲ್ಲಿ ನೀಡುತ್ತಿರುವ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೧೯೩ (೨೩೬೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ನಿರ್ಮಿತಗೊಂಡ ಫ್ಲಾಟ್ : ಮನೆಗಳನ್ನು ಬಾಡಿಗೆ ಆಧಾರದ ಮೇಲೆ ಪ್ರಾಧಿಕಾರದ ಅಧಿಕಾರಿ/ನೌಕರರಿಗೆ ಹಂಚಿಕೆ ಮಾಡಿರುವುದು ನಿಜವೇ; ಇದ್ದಲ್ಲಿ ಹೆಸರು, ಹುದ್ದೆ, ಫ್ಲಾಟ್ ಹೊಂದಿರುವ ಸ್ಥಳ ಮತ್ತು ಹಂಚಿಕೆ ಮಾಡಿರುವ ದಿನಾಂಕವಾರು ವಿವರ ನೀಡುವುದು ; (ಬಿಡುಗಡೆಯಾದ ಪೂರ್ಣ ವಿವರ ಒದಗಿಸುವುದು)

(ಆ) ವಯೋ ನಿವೃತ್ತಗೊಂಡ ಅಧಿಕಾರಿ/ನೌಕರರು ಹೆಚ್.ಆರ್.ಎ. ಕಡಿತಗೊಳ್ಳದಿದ್ದರೂ ಫ್ಲಾಟ್ : ಮನೆಗಳಲ್ಲಿ ಮುಂದುವರೆದಿರುವುದು ನಿಜವೇ ; ಅಂತಹವರ ಹೆಸರು ಮತ್ತು ನಿವೃತ್ತಗೊಂಡವರ ದಿನಾಂಕವಾರು ಮಾಹಿತಿ ನೀಡುವುದು ; ಇದುವರೆಗೂ ಅವರನ್ನು ಮುಂದುವರೆಸಲು ಕಾರಣವೇನು ;

(ಇ) ಫ್ಲಾಟ್‌ಗಳನ್ನು ಪ್ರಾಧಿಕಾರದ ನೌಕರರು ಭೋಗ್ಯ : ಉಪಭೋಗ್ಯ: ಬಾಡಿಗೆ ಆಧಾರದ ಮೇಲೆ ಇತರರಿಗೆ ನೀಡಿರುವ ಬಗ್ಗೆ ಪ್ರಾಧಿಕಾರದ ಎಸ್.ಪಿ.ರವರ ನೇತೃತ್ವದಲ್ಲಿ ತನಿಖೆ ನಡೆಯುತ್ತಿದೆಯೇ; ಯಾವ ದಿನಾಂಕದಿಂದ ತನಿಖೆ ನಡೆಯುತ್ತಿದೆ ಮತ್ತು ತನಿಖಾ ವರದಿಯ ವಿವರಗಳನ್ನು ನೀಡುವುದು ;

(ಈ) ಫ್ಲಾಟ್ ಹಂಚಿಕೆಯಾಗಿರುವ ಅಧಿಕಾರಿ/ನೌಕರರು ಅಥವಾ ಅವರ ಅವಲಂಬಿತ ಕುಟುಂಬ ಸದಸ್ಯರ ಹೆಸರಿನಲ್ಲಿ (ನಿವೃತ್ತ ಅಧಿಕಾರಿ/ ನೌಕರರು ಒಳಗೊಂಡಂತೆ) ಪ್ರಾಧಿಕಾರಕ್ಕೆ ಸಲ್ಲಿಸಿರುವ ಸ್ಥಿರಾಸ್ತಿಗಳ ವಿವರ ಪಟ್ಟಿ ಮತ್ತು ಇತರ ಮಾಹಿತಿಗಳಾಧಾರದನ್ವಯ ನಿವೇಶನ; ಫ್ಲಾಟ್ ; ಮನೆ ಹೊಂದಿದ್ದರೂ ಪುನ: ಬಾಡಿಗೆ ಆಧಾರದ ಮೇಲೆ ಹಂಚಿಕೆಯಾಗಿರುವ ಅಧಿಕಾರಿ/ನೌಕರರ ಹೆಸರುಗಳನ್ನು ನೀಡುವುದು ;

(ಉ) ತನಿಖೆ ನಡೆಯುತ್ತಿದ್ದರೂ, ನಿವೇಶನ/ಮನೆ ಇಲ್ಲವೆಂದು ಪ್ರಮಾಣಪತ್ರ ಪಡೆದು ಫ್ಲಾಟ್:ಮನೆಗಳನ್ನು ಆಯಾ ನೌಕರರಿಗೆ ಸಕ್ರಮಗೊಳಿಸಲು ಅಧಿಸೂಚನೆ ಹೊರಡಿಸಿದ್ದ ದರ (ಹಳೆಯ ದರ)ವನ್ನು ನಿಗದಿಪಡಿಸಿ ಮಂಡಳಿ ಮುಂದಿಟ್ಟಿರುವುದು ನಿಜವೇ; ಇದ್ದಲ್ಲಿ, ಇದರಿಂದ ಪ್ರಾಧಿಕಾರಕ್ಕೆ ಅಪರಿಮಿತ ನಷ್ಟವುಂಟಾಗುವುದಿಲ್ಲವೆ; ಆದ್ದರಿಂದ ಇದನ್ನು ರದ್ದು ಮಾಡಿ, ಫ್ಲಾಟ್ : ಮನೆಗಳನ್ನು ಹರಾಜು ಪ್ರಕ್ರಿಯೆ ಮಾಡಿ ಹೆಚ್ಚಿನ ಲಾಭ ಪಡೆದುಕೊಳ್ಳಲು ಪ್ರಾಧಿಕಾರವು ಕೈಗೊಳ್ಳುವ ಕ್ರಮಗಳೇನು ?

## ರಕ್ಕಸೀ ಹಳ್ಳದ ಕಾಮಗಾರಿ ವಿಳಂಬದ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೦೯೪ (೨೩೭೫) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ೬೯ನೇ ವಾರ್ಡಿನ ರಕ್ಕಸೀ ಹಳ್ಳದ ಕಾಮಗಾರಿ ಈಗ ಯಾವ ಹಂತದಲ್ಲಿದೆ ; ಕಾಮಗಾರಿಯನ್ನು ತುಂಬಾ ವಿಳಂಬವಾಗಿ ನಿರ್ವಹಿಸುತ್ತಿರುವುದರಿಂದ ಮಳೆಗಾಲದಲ್ಲಿ ಸಾರ್ವಜನಿಕರಿಗೆ ತುಂಬಾ ಅನಾನುಕೂಲವಾಗಿದ್ದು, ಕೆಲಸವನ್ನು ಜರೂರುಗೊಳಿಸಲು ಕೈಗೊಳ್ಳುವ ಕ್ರಮವೇನು ;

(ಆ) ಸದರಿ ಗುತ್ತಿಗೆದಾರರು ಬಸ್‌ಸ್ಟಾಂಡ್ ರಸ್ತೆಯ ಕೆಳಭಾಗದಲ್ಲಿರುವ ಸರ್ಕಲ್‌ನಲ್ಲಿರುವ ಸ್ಯಾನಿಟರಿ ಚೇಂಬರ್ ಹಾಗೂ ಲೈನುಗಳಿಗೆ ಡ್ಯಾಮೇಜು ಮಾಡಿ ಕಳೆದ ೧೫ ದಿನದಿಂದ ಮುನೇಶ್ವರ ಬಡಾವಣೆಯ ಚೇಂಬರ್ ಹಾಗೂ ಲೈನ್‌ಗಳು ಬ್ಲಾಕ್ ಆಗಿ ನಾಗರಿಕರ ಮನೆಯೊಳಗೆ ಹಾಗೂ ಚರಂಡಿಗಳಲ್ಲಿ ಹರಿಯುತ್ತಿದ್ದು, ನಾಗರಿಕರು ವಾಸಿಸಲು ತೊಂದರೆಯಾಗಿದ್ದು, ಕೂಡಲೇ ಅಲ್ಲಿ ಹೊಸ ಲೈನ್‌ಗಳನ್ನು ಅಳವಡಿಸಿ ಖಾಯಂ ಆಗಿ ಸಮಸ್ಯೆ ನಿವಾರಿಸಲು ಕೈಗೊಳ್ಳುವ ಕ್ರಮಗಳೇನು ;

(ಇ) ಮೇಲ್ಕಂಡ ಕಾಮಗಾರಿಯ ಗುತ್ತಿಗೆದಾರರು ಯಾರು ; ಅಂಗೀಕಾರವಾಗಿರುವ ಸದರಿ ಗುತ್ತಿಗೆಯ ಅಂದಾಜು ಪಟ್ಟಿಯ ಪ್ರತಿ ಗುತ್ತಿಗೆದಾರರ ದೂರವಾಣಿ ಸಂಖ್ಯೆ ಇತ್ಯಾದಿ ಪೂರ್ಣ ವಿವರ ಒದಗಿಸುವುದು ?

## ರಾಜ್ಯದ ದಿನಗೂಲಿ ನೌಕರರನ್ನು ಖಾಯಂ ಮಾಡುವ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೦೯೫ (೨೪೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ಯಾವ ಯಾವ ಇಲಾಖೆಯಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ದಿನಗೂಲಿ ಆಧಾರದ ಮೇಲೆ ವಿವಿಧ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; (ಇಲಾಖಾವಾರು, ಹುದ್ದೆವಾರು, ದಿನಾಂಕ ಸಹಿತ ವಿವರ ನೀಡುವುದು)

(ಆ) ಎಷ್ಟು ವರ್ಷಗಳಿಂದ ದಿನಗೂಲಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಇಲಾಖಾವಾರು ವಿವರ ನೀಡುವುದು)

(ಇ) ದಿನಗೂಲಿ ನೌಕರರಿಗೆ ನೀಡಲಾಗುತ್ತಿರುವ ವೇತನ, ಭತ್ಯೆ ಮತ್ತಿತರ ಸವಲತ್ತುಗಳೇನು ; (ವಿವರ ನೀಡುವುದು)

(ಈ) ಸದರಿ ನೌಕರರ ಸೇವೆಯನ್ನು ಖಾಯಂಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ಬಂದೀಖಾನೆಗಳ ಸುಧಾರಣೆ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೦೯೬ (೨೪೫೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಬಂದೀಖಾನೆಗಳ ಸಂಖ್ಯೆ ಎಷ್ಟು ;

(ಆ) ಕೆಲವು ಬಂಧೀಖಾನೆಗಳಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರು ನಗರದ ಉದ್ಯಾನವನ ನಿರ್ವಹಣೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ) ನಾಮನಿರ್ದೇಶನ ಹೊಂದಿದವರು :–**

೨೧೯೭ (೨೪೫೩) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿರುವ ಉದ್ಯಾನವನಗಳೆಷ್ಟು ; ಈ ಉದ್ಯಾನವನಗಳ ನಿರ್ವಹಣೆಯನ್ನು ಯಾವ ಇಲಾಖೆಯವರು ನಿರ್ವಹಿಸುತ್ತಿದ್ದಾರೆ ;

(ಆ) ಈ ಉದ್ಯಾನವನಗಳ ನಿರ್ವಹಣೆ, ಸ್ವಚ್ಛತೆ ಮಾಡಲು ಸಾಕಷ್ಟು ಸಿಬ್ಬಂದಿಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಘ ಸಂಸ್ಥೆಗಳಿಗೆ ಗುತ್ತಿಗೆ ನೀಡಲಾಗಿದೆಯೆ)

(ಇ) ಹಾಗಿದ್ದಲ್ಲಿ, ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಕ್ರಮ ಕೈಗೊಳ್ಳುವುದಾದರೆ ಯಾವಾಗ ; ನೇಮಿಸಿಕೊಳ್ಳಲಾಗುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಖಾಲಿ ಇರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಬ್ಯಾಕ್ ಲಾಗ್ ಹುದ್ದೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೯೮ (೨೩೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಖಾಲಿ ಇರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು ವಿವರ ನೀಡುವುದು)

(ಆ) ಈ ಬ್ಯಾಕ್ ಲಾಗ್ ಹುದ್ದೆಗಳು ಯಾವಾಗಿನಿಂದ ಖಾಲಿ ಇವೆ ; ಇವುಗಳನ್ನು ಭರ್ತಿ ಮಾಡದಿರಲು ಕಾರಣವೇನು ;

(ಇ) ಈ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಹುಬ್ಬಳ್ಳಿ ಧಾರವಾಡ ನಗರದಲ್ಲಿ ಬಿ.ಆರ್.ಟಿ.ಎಸ್. ಯೋಜನೆ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೯೯ (೨೩೫೮) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹುಬ್ಬಳ್ಳಿ ಧಾರವಾಡ ಅವಳಿ ನಗರದಲ್ಲಿ ಜಾರಿಗೊಳಿಸಲಾಗಿರುವ ಬಿ.ಆರ್.ಟಿ.ಎಸ್. ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ;

(ಆ) ಬಿ.ಆರ್.ಟಿ.ಎಸ್. ಯೋಜನೆ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಇ) ಈ ಯೋಜನೆ ತಡವಾಗಿರುವುದರಿಂದ, ಜನರಿಗೆ ಉಂಟಾಗುತ್ತಿರುವ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಈ ಯೋಜನೆಯನ್ನು ಪೂರ್ಣಗೊಳಿಸಲು ಸರ್ಕಾರಕ್ಕೆ ಬೇಕಾಗಿರುವ ಕಾಲಾವಕಾಶ ಎಷ್ಟು ?

## ಪಾಲಿಕೆಗಳಲ್ಲಿ ಒಳಚರಂಡಿ ಯೋಜನೆ ಅಳವಡಿಸಿಕೊಳ್ಳುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೦೦ (೨೩೯೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ಇರುವ ಮಹಾನಗರ ಪಾಲಿಕೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಮಹಾನಗರ ಪಾಲಿಕೆಗಳಲ್ಲಿ ಒಳಚರಂಡಿ ಯೋಜನೆ ಅಳವಡಿಸಲಾಗಿದೆಯೇ ;

(ಇ) ಒಳಚರಂಡಿ ವ್ಯವಸ್ಥೆಯನ್ನು ಅಳವಡಿಸಲಾಗಿರುವ ಪಾಲಿಕೆಗಳ ಸಂಖ್ಯೆ ಎಷ್ಟು ;

(ಈ) ಒಳಚರಂಡಿ ಯೋಜನೆ ಅಳವಡಿಸಿಕೊಳ್ಳದೆ ಇರುವಂತಹ ನಗರಗಳು ಯಾವುವು?

## ಗೃಹ ನಿರ್ಮಾಣ ಸಹಕಾರ ಸಂಘಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೦೧ (೨೪೪೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಇರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; ಜಿಲ್ಲಾವಾರು ಸಹಕಾರ ಸಂಘಗಳ ಪೂರ್ಣ ವಿವರ ನೀಡುವುದು ;

(ಆ) ೨೦೧೧–೧೨ ರಿಂದ ಇದುವರೆಗೂ ಗೃಹ ನಿರ್ಮಾಣ ಸಹಕಾರ ಸಂಘಗಳ ಮೂಲಕ ಸಾರ್ವಜನಿಕರಿಗೆ, ಪರಿಶಿಷ್ಟ ಜಾತಿ ಮತ್ತು ಪಂಗಡದವರು ಸೇರಿದಂತೆ ಹಂಚಿಕೆಯಾಗಿರುವ ನಿವೇಶನಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಗೃಹ ನಿರ್ಮಾಣ ಸಹಕಾರ ಸಂಘಗಳ ನಿವೇಶನಗಳನ್ನು ಹಂಚಿಕೆ ಮಾಡುವಲ್ಲಿ ಚದರ ಅಡಿಗೆ ನಿಗಧಿಪಡಿಸಲಾಗಿರುವ ಹಣವೆಷ್ಟು? (ವಿವರ ನೀಡುವುದು)

## ಬಾರ್ ಮತ್ತು ವೈನ್ ಸ್ಟೋರ್‌ಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೦೨ (೨೪೪೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದಲ್ಲಿರುವ ಬಾರ್ ಮತ್ತು ವೈನ್‌ಸ್ಟೋರ್‌ಗಳ ಒಟ್ಟು ಸಂಖ್ಯೆ ಎಷ್ಟು ; (ವಿವರಗಳನ್ನು ನೀಡುವುದು)

(ಆ) ಹೊಸದಾಗಿ ವೈನ್ ಸ್ಟೋರ್‌ಗಳನ್ನು ತೆರೆಯಲು ಅನುಮತಿ ನೀಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕಟ್ಟು ನಿಟ್ಟಿನ ಕ್ರಮಗಳೇನು ; ಕೈಗೊಂಡಿದ್ದರೆ, ವೈನ್ ಸ್ಟೋರ್‌ಗಳನ್ನು ತೆರೆಯಲು ಅನುಮತಿ ನೀಡಲಾಗಿರುವುದೆಷ್ಟು ? ವಿವರ ನೀಡುವುದು

## ಸಹಕಾರಿ ಸಂಘಗಳ ಸಿಬ್ಬಂದಿ ಮತ್ತು ನಿರ್ದೇಶಕರ ಮೇಲೆ ದಾಖಲಾಗಿರುವ ಪ್ರಕರಣಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೦೩ (೨೩೩೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಸಹಕಾರಿ ಸಂಘಗಳ ನಿರ್ದೇಶಕರು ಮತ್ತು ಸಿಬ್ಬಂದಿಗಳ ಮೇಲೆ ಎಷ್ಟು ಆರ್ಥಿಕ ಮತ್ತು

L.C.F.7

ಕ್ರಿಮಿನಲ್ ಪ್ರಕರಣಗಳು ದಾಖಲಾಗಿರುತ್ತದೆ ; (ಸಹಕಾರ ಸಂಘ ನಿರ್ದೇಶಕರ ಹೆಸರು, ಸಿಬ್ಬಂದಿ ಹೆಸರು, ಪ್ರಕರಣ ಸ್ವರೂಪ ಸಂಖ್ಯಾವಾರು ಮಾಹಿತಿ ನೀಡುವುದು)

(ಆ) ಆರ್ಥಿಕ ಅವ್ಯವಹಾರಕ್ಕೆ ಸಂಬಂಧಿಸಿದಂತೆ ದಾಖಲಾದ ಪ್ರಕರಣಗಳಲ್ಲಿ ಕೋರ್ಟ್‌ನಿಂದ ತಡೆಯಾಜ್ಞೆ ಪಡೆದ ಪ್ರಕರಣಗಳು ಯಾವುವು; ಈ ತಡೆಯಾಜ್ಞೆ ಈತನಕ ಹಲವು ವರ್ಷಗಳಿಂದ ತೆರವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ತಡೆಯಾಜ್ಞೆ ತರವಿಗೆ ಸರ್ಕಾರದ ಕ್ರಮವೇನು;

(ಇ) ಆರೋಪಿಗಳ ಜೊತೆ ಶಾಮೀಲಾಗಿರುವ ಇಲಾಖೆಯ ಅಧಿಕಾರಿಗಳ ಮೇಲೆ ಸರ್ಕಾರವು ತೀಕ್ಷ್ಣ ಕ್ರಮ ಕೈಗೊಳ್ಳಲಾಗುವುದೇ ?

## ರೈತರ ಕೃಷಿ ಸಾಲವನ್ನು ಮನ್ನಾ ಮಾಡುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೦೪ (೨೩೩೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಶೂನ್ಯ ಬಡ್ಡಿ ದರದಲ್ಲಿ ಕೃಷಿ ಸಾಲ ಮರುಪಾವತಿಗೆ ನಿಗಧಿಪಡಿಸಿದ ಕೊನೆಯ ದಿನಾಂಕ ಯಾವುದು ;

(ಆ) ರಾಜ್ಯದಲ್ಲಿ ತಲೆದೋರಿರುವ ಭೀಕರ ಬರಗಾಲದ ಹಿನ್ನೆಲೆಯಲ್ಲಿ, ಶೂನ್ಯ ಬಡ್ಡಿ ದರದಲ್ಲಿ ಕೃಷಿ ಸಾಲ ಮರುಪಾವತಿಯ ದಿನಾಂಕವನ್ನು ಕನಿಷ್ಠ ೬ ತಿಂಗಳವರೆಗೆ ವಿಸ್ತರಿಸಲಾಗುವುದೇ ; ಇಲ್ಲವಾದಲ್ಲಿ, ರೈತರ ಸಾಲವನ್ನು ಮನ್ನಾ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ ?

## ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಕೆ.ಎ.ಎಸ್. ಅಧಿಕಾರಿಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೦೫ (೨೩೩೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರವ ಕೆ.ಎ.ಎಸ್. ಮತ್ತು ಕೆ.ಎ.ಎಸ್‌ಗೆ ಸಮಾನಾಂತರ ಗ್ರೂಪ್ ಎ ಮತ್ತು ಬಿ ಗ್ರೂಪ್ ಶ್ರೇಣಿ ಅಧಿಕಾರಿಗಳ ಸಂಖ್ಯೆ ಎಷ್ಟು ; ಅವರು ಯಾವ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ; ಅವರು ಸೇವೆಗೆ ಸೇರಿದ ದಿನಾಂಕ ಮತ್ತು ನಿವೃತ್ತಿಯ ದಿನಾಂಕ ಯಾವುವು ; (ಇಲಾಖಾವಾರು, ಹುದ್ದೆವಾರು, ಹೆಸರುವಾರು ಮಾಹಿತಿ ನೀಡುವುದು)

(ಆ) ಈ ಅಧಿಕಾರಿಗಳಲ್ಲಿ ಇಲಾಖಾ ತನಿಖೆಗೆ ಒಳಪಟ್ಟಿರುವವರ ಸಂಖ್ಯೆ ಎಷ್ಟು ; ಕ್ರಿಮಿನಲ್ ಪ್ರಕರಣ ದಾಖಲಾಗಿರುವವರ ಸಂಖ್ಯೆ ಎಷ್ಟು; ಅವರ ವಿರುದ್ಧ ಜರುಗಿದ ಕ್ರಮವೇನು; ಭ್ರಷ್ಟಾಚಾರದಂತಹ ಪ್ರಕರಣಗಳು ದಾಖಲಾಗಿದ್ದರೂ, ಅಮಾನತ್ತಾಗದೇ ಸೇವೆ ಸಲ್ಲಿಸುತ್ತಿರುವವರ ಸಂಖ್ಯೆ ಎಷ್ಟು ; (ಹುದ್ದೆವಾರು, ಇಲಾಖಾವಾರು, ಹೆಸರುವಾರು ಮಾಹಿತಿ ನೀಡುವುದು)

## ಬೆಂಗಳೂರಿನ ಇಂಟರ್ ಮೀಡಿಯೇಟ್ ರಿಂಗ್ ರಸ್ತೆಯಲ್ಲಿ ಪಾದಾಚಾರಿ ಮೇಲು ಸೇತುವೆ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೦೬ (೨೩೩೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಬೆಂಗಳೂರು ನಗರದ ಇಂಟರ್ ಮೀಡಿಯೇಟ್ ರಿಂಗ್ ರಸ್ತೆಯಲ್ಲಿ ಪಾದಚಾರಿ ಮೇಲು ಸೇತುವೆಯ ನಿರ್ಮಾಣದ ಬಗ್ಗೆ ದಿನಾಂಕ: ೦೨.೦೨.೨೦೧೨ ರಂದು ನೀಡಿದ ಲಿಖಿತ ಭರವಸೆಯೂ ಈಡೇರಿಸದಿರಲು ಕಾರಣವೇನು ; ಅದನ್ನು ಯಾವ ಕಾಲಮಿತಿಯಲ್ಲಿ ಈಡೇರಿಸಲಾಗುವುದು ;

(ಆ) ಈ ವಾಹನ ದಟ್ಟಣೆಯಲ್ಲಿ ಪಾದಾಚಾರಿಗಳು ರಸ್ತೆಯನ್ನು ದಾಟಲು ಆತಂಕ ಪಡುತ್ತಿರುವುದು ಇಲಾಖಾ ಗಮನಕ್ಕೆ ಬಂದಿದೆಯೇ; ನಾಗರೀಕರ ಜೀವ ಸ್ವತ್ತುಗಳ ಸಂರಕ್ಷಣೆಯು ಸರ್ಕಾರದ ಆದ್ಯ ಕರ್ತವ್ಯವಾಗಿರುವಾಗ ಇದನ್ನು ಪ್ರಥಮ ಪ್ರಾಶಸ್ತ್ಯದಲ್ಲಿ ಬಗೆಹರಿಸಲಾಗುವುದೇ ?

## ಸರ್ಕಾರಿ ನೌಕರರ ಕರ್ತವ್ಯಕ್ಕೆ ಅಡ್ಡಿಪಡಿಸಿದವರ ಪ್ರಕರಣಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೦೭(೨೩೩೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೩ ವರ್ಷಗಳಲ್ಲಿ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರ್ಕಾರಿ ನೌಕರರ ಕರ್ತವ್ಯಕ್ಕೆ ಅಡ್ಡಿಪಡಿಸಿದ ಕುರಿತು ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಠಾಣಾವಾರು ಪ್ರಕರಣವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಸರ್ಕಾರಿ ನೌಕರರ ಕರ್ತವ್ಯಕ್ಕೆ ಅಡ್ಡಿಪಡಿಸಿದ ಪ್ರಕರಣದಲ್ಲಿ ದೂರುದಾರ ಮತ್ತು ಭಾಗಿಯಾದವರ ಸಂಖ್ಯೆ ಎಷ್ಟು ; (ಹೆಸರು ಮತು ವಿಳಾಸದೊಂದಿಗೆ ವಿವರ ನೀಡುವುದು)

(ಇ) ಸರ್ಕಾರಿ ನೌಕರರ ಕರ್ತವ್ಯಕ್ಕೆ ಅಡ್ಡಿಪಡಿಸುವುದನ್ನು ತಪ್ಪಿಸುವ ನಿಟ್ಟಿನಲ್ಲಿ ಸರ್ಕಾರದಿಂದ ವಿಶೇಷ ಕಾಯಿದೆ ತರುವ ಯೋಜನೆಯಿದೆಯೇ ; ಇದ್ದಲ್ಲಿ, ಯಾವಾಗ ತರಲಾಗುವುದು; ಇಲ್ಲವಾದಲ್ಲಿ ಕಾರಣವೇನು ;

(ಈ) ಅಕ್ರಮವೆಸಗುವ ಅಧಿಕಾರಿಗಳ ವಿರುದ್ಧ ಪ್ರತಿಭಟನೆ ಮಾಡಿದರೆ ಅದು ಕರ್ತವ್ಯಕ್ಕೆ ಅಡ್ಡಿಪಡಿಸಿದಂತಾಗುವುದೇ ?

## ಉಪ ಪೊಲೀಸ್ ಠಾಣೆಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೦೮ (೨೪೦೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಹೋಬಳಿ ಕೇಂದ್ರದಲ್ಲಿ ಈಗಾಗಲೇ ಉಪ ಪೊಲೀಸ್ ಠಾಣೆಗಳನ್ನು ತೆರೆದಿದ್ದು, ಇವುಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ಈ ರೀತಿ ಮೇಲ್ದರ್ಜೆಗೇರಿಸಲು ಸರ್ಕಾರದ ಮುಂದೆ ಇರುವ ಪ್ರಸ್ತಾವನೆಗಳೆಷ್ಟು ; ಮೇಲ್ದರ್ಜೆಗೇರಿಸಲಾಗುವ ತಾಲ್ಲೂಕು ಉಪ ಪೊಲೀಸ್ ಠಾಣೆಗಳಾವುವು ? (ಸಂಪೂರ್ಣ ವಿವರ ನೀಡುವುದು)

## ಸಿವಿಲ್ ವ್ಯಾಜ್ಯಗಳಲ್ಲಿ ಪೊಲೀಸ್ ಅಧಿಕಾರಿಗಳ ಹಸ್ತಕ್ಷೇಪ ಕುರಿತು

**ಶ್ರೀ ಎಂ.ಕೆ. ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೦೯ (೨೩೯೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಪೊಲೀಸ್ ಠಾಣೆಗಳಲ್ಲಿ ಹಲವು ಸಿವಿಲ್ ವ್ಯಾಜ್ಯಗಳನ್ನು ಪೊಲೀಸ್ ಅಧಿಕಾರಿಗಳು ಮಧ್ಯವರ್ತಿಗಳಾಗಿ ಮಧ್ಯ ಪ್ರವೇಶ ಮಾಡಿ ಸಾರ್ವಜನಿಕರಿಗೆ ತೊಂದರೆ ಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಿವಿಲ್ ವ್ಯಾಜ್ಯಗಳನ್ನು ಪರಿಹರಿಸಲು ಪೊಲೀಸರಿಗೆ ಅಧಿಕಾರ ನೀಡಲಾಗಿದೆಯೇ ;

(ಆ) ಈ ಸಿವಿಲ್ ವ್ಯಾಜ್ಯಗಳಿಗೆ ಮಧ್ಯವರ್ತಿಗಳಾಗಿ ವರ್ತಿಸುವ ಪೊಲೀಸ್ ಅಧಿಕಾರಿಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳು ಏನು; (ವಿವರ ನೀಡುವುದು)

(ಇ) ಈಗಾಗಲೇ ಈ ವರ್ತನೆಗೆ ರಾಜ್ಯ ಉಚ್ಚನ್ಯಾಯಾಲಯ ಅಸಮಾಧಾನ ವ್ಯಕ್ತಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರ ಬಗ್ಗೆ ತೆಗೆದುಕೊಂಡ ಕ್ರಮಗಳೇನು ?

## ಹುಬ್ಬಳ್ಳಿ-ಧಾರವಾಡ ನಗರಗಳ ಮಧ್ಯೆ ಹೆಚ್ಚುತ್ತಿರುವ ಲಾರಿ ಅಪಘಾತಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೧೦ (೨೩೯೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹುಬ್ಬಳ್ಳಿ–ಧಾರವಾಡ ನಗರಗಳ ಮಧ್ಯ ಹಗಲಿನ ವೇಳೆಯಲ್ಲಿ ಭಾರಿ ಗಾತ್ರದ ವಾಹನಗಳು ಹಾಗೂ ಲಾರಿ ಸಂಚಾರ ದಟ್ಟಣೆಯಿಂದ ಅಪಘಾತಗಳಾಗಿ ಅನೇಕ ಸಾವು–ನೋವು ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು; ಹಾಗೂ ಇದರಿಂದ ಸಾರ್ವಜನಿಕರ ಸಂಚಾರಕ್ಕೆ ತುಂಬಾ ತೊಂದರೆಯಾಗಿದ್ದು, ಇದನ್ನು ಸುಗಮಗೊಳಿಸಲು ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಹುಬ್ಬಳ್ಳಿ–ಧಾರವಾಡ ನಗರಗಳ ಮಧ್ಯದಲ್ಲಿ ಕಳೆದ ೧ ವರ್ಷದಲ್ಲಿ ಭಾರಿ ವಾಹನ ಹಾಗೂ ಲಾರಿ ಅಪಘಾತದಲ್ಲಿ ಉಂಟಾಗಿರುವ ಅಪಘಾತಗಳೆಷ್ಟು? (ವಿವರ ನೀಡುವುದು)

## ಕುಡಿಯುವ ನೀರಿನ ಸೌಲಭ್ಯಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧೧ (೨೩೫೪) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯ್ತಿ ವ್ಯಾಪ್ತಿಯಲ್ಲಿ ದಿನದ ೨೪ ಗಂಟೆ ಕುಡಿಯುವ ನೀರು ಪೂರೈಸುವ ಕ್ರಿಯಾ ಯೋಜನೆ ಸಿದ್ಧಪಡಿಸಲಾಗುತ್ತಿದ್ದೆಯೇ; (ಸಂಪೂರ್ಣ ವಿವರ ನೀಡುವುದು)

(ಆ) ಸರ್ಕಾರ ಈ ಯೋಜನೆಗೆ ಮೀಸಲಿಟ್ಟಿರುವ ಅನುದಾನ ಮೊತ್ತವೆಷ್ಟು; ಇದರ ಸಾಧ್ಯಾಸಾಧ್ಯತೆಗಳ ವಿವರ ನೀಡುವುದು;

(ಇ) ೨೪ ಗಂಟೆ ನೀರು ಪೂರೈಕೆಗೆ ಯಾವ ಮಾದರಿಯ ಕ್ರಮ ಕೈಗೊಳ್ಳಲು ಉದ್ದೇಶಿಸಲಾಗಿದೆ; ಹಾಗಿದ್ದಲ್ಲಿ, ಎಲ್ಲಿ ಯಶಸ್ವಿಯಾಗಿದೆ; ಈ ಯೋಜನೆಯನ್ನು ಒಂದೇ ಹಂತದಲ್ಲಿ ಜಾರಿಗೆ ತರಲಾಗುವುದೇ ಅಥವಾ ಹಂತ ಹಂತವಾಗಿ ಜಾರಿಗೆ ತರಲಾಗುವುದೇ? (ಸಂಪೂರ್ಣ ವಿವರ ನೀಡುವುದು)

## ಹುಬ್ಬಳ್ಳಿ–ಧಾರವಾಡ ನಗರದಲ್ಲಿನ ವಾಹನ ದಟ್ಟಣೆ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧೨ (೨೩೭೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ–ಧಾರವಾಡ ಅವಳಿ ನಗರ ಪ್ರದೇಶದಲ್ಲಿ ವಾಹನಗಳ ಸಂಚಾರ ಮಿತಿಮೀರಿ ಏರುತ್ತಿರುವುದು ನಿಜವಲ್ಲವೇ; ಹಾಗಿದ್ದಲ್ಲಿ, ನಗರದಲ್ಲಿ ಹೆಚ್ಚುತ್ತಿರುವ ವಾಹನಗಳ ಸಂಖ್ಯೆಯನ್ನು ನಿಯಂತ್ರಿಸಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳೇನು;

(ಆ) ನಗರ ವ್ಯಾಪ್ತಿಯಲ್ಲಿ ಶಬ್ದಮಾಲಿನ್ಯ ಹಾಗೂ ವಾಯುಮಾಲಿನ್ಯದ ವಾಹನಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮವೇನು;

(ಇ) ಕಳೆದ ಒಂದು ವರ್ಷದಿಂದ ಎಷ್ಟು ವಾಹನಗಳನ್ನು ಪತ್ತೆ ಹಚ್ಚಲಾಗಿದೆ;

(ಈ) ದಂಡ ವಸೂಲು ಮಾಡಲಾಗಿರುವ ವಾಹನ ಸವಾರರ ಸಂಖ್ಯೆ ಎಷ್ಟು; (ಸಂಚಾರಿ ಠಾಣಾವಾರು ಮಾಹಿತಿ ನೀಡುವುದು)

(ಉ) ವಾಯುಮಾಲಿನ್ಯ, ಶಬ್ದಮಾಲಿನ್ಯ ವಾಹನಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದೇ?

## ಅಮೃತ ಯೋಜನೆಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೧೩ (೨೩೯೭) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಧಾರವಾಡ, ಹಾವೇರಿ, ಗದಗ ಜಿಲ್ಲೆಗಳಲ್ಲಿ ಅಮೃತ ಯೋಜನೆಗೆ ಕಳೆದ ಒಂದು ವರ್ಷದಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಯಡಿ ಈ ಮೂರು ಜಿಲ್ಲೆಗಳಲ್ಲಿ ಯಾವ ಯಾವ ಕಾಮಗಾರಿಗಳು ಹಾಲಿ ಚಾಲ್ತಿಯಲ್ಲಿವೆ? (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ಮೂಲಭೂತ ಸೌಕರ್ಯಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೧೪ (೨೪೨೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ಮೂಲಭೂತ ಸೌಕರ್ಯಗಳಾದ ನೀರುಕಾಲುವೆಗಳ ಅಭಿವೃಧಿ, ಶಿಲ್ಟ್ ತೆಗೆಯುವುದು ಮತ್ತು ರಸ್ತೆಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಹಲವು ಯೋಜನೆಗಳ ಅಡಿಯಲ್ಲಿ ಅನುದಾನ ನೀಡುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ಯಾವ ಯಾವ ಯೋಜನೆಗಳಡಿಯಲ್ಲಿ ಕೇಂದ್ರ ಸರ್ಕಾರ ಅನುದಾನ ನೀಡಿದೆ ; ೨೦೧೩--೧೪ ರಿಂದ ಇದುವರೆವಿಗೆ ವಿವಿಧ ಯೋಜನೆಯಡಿ ಕೇಂದ್ರ ಸರ್ಕಾರ ನೀಡಿದ ಅನುದಾನ ಎಷ್ಟು ; ಮತ್ತು ಖರ್ಚಾದ ಮೊತ್ತ ಎಷ್ಟು ? (ವರ್ಷವಾರು, ಯೋಜನೆವಾರು ಮಾಹಿತಿ ನೀಡುವುದು)

## ನಮ್ಮ ಮೆಟ್ರೋ ಯೋಜನೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೧೫(೨೪೨೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನಮ್ಮ ಮೆಟ್ರೋ ಯೋಜನೆ ಮಹಾನಗರ ಪಾಲಿಕೆಯಲ್ಲಿ ಜಾರಿಯಲ್ಲಿರುವುದು ನಿಜವೇ;

(ಆ) ಹಾಗಿದ್ದರೆ, ಈ ಯೋಜನೆಗೆ ಪ್ರಾರಂಭದಿಂದ ಇದುವರೆವಿಗೆ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಹಣ ಎಷ್ಟು; ರಾಜ್ಯ ಸರ್ಕಾರ ನೀಡಿರುವ ಹಣ ಎಷ್ಟು? (ವಿವರ ನೀಡುವುದು)

## ಸರ್ಕಾರ ಅಧಿಕಾರಕ್ಕೆ ಬರುವ ಮುನ್ನ ನೀಡಿರುವ ಆಶ್ವಾಸನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೧೬ (೨೪೫೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರ ಅಧಿಕಾರಕ್ಕೆ ಬರುವ ಮುನ್ನ ಹಲವಾರು ಆಶ್ವಾಸನೆಗಳು ನೀಡಿರುವುದು ನಿಜವೇ;

(ಆ) ಹಾಗಿದ್ದರೆ, ಆಶ್ವಾಸನೆಗಳು ಯಾವುವು; ಈಡೇರಿಸಿದ ಆಶ್ವಾಸನೆಗಳು ಯಾವುವು; ಈಡೇರಿಸಿದ ಯೋಜನೆಗಳಿಗೆ ಸರ್ಕಾರ ನಾಲ್ಕು ವರ್ಷದಲ್ಲಿ ಖರ್ಚು ಮಾಡಿದ ಹಣ ಎಷ್ಟು? (ಆಶ್ವಾಸನೆಗಳವಾರು ವಿವರ ನೀಡುವುದು)

## ಬೆಂಗಳೂರು ನಗರ ಪಾದಚಾರಿಗಳ ಸುರಕ್ಷತೆ

**ಶ್ರೀ ಹೆಚ್. ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೧೭ (೨೩೭೨) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಲ್ಲಿ ಪಾದಚಾರಿಗಳು ಸುರಕ್ಷತೆಯಾಗಿ ರಸ್ತೆ ದಾಟಲು ಹಿರಿಯ ನಾಗರಿಕರಿಗೆ, ಮಹಿಳೆ ಮತ್ತು ಮಕ್ಕಳಿಗೆ, ಶಾಲಾ ಕಾಲೇಜಿನ ಹತ್ತಿರ ಅತೀವ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಜನ ನಿಬಿಡ ಪ್ರದೇಶಗಳಲ್ಲಿ ರಸ್ತೆ ದಾಟಲು ಅನುಕೂಲವಾಗುವಂತೆ ಸರ್ಕಾರ ಯೋಜನೆಯನ್ನೇನಾದರೂ ರೂಪಿಸಿದೆಯೇ;

(ಇ) ರೂಪಿಸಿದ್ದಲ್ಲಿ, ಈ ಸಾಲಿನಲ್ಲಿ ಬೆಂಗಳೂರಿನ ಎಷ್ಟು ಕಡೆ ಎಲ್ಲೆಲ್ಲಿ ಜಾರಿಗೊಳಿಸಲಾಗುವುದು ?

## ಒಂದೇ ಇಲಾಖೆಯಲ್ಲಿ ಹಲವಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೧೮ (೨೩೧೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೧೦ ವರ್ಷಗಳಿಂದ ಒಂದೇ ಇಲಾಖೆಯಲ್ಲಿ (ಮುಂಬಡ್ತಿ ನಂತರವು) ಸಹ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ ನೌಕರರುಗಳ ಸಂಖ್ಯೆ ಎಷ್ಟು;

(ಆ) ನಗರಾಭಿವೃದ್ಧಿ, ಲೋಕಾಪಯೋಗಿ, ಜಲಸಂಪನ್ಮೂಲ, ಕಂದಾಯ, ಶಿಕ್ಷಣ (ಪ್ರಾಥಮಿಕ ಮತ್ತು ಪ್ರೌಢ ಹಾಗೂ ಉನ್ನತ ಶಿಕ್ಷಣ) ಈ ಇಲಾಖೆಗಳಲ್ಲಿ ಕಳೆದ ೭-೮ ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದು, ಮುಂಬಡ್ತಿ ನಂತರವೂ ಅದೇ ಇಲಾಖೆಯಲ್ಲಿಮುಂದುವರೆದಿರುವ ಅಧಿಕಾರ/ನೌಕರರ ಸಂಖ್ಯೆ ಎಷ್ಟು; (ಹೆಸರು/ಪದನಾಮ ಸಹಿತ ವಿವರ ನೀಡುವುದು)

(ಇ) ಒಂದೇ ಇಲಾಖೆಯಲ್ಲಿ ಹಲವಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ಇಂತಹ ನೌಕರರುಗಳನ್ನು ಬೇರೆಡೆ ವರ್ಗಾವಣೆ ಮಾಡದಿರಲು ಕಾರಣವೇನು? (ಮಾಹಿತಿ ನೀಡುವುದು)

## ನಗರೋತ್ಥಾನ ಯೋಜನೆಯ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೧೯ (೨೩೧೯) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್‌ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನಗರೋತ್ಥಾನ ಯೋಜನೆಯ ಮಾನದಂಡವೇನು;

(ಆ) ಈ ಯೋಜನೆಯನ್ನು ಎಷ್ಟು ಹಂತದಲ್ಲಿ ಆರಂಭಿಸಲಾಗುತ್ತಿದೆ;

(ಇ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ;

(ಈ) ಸದರಿ ಯೋಜನೆಗಳಿಗೆ ಮಂಜೂರಾದ ಅನುದಾನವೆಷ್ಟು; ಬಾಕಿ ಇರುವ ಅನುದಾನವೆಷ್ಟು;

(ಉ) ಇಲ್ಲಿಯವರೆಗೆ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ಹಾಗೂ ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು; ಕಾರಣವೇನು? (ಸಂಪೂರ್ಣ ವಿವರ ನೀಡುವುದು)

## ಮೈಸೂರು ರಸ್ತೆಯ ಸಿರ್ಸಿ ವೃತ್ತದ ಮೇಲ್ಸೇತುವೆಯಿಂದ ವಿಕ್ಟೋರಿಯಾ ಆಸ್ಪತ್ರೆಗೆ ನೇರ ಸಂಪರ್ಕ ಕಲ್ಪಿಸುವ ರ್‍ಯಾಂಪ್ ನಿರ್ಮಾಣ ಕುರಿತು

**ಶ್ರೀ ರಾಮಚಂದ್ರಗೌಡರು (ಪದವೀಧರರ ಕ್ಷೇತ್ರ) :-**

೨೧೨೦ (೨೩೮೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ರಸ್ತೆಯ ಸಿರ್ಸಿ ವೃತ್ತದ ಮೇಲ್ಸೇತುವೆಯಿಂದ ವಿಕ್ಟೋರಿಯಾ ಆಸ್ಪತ್ರೆಗೆ ನೇರ ಸಂಪರ್ಕ ಕಲ್ಪಿಸುವ ರ್‍ಯಾಂಪ್ (Ramp) ನಿರ್ಮಾಣ ಯೋಜನೆ ಕುರಿತು ವಿವರ ನೀಡುವುದು;

(ಆ) ಸದರಿ ಯೋಜನೆಯಿಂದ ರಾಜ್ಯದ ನಾನಾ ಕಡೆಗಳಿಂದ ಬರುವ ರೋಗಿಗಳು ಮತ್ತು ತುರ್ತು ಚಿಕಿತ್ಸೆಗಾಗಿ ಆಂಬ್ಯುಲೆನ್ಸ್‌ನಲ್ಲಿ ಬರುವ ರೋಗಿಗಳಿಗೆ ಶೀಘ್ರವಾಗಿ ಆಸ್ಪತ್ರೆಯನ್ನು ತಲುಪಲು ಅನುಕೂಲವಾಗುವುದಲ್ಲವೇ; (ವಿವರ ನೀಡುವುದು)

(ಇ) ಸದರಿ ಯೋಜನೆಯು ಯಾವ ಹಂತದಲ್ಲಿದೆ?

## ಬೆಂಗಳೂರು ವೃಷಭಾವತಿ ನಾಲೆಗೆ ವಿಷಪೂರಿತ ರಾಸಾಯನಿಕ ತ್ಯಾಜ್ಯವನ್ನು ಹರಿಸುತ್ತಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡರು (ಪದವೀಧರರ ಕ್ಷೇತ್ರ) :-**

೨೧೨೧ (೨೩೮೮) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವೃಷಭಾವತಿ ನಾಲೆಗೆ ವಿಷಪೂರಿತ ರಾಸಾಯನಿಕ ತ್ಯಾಜ್ಯವನ್ನು ಸುರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸುತ್ತಮುತ್ತಲಿನ ಕಾರ್ಖಾನೆಗಳಿಂದ ಹರಿಸುತ್ತಿರುವ ದ್ರವ ತ್ಯಾಜ್ಯದ ವಿಲೇವಾರಿಯನ್ನು ಸ್ಥಗಿತಗೊಳಿಸಲು ಯಾವ ರೀತಿಯ ಕ್ರಮಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಬೆಂಗಳೂರು ನಗರದ ಮನೆಗಳು ಮತ್ತು ಕಟ್ಟಡಗಳಲ್ಲಿ ಮಳೆನೀರು ಕೊಯ್ಲು ಅಳವಡಿಕೆಯನ್ನು ಕಡ್ಡಾಯ ಮಾಡಿ ಕ್ರಮಕೊಳ್ಳುವ ಕುರಿತು

**ಶ್ರೀ ರಾಮಚಂದ್ರಗೌಡರು (ಪದವೀಧರರ ಕ್ಷೇತ್ರ) :-**

೨೧೨೨ (೨೩೮೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದ ಮನೆಗಳು ಅಪಾರ್ಟ್‌ಮೆಂಟ್‌ಗಳು ಹಾಗೂ ಬಹುಮಹಡಿ ಕಟ್ಟಡಗಳಿಗೆ, ಮಾಲ್‌ಗಳಿಗೆ ಮಳೆನೀರು ಕೊಯ್ಲು ಅಳವಡಿಕೆಯನ್ನು ಕಡ್ಡಾಯ ಮಾಡಲಾಗಿದೆಯೇ; (ವಿವರ ನೀಡುವುದು)

(ಆ) ಪ್ರಮುಖವಾಗಿ ಬಹುಮಹಡಿ ಕಟ್ಟಡಗಳು ಮತ್ತು ಅಪಾರ್ಟ್‌ಮೆಂಟ್‌ಗಳಲ್ಲಿ ಮಳೆನೀರು ಕೊಯ್ಲನ್ನು ಅಳವಡಿಸಿರುವ ಬಗ್ಗೆ ಪರಿವೀಕ್ಷಣೆ ನಡೆಸಲಾಗಿದೆಯೇ;

(ಇ) ಮಳೆನೀರು ಕೊಯ್ಲು ಅಳವಡಿಕೆ ಮಾಡದಿರುವವರ ಮೇಲೆ ಯಾವ ರೀತಿಯ ಕ್ರಮಕೈಗೊಳ್ಳಲಾಗಿದೆ; (ಸಂಕ್ಷಿಪ್ತ ವಿವರ ನೀಡುವುದು)

(ಈ) ಈ ರೀತಿಯ ಅಳವಡಿಕೆಗೆ ಸರ್ಕಾರದಿಂದ ಸಬ್ಸಿಡಿ ಅಥವಾ ಧನ ಸಹಾಯ ಅನುದಾನ ನೀಡುವ ಬಗ್ಗೆ ಸರ್ಕಾರದ ನಿಲುವೇನು?

## ಬಿಡಿಎ ವತಿಯಿಂದ ನಿರ್ಮಿಸಿರುವ ಫ್ಲಾಟ್‌ಗಳ ಖರೀದಿಗೆ ಅರ್ಜಿ ಸಲ್ಲಿಕೆಯಾಗದಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡರು (ಪದವೀಧರರ ಕ್ಷೇತ್ರ) :-**

೨೧೨೩ (೨೩೮೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಿಡಿಎ ವತಿಯಿಂದ ಆಲೂರು, ಕೊಮ್ಮಘಟ್ಟ, ದೊಡ್ಡಬನಹಳ್ಳಿ, ಕಣಿಮಿಣಿಕೆ, ಮಾಳಗಾಳ ಹಾಗೂ ವಳಗೇರನಹಳ್ಳಿ ಹಂತಗಳಲ್ಲಿ ಒಟ್ಟು ಎಷ್ಟು ಫ್ಲಾಟ್‌ಗಳನ್ನು ನಿರ್ಮಿಸಲಾಗಿದೆ; (ವಿವರ ನೀಡುವುದು)

(ಆ) ಸದರಿ ಫ್ಲಾಟ್‌ಗಳ ಬೆಲೆ ಹಾಗೂ ಒದಗಿಸಿರುವ ಮೂಲಸೌಕರ್ಯಗಳು ಯಾವುವು; (ವಿವರ ನೀಡುವುದು)

(ಇ) ಸದರಿ ಫ್ಲಾಟ್‌ಗಳ ಖರೀದಿಯ ಅರ್ಜಿ ಸಲ್ಲಿಕೆಯನ್ನು ೨ ಬಾರಿ ವಿಸ್ತರಣೆ ಮಾಡಲಾಗಿದ್ದರೂ ನಿರೀಕ್ಷಿತಮಟ್ಟದಲ್ಲಿ ಸಾರ್ವಜನಿಕರಿಂದ ಅರ್ಜಿ ಸಲ್ಲಿಕೆಯಾಗಿಲ್ಲದಿರುವುದು ನಿಜವೇ; (ವಿವರ ನೀಡುವುದು)

(ಈ) ಈ ರೀತಿ ನಿರೀಕ್ಷಿತಮಟ್ಟದಲ್ಲಿ ವಿಲ್ಲಾಗಳು ಮತ್ತು ಫ್ಲಾಟ್‌ಗಳ ಖರೀದಿಗೆ ಅರ್ಜಿ ಸಲ್ಲಿಕೆಯಾಗದಿರಲು ಕಾರಣವೇನು; ಇವುಗಳ ಸಂಪೂರ್ಣ ಹಂಚಿಕೆ ಪೂರ್ಣಗೊಳಿಸಲು ಯಾವ ರೀತಿ ಕ್ರಮಕೈಗೊಳ್ಳಲಾಗುವುದು?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :-**

೨೧೨೪ (೨೩೭೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವೃಷಭಾವತಿ ಕಣಿವೆಯ ಸುಧಾರಣೆ ಯೋಜನೆಯಲ್ಲಿ ಇಲ್ಲಿಯವರೆಗೆ ಬಿಡುಗಡೆ ಮಾಡಲಾದ ಹಣವೆಷ್ಟು; ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು; ಬಾಕಿಯಿರುವ ಕಾಮಗಾರಿಗಳೆಷ್ಟು;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾಮಗಾರಿ ಗುತ್ತಿಗೆಗಳನ್ನು "ಹೇಗಿವೆಯೋ ಅದೇ ಸ್ಥಿತಿಯಲ್ಲಿ" ರದ್ದುಗೊಳಿಸಿದ ನಂತರ ಅದೇ ಕಾಮಗಾರಿಗೆ ಇಲ್ಲಿಯವರೆಗೆ ಪಾವತಿ ಮಾಡಲಾಗಿರುವ ಹಣವೆಷ್ಟು; ಪಾವತಿ ಮಾಡಿದ್ದಲ್ಲಿ, ಸದರಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮತಿ ನೀಡಲಾಗಿತ್ತೆ;

(ಇ) ೨೦೧೫-೧೬ ಮತ್ತು ೨೦೧೬-೧೭ನೇ ಸಾಲಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಎಷ್ಟು ಕಾಮಗಾರಿಗಳಿಗೆ ಅನುಮತಿ ನೀಡಲಾಗಿದೆ; ಈ ಕಾಮಗಾರಿಗಳ ಅಂದಾಜು ಮೊತ್ತವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ೦೧-೦೪-೨೦೧೬ರಿಂದ ಇಲ್ಲಿಯವರೆಗೆ ರಸ್ತೆ ಗುಂಡಿಗಳನ್ನು ಮುಚ್ಚಲು ವಾರ್ಡ್‌ವಾರು ಎಷ್ಟು ಹಣ ಖರ್ಚು ಮಾಡಲಾಗಿದೆ; ೨೦೧೭-೧೮ನೇ ಸಾಲಿಗೆ ರಸ್ತೆ ಗುಂಡಿಗಳನ್ನು ಮುಚ್ಚಲು ಕ್ರಿಯಾ ಯೋಜನೆಯನ್ನು ತಯಾರಿಸಲಾಗಿದೆಯೇ;

(ಉ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಇಂಜಿನಿಯರಿಂಗ್/ ಟೌನ್ ಪ್ಲಾನಿಂಗ್ ವಿಭಾಗದಲ್ಲಿ ಒಟ್ಟಾರೆಯಾಗಿ ಎಷ್ಟು; ಅಭಿಯಂತರರು ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕುಡಿಯುವ ನೀರು ಯೋಜನೆ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :-**

೨೧೨೫ (೨೩೭೮) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ನಗರ ಪ್ರದೇಶಗಳ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಎಷ್ಟು ನೀರು ಸರಬರಾಜು ಯೋಜನೆಗಳನ್ನು ಕೈಗೊಂಡಿರುತ್ತದೆ; ಸದರಿ ಯೋಜನೆಗೆ ಪೂರ್ವಭಾವಿಯಾಗಿ ನೀರಿನ ಆಕಾರದ ಅವಲಂಬನೆ ವರದಿಯನ್ನು ಪಡೆದಿರುತ್ತದೆಯೇ; ಮಂಡಳಿಯು ಮೂರು ವರ್ಷಗಳಲ್ಲಿ ಕೈಗೊಂಡಿರುವ ನೀರು ಸರಬರಾಜು ಯೋಜನೆಗಳ ಕಾಮಗಾರಿಗಳಿಗೆ ಬಿಡುಗಡೆ ಮಾಡಿರುವ ಒಟ್ಟು ಹಣವೆಷ್ಟು; ಸದರಿ ಯೋಜನೆಗಳು ಪೂರ್ಣಮಟ್ಟದಲ್ಲಿ ಅನುಷ್ಠಾನಗೊಂಡಿರುತ್ತದೆಯೇ;

(ಆ) ಕರ್ನಾಟಕ ನಗರ ಪ್ರದೇಶಗಳ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ನೀರಿನ ಯೋಜನೆಗಳಿಗೆ ಟೆಂಡರ್ ಗಳನ್ನು ಕರೆಯಬೇಕಾದರೆ ಲೋಕೋಪಯೋಗಿ ಇಲಾಖೆಯ ಸಂಹಿತೆಯನ್ನು ಅನುಸರಣೆ ಮಾಡಿರುತ್ತದೆಯೇ ; ಭೂಮಿಯ ಲಭ್ಯತೆಗನುಗುಣವಾಗಿ ಕಾಮಗಾರಿಗಳನ್ನು ಗುತ್ತಿಗೆ ನೀಡಲಾಗಿದೆಯೇ; ಎಷ್ಟು ಕಾಮಗಾರಿಗಳು ಈ ಯೋಜನೆಯಲ್ಲಿ ವಿಳಂಬವಾಗಿರುತ್ತದೆ;

(ಇ) ಕರ್ನಾಟಕ ನಗರ ಪ್ರದೇಶಗಳ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಕೇಂದ್ರ ನೆರವಿನ ಸದ್ಬಳಕೆಯಲ್ಲಿ ಎಷ್ಟು ಯೋಜನೆಗಳಲ್ಲಿ ನಷ್ಟವಾಗಿರುತ್ತದೆ ; ಈ ಸಂಬಂಧ ಲೆಕ್ಕಪರಿಶೋಧನೆ ನಡೆದಿರುತ್ತದೆಯೇ ;

(ಈ) ಮೈಸೂರು ನಗರ ನೀರು ಸರಬರಾಜು ಯೋಜನೆಯಲ್ಲಿ ಮಂಡಳಿಯು ಎಷ್ಟು ಹಣವನ್ನು ನೀರು ಸರಬರಾಜು ಯೋಜನೆಗೆ ಖರ್ಚು ಮಾಡಿರುತ್ತದೆ ; ಸದರಿ ಯೋಜನೆಯು ಸಫಲತೆಯನ್ನು ಕಂಡಿದೆಯೇ ?

## ಬೆಂಗಳೂರು ಮಲ್ಲೇಶ್ವರಂ ಸಹಕಾರ ಸಂಘದ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :-**

೨೧೨೬ (೨೩೮೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ಮಲ್ಲೇಶ್ವರಂ ಸಹಕಾರ ಸಂಘದಲ್ಲಿರುವ ಒಟ್ಟು ಸದಸ್ಯರ ಸಂಖ್ಯೆ ಎಷ್ಟು ; ಮಲ್ಲೇಶ್ವರಂ ಸಹಕಾರ ಸಂಘಕ್ಕೆ ಸರ್ಕಾರದಿಂದ ಯಾವಾಗ ಆಡಳಿತಾಧಿಕಾರಿಯನ್ನು ನೇಮಿಸಲಾಗಿದೆ; ಸದರಿ ಸಂಘವನ್ನು ಯಾವಾಗ ಲಿಕ್ವಿಡೇಟ್ ಮಾಡಲಾಯಿತು ;

(ಆ) ಮಲ್ಲೇಶ್ವರಂ ಸಹಕಾರ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಕ ಮಾಡಿದ ನಂತರ ಎಷ್ಟು ಸರ್ವ ಸದಸ್ಯರ ಸಭೆಯನ್ನು ನಡೆಸಲಾಗಿದೆ; ಯಾವ ಸರ್ವ ಸದಸ್ಯರ ಸಭೆಯಲ್ಲಿ ಸಹಕಾರ ಸಂಘದ ಆಸ್ತಿಯನ್ನು ಮಾರಾಟ ಮಾಡಲು ತೀರ್ಮಾನ ತೆಗೆದುಕೊಳ್ಳಲಾಯಿತು ;

ಮಲ್ಲೇಶ್ವರಂ ಸಹಕಾರ ಸಂಘದ ಒಟ್ಟು ಆಸ್ತಿಯ ಇಂದಿನ ಮಾರುಕಟ್ಟೆ ಬೆಲೆ ಎಷ್ಟು ; ಮಲ್ಲೇಶ್ವರಂ ಸಹಕಾರ ಸಂಘದ ಎಷ್ಟು ಆಸ್ತಿಯನ್ನು ಸಹಕಾರಿ ಇಲಾಖೆಯು ಆಡಳಿತಾಧಿಕಾರಿಗಳು ಮತ್ತು ಲಿಕ್ವಿಡೇಟರ್‌ಗಳು ಇಲ್ಲಿಯವರೆಗೆ ಮಾರಾಟ ಮಾಡಿರುತ್ತಾರೆ ;

(ಇ) ಸಹಕಾರ ಸಂಘದ ಕಾಯ್ದೆ ಪ್ರಕಾರ ಲಿಕ್ವಿಡೇಟ್ ಆದ ನಂತರ ಸಂಘದ ಆಸ್ತಿಯನ್ನು ಸಂಘದ ಸದಸ್ಯರಿಗೆ ಹಂಚಲು ಕಾನೂನಿನಲ್ಲಿ ಅವಕಾಶವಿಲ್ಲವೇ ; ಒಂದು ಸಹಕಾರ ಸಂಘದ ಆಸ್ತಿಯನ್ನು ಸದಸ್ಯರಿಗೆ ನೀಡದೇ ಸರ್ಕಾರ ಸ್ವಾಧೀನಪಡಿಸಿಕೊಳ್ಳಲು ಸರ್ಕಾರಿ ಕಾಯ್ದೆಯಲ್ಲಿ ಅವಕಾಶವಿದೆಯೇ ;

(ಈ) ಮಲ್ಲೇಶ್ವರಂ ಸಹಕಾರ ಸಂಘದ ಆಸ್ತಿಯನ್ನು ರಾಜ್ಯ ಸರ್ಕಾರ ಪಡೆದುಕೊಂಡಿದೆಯೇ ; ಪಡೆದುಕೊಂಡಿದ್ದಲ್ಲಿ, ಒಂದು ಸಹಕಾರ ಸಂಘದ ಆಸ್ತಿಯನ್ನು ಸರ್ಕಾರ ಪಡೆಯಲು ಕಾನೂನಿನಲ್ಲಿ ಅವಕಾಶವಿದೆಯೇ ?

## ಬೆಂಗಳೂರು ಜಲ ಮಂಡಳಿ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೨೧೨೭ (೨೩೮೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಎಷ್ಟು ಜನರನ್ನು ಸದಸ್ಯರನ್ನಾಗಿ ನಾಮನಿರ್ದೇಶನ ಮಾಡಲಾಗಿರುತ್ತದೆ ; ಹಾಗೂ ಅವರು ಯಾರು ಯಾರು ; ನಾಮನಿರ್ದೇಶಿತ ಸದಸ್ಯರಿಗೆ ಆಡಳಿತಾತ್ಮಕ ನಿರ್ಣಯಗಳಿಗೆ ಸಂಬಂಧಪಟ್ಟಂತೆ ನಿರ್ದೇಶನ ನೀಡಲು ಕಾನೂನಿನಲ್ಲಿ ಅವಕಾಶವಿದೆಯೇ ;

(ಆ) ಬೆಂಗಳೂರು ಜಲ ಮಂಡಳಿಯಲ್ಲಿ ಮುಖ್ಯ ಅಭಿಯಂತರರಾಗಿ ಕಾರ್ಯನಿರ್ವಹಿಸಿದವರಿಗೆ ನಿವೃತ್ತಿಯ ನಂತರವೂ ಸೇವಾ ವಿಸ್ತರಣೆ ನೀಡಲಾಗಿತ್ತೇ ; ನೀಡಿದ್ದಲ್ಲಿ, ಕಾನೂನಿನಲ್ಲಿ ಅವಕಾಶವಿದೆಯೇ ;

(ಇ) ಬೆಂಗಳೂರು ಜಲ ಮಂಡಳಿಯಲ್ಲಿ ನಿವೃತ್ತ ನೌಕರರಾದ ಮುಖ್ಯ ಅಭಿಯಂತರರನ್ನು ಆಡಳಿತ ಮಂಡಳಿಯ ಸದಸ್ಯರಾಗಿ ನೇಮಿಸಲಾಗಿದೆಯೇ ; ನೇಮಿಸಿದ್ದಲ್ಲಿ, ಎಂದಿನಿಂದ ಇವರ ನೇಮಕವಾಗಿದೆ ; ಇವರಿಗೆ ಕಾನೂನು ಬಾಹಿರವಾಗಿ ವಾಹನ ಮತ್ತು ಕೊಠಡಿಯನ್ನು ನೀಡಲಾಗಿದೆಯೇ ; ನೀಡಿದ್ದಲ್ಲಿ, ಬೆಂಗಳೂರು ಜಲ ಮಂಡಳಿಯು ದಿನಾಂಕ: ೧೩.೦೬.೨೦೧೬ ಹಾಗೂ ೦೪.೦೮.೨೦೧೬ ರಂದು ಹೊರಡಿಸಿರುವ ಜ್ಞಾಪನಾ ಪತ್ರಗಳಿಗೆ ಅನುಗುಣವಾಗಿದೆಯೇ ; ಅನುಗುಣವಾಗಿಲ್ಲದೇ ಇದ್ದಲ್ಲಿ, ಇದಕ್ಕೆ ಕಾರಣರಾದ ಅಧಿಕಾರಿಗಳಿಂದ ನಷ್ಟ ಭರ್ತಿಗೆ ಕ್ರಮವನ್ನು ಜರುಗಿಸಲಾಗುವುದೇ ;

(ಈ) ಬೆಂಗಳೂರು ಜಲ ಮಂಡಳಿಯು ನಾಮನಿರ್ದೇಶನ ಸದಸ್ಯರು ಜಲ ಮಂಡಳಿಯ ಹಣವನ್ನು ನಿರ್ದಿಷ್ಟ ಬ್ಯಾಂಕಿನಲ್ಲಿ ಠೇವಣಿ ಮಾಡಲು ಲಿಖಿತ ನಿರ್ದೇಶನ ನೀಡಿದ್ದಾರೆಯೇ ; ಬೆಂಗಳೂರು ಜಲ ಮಂಡಳಿಯು ಬೆಂಗಳೂರನ್ನು ಹೊರತುಪಡಿಸಿ ಬೇರೆ ಪ್ರದೇಶದ ಯಾವ ಬ್ಯಾಂಕುಗಳಲ್ಲಿ ಎಷ್ಟು ಹಣವನ್ನು ಠೇವಣಿ ಮಾಡಿರುತ್ತದೆ ?

## ಮಹಾನಗರಗಳಲ್ಲಿ ಕಸದ ಸದ್ಭಳಕೆ ಮತ್ತು ವೆಚ್ಚದ ವಿವರ ಕುರಿತು

**ಶ್ರೀ ವಿ.ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೨೮ (೨೩೩೭) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಬೆಂಗಳೂರು ಸೇರಿದಂತೆ ರಾಜ್ಯದ ಮಹಾನಗರಗಳ ಪ್ರದೇಶ ವ್ಯಾಪ್ತಿಯ ಕಸ ವಿಂಗಡಣೆಯಿಂದ ಉತ್ಪಾದನೆಯಾಗುವ ಕಸವನ್ನು ಸಾವಯವ ಗೊಬ್ಬರವನ್ನಾಗಿ ಪರಿವರ್ತಿಸಲು ರಾಜ್ಯ ಸರ್ಕಾರ ಸಿದ್ಧವಿದೆಯೇ ;

(ಆ) ಇದಕ್ಕಾಗಿ ಯಾವ ವೈಜ್ಞಾನಿಕ ಕ್ರಮಗಳನ್ನು ಅನುಸರಿಸಲಾಗುತ್ತದೆ; ಇದರ ಸಾಧಕ-ಬಾಧಕಗಳ : (ವಿವರ ನೀಡುವುದು)

(ಇ) ಈಗಾಗಲೇ ಈ ರೀತಿಯ ಉತ್ಪಾದನೆಯನ್ನು ಸರ್ಕಾರ ಕೈಗೊಂಡಿದೆಯೇ ; ಎಲ್ಲಿ ಉತ್ಪಾದನೆ ಮಾಡಲಾಗುತ್ತಿದೆ ;

(ಈ) ರಾಜ್ಯ ಸರ್ಕಾರವೇ ಈ ಯೋಜನೆ ರೂಪಿಸಿದೆಯೇ ; ಅಥವಾ ಖಾಸಗಿ ಸಂಸ್ಥೆ ಏಜೆನ್ಸಿಗಳಿಗೆ ನೀಡಲಾಗುವುದೇ ;

(ಉ) ಇದಕ್ಕೆ ಸಾರ್ವಜನಿಕರಿಂದ ಪ್ರತಿಕ್ರಿಯೆ ಹೇಗಿದೆ ; ಸದರಿ ಸಾವಯವ ರಸಗೊಬ್ಬರನ್ನು ಯಾವ ದರದಲ್ಲಿ ಯಾರಿಗೆ ಮಾರಾಟ ಮಾಡಲಾಗುತ್ತದೆ ;

(ಊ) ಸದರಿ ಗೊಬ್ಬರ ತಯಾರಿಕೆಗೆ ಅನುಸರಿಸುವ ಕ್ರಮಗಳೇನು ; ಒಂದು ಮಹಾನಗರ ಪ್ರದೇಶದಿಂದ ಎಷ್ಟು ; ಪ್ರಮಾಣದ ಕಸದಿಂದ ಎಷ್ಟು ಪ್ರಮಾಣದ ಸಾವಯವ ಗೊಬ್ಬರ ತಯಾರಿಸಬಹುದಾಗಿದೆ; ಇದಕ್ಕಾಗಿ ತಗಲುವ ವೆಚ್ಚವೆಷ್ಟು ? (ವಿವರ ಒದಗಿಸುವುದು)

## ಬಿ-ಖಾತಾ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ೧೧ಬಿ ನಮೂನೆ ಮತ್ತು ಹಿಂಪಡೆದ ಕುರಿತು

**ಶ್ರೀ ವಿ.ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದರು) :-**

೨೧೨೯(೨೩೫೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಿ–ಖಾತಾ ಅಂದರೆ ಏನು ; ಬಿ–ಖಾತೆ ಹೊಂದಿದವರಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅನುಮತಿ ಹಾಗೂ ನಗರ ಸ್ಥಳೀಯ ಆಡಳಿತದ ನಕ್ಷೆ ಇರುತ್ತದೆಯೇ ;

(ಆ) ಪಿ.ಐ.ಡಿ ಇಲ್ಲದೇ ಬಿ–ಖಾತೆ ಜಮೀನು ಪಡೆಯುವ ಪದ್ಧತಿಯು ಸರಿಯಾದ ಕ್ರಮವೇ ; ಇದರಿಂದ ಹೆಚ್ಚಿನ ವಂಚನೆ ಪ್ರಕರಣಗಳು ಬೆಳಕಿಗೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಬಿ–ಖಾತೆಯ ಪದ್ಧತಿಯನ್ನೇ ರದ್ದುಪಡಿಸಲು ಸರ್ಕಾರ ಉದ್ದೇಶಿಸಿದೆಯೇ ; (ವಿವರ ನೀಡುವುದು)

(ಈ) ಈ ನಿಟ್ಟಿನಲ್ಲಿ ನಗರ ವ್ಯಾಪ್ತಿಯಲ್ಲಿಯ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿನ ಜಮೀನಿಗೆ ನಮೂನೆ ೧೧ಬಿ ನೀಡಿ ಬಳಿಕ ಹಿಂದಕ್ಕೆ ಪಡೆದಿರುವುದು ನಿಜವೇ ;

(ಉ) ಇದಕ್ಕಾಗಿ ಪ್ರತ್ಯೇಕ ಹೊಸ ತಂತ್ರಾಂಶವನ್ನು ಬಳಕೆ ಮಾಡಲು ಸರ್ಕಾರ ಸಿದ್ಧವಿದೆಯೇ ; ಇದು ಅನುಷ್ಠಾನಕ್ಕೆ ಬರುವುದು ಯಾವಾಗ ? (ವಿವರಗಳನ್ನು ಒದಗಿಸುವುದು)

## ರಾಜ್ಯದ ರೈತರಿಗೆ ಕೃಷಿ ಸಾಲವನ್ನು ಹೆಚ್ಚಳ ಮಾಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೩೦ (೨೩೬೩) ಮಾನ್ಯ ಮುಖ್ಯಮಂತ್ರಿಯುವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ರೈತರಿಗೆ ಕೃಷಿ ಸಾಲ ಮಂಜೂರು ಮಾಡಲು ಇರುವ ಮಾನದಂಡಗಳೇನು ; ಇದಕ್ಕೆ ಇರುವ ಶೇ. ಬಡ್ಡಿದರವೆಷ್ಟು ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ರೈತರಿಗೆ ನೀಡಲಾದ ಸಾಲ ಎಷ್ಟು; ಮತ್ತು ಮರುಪಾವತಿಯಾಗಿರುವ ಮೊತ್ತ ಎಷ್ಟು ;

(ಇ) ಮರು ಪಾವತಿ ಮಾಡಿದ ರೈತರಿಗೆ ನೀಡಲಾಗುವ ಸಾಲವನ್ನು ಹೆಚ್ಚು ಮಾಡುವ ಚಿಂತನೆ ಸರ್ಕಾರದ ಮುಂದಿದೆಯೇ ? (ಮಾಹಿತಿ ನೀಡುವುದು)

## ರಾಜ್ಯದ ಅಂತರ್ ರಾಜ್ಯ ಗಡಿಗಳಲ್ಲಿ ಸಿ.ಸಿ. ಕ್ಯಾಮರಾಗಳನ್ನು ಅಳವಡಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೩೧ (೨೩೬೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಅಂತರ ರಾಜ್ಯ ಗಡಿಭಾಗಗಳಲ್ಲಿ ಬದ್ರತಾ ದೃಷ್ಟಿಯಿಂದ ಯಾವ ಕ್ರಮ ವಹಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ಕೊಡಗು ಜಿಲ್ಲೆಗೆ ಅಂತರ ರಾಜ್ಯ ಗಡಿ ಭಾಗಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಲಾಗಿದೆಯೇ ; ಅಳವಡಿಸಿದ್ದಲ್ಲಿ ಎಲ್ಲೆಲ್ಲಿ ಅಳವಡಿಸಲಾಗಿದೆ ಮತ್ತು ನಿರ್ವಹಣೆಯನ್ನು ಯಾವ ರೀತಿ ಮಾಡಲಾಗುತ್ತಿದೆ ; (ಮಾಹಿತಿ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಕೊಡಗು ಜಿಲ್ಲೆಯ ಗಡಿ ಭಾಗದಲ್ಲಿ ಅಕ್ರಮ ಚಟುವಟಿಕೆಗಳ ಪ್ರಕರಣಗಳು ದಾಖಲಾಗಿವೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು?

## ರಾಜ್ಯದ ಖಾಸಗಿ ಅನುದಾನಿತ ಐ.ಟಿ.ಐ ಕಾಲೇಜು ಸಿಬ್ಬಂದಿಗಳ ವೇತನ ಹಾಗೂ ಕಾಲಮಿತಿ ಬಡ್ತಿ ಸೌಲಭ್ಯ ಕುರಿತು

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-**

೨೧೩೨ (೨೪೩೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಖಾಸಗಿ ಅನುದಾನಿತ ಐ.ಟಿ.ಐ ಕಾಲೇಜು ಸಿಬ್ಬಂದಿಯವರ ಮಾರ್ಚ್ ಮತ್ತು ಏಪ್ರಿಲ್ ೨೦೧೭ರ ವೇತನ ಇಂದಿಗೂ ಬಿಡುಗಡೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ, ಈ ರೀತಿ ವಿಳಂಬಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಆ) ಈ ಎರಡೂ ತಿಂಗಳುಗಳ ಬಾಕಿ ವೇತನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ;

(ಇ) ಖಾಸಗಿ ಅನುದಾನಿತ ಐ.ಟಿ.ಐ. ಸಿಬ್ಬಂದಿಗಳ ೧೦, ೧೫ ಹಾಗೂ ೨೦ರ ಕಾಲಮಿತಿ ಬಡ್ತಿ ನೀಡುವುದನ್ನು ಇತ್ತೀಚೆಗೆ ತಡೆ ಹಿಡಿಯಲಾಗಿದ್ದು, ನಿಜವೇ ; ಹಾಗಿದ್ದಲ್ಲಿ, ಯಾವ ಕಾರಣಕ್ಕಾಗಿ ತಡೆ ಹಿಡಿಯಲಾಗಿದೆ ? (ವಿವರ ನೀಡುವುದು)

## "ಕೌಶಲ್ಯ ಕರ್ನಾಟಕ" ಅಭಿವೃದ್ಧಿ ಯೋಜನೆ ಅಡಿ ಹಮ್ಮಿಕೊಳ್ಳಲು ಉದ್ದೇಶಿಸಿರುವ ಕಾರ್ಯಕ್ರಮಗಳ ಕುರಿತು

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-**

೨೧೩೩ (೨೪೩೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇದೇ ಮೇ– ೧೫ ರಂದು ಪ್ರಾರಂಭವಾಗಿರುವ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ ಅಡಿ ಇಲ್ಲಿಯವರೆಗೆ ಎಷ್ಟು ನಿರುದ್ಯೋಗಿ ಯುವಕ–ಯುವತಿಯರು ಕೌಶಲ್ಯ ತರಬೇತಿ ಬಯಸಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿರುತ್ತಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕಾರ್ಯಕ್ರಮದ ಅಡಿ ನೋಂದಾಯಿಸಿಕೊಂಡ ಅಭ್ಯರ್ಥಿಗಳಿಗೆ ಯಾವ ಯಾವ ರೀತಿಯ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲು ಯೋಜನೆಗಳನ್ನು ರೂಪಿಸಲಾಗಿದೆ ; (ವಿವರ ನೀಡುವುದು) ಈ ತರಬೇತಿ ಕಾರ್ಯಾಗಾರಗಳ ಅವಧಿ ಎಷ್ಟು ;

(ಇ) ನಿರುದ್ಯೋಗ ಯುವಕ–ಯುವತಿಯರಿಗೆ ಯಾವ ಯಾವ ಸಂಸ್ಥೆಗಳಿಂದ ತರಬೇತಿ ನೀಡಲು ಯೋಜನೆಗಳನ್ನು ರೂಪಸಿಲಾಗಿದೆ ; ಈ ಸಂಸ್ಥೆಯವರ ಜೊತೆಗೆ ಯಾವ ರೀತಿಯ ಒಪ್ಪಂದ ಮಾಡಿಕೊಳ್ಳಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಅಭಿವೃದ್ಧಿ ಯೋಜನೆಯಡಿ ಇಲ್ಲಿಯವರೆಗೆ ವಿಶೇಷವಾಗಿ ಎಷ್ಟು ಜನ ಪದವೀಧರ ಅಭ್ಯರ್ಥಿಗಳು ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿರುವರು ಈ ಪದವೀಧರರ ಅಭ್ಯಥಿಗಳಿಗೆ ಪ್ರತ್ಯೇಕವಾಗಿ ತರಬೇತಿಯನ್ನು ಒದಗಿಸಲು ಯಾವುದಾದರೂ ಯೋಜನೆ ರೂಪಿಸಲಾಗಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು;

L.C.F.10

(ಉ) ಈ ಕಾರ್ಯಕ್ರಮದಡಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಸ್ವಯಂ ಉದ್ಯೋಗ ಪ್ರಾರಂಭಿಸಲು ಯಾವ ರೀತಿಯ ಸಹಕಾರವನ್ನು ಸರ್ಕಾರದಿಂದ ನೀಡಲಾಗುವುದು ?

## ಸ್ಕೈವಾಕ್‌ಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದರು) :-**

೨೧೩೪ (೨೪೪೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಇರುವ ಒಟ್ಟು ಸ್ಕೈವಾಕ್‌ಗಳ ಸಂಖ್ಯೆ ಎಷ್ಟು ;

(ಆ) ಸ್ಕೈವಾಕ್ ನಿರ್ಮಾಣಕ್ಕೆ ಇರುವ ಮಾನದಂಡವೇನು ;

(ಇ) ಪಾದಚಾರಿಗಳ ಸುರಕ್ಷತೆಗಾಗಿ ನಿರ್ಮಾಣವಾಗಬೇಕಿದ್ದ ಸ್ಕೈವಾಕ್‌ಗಳು, ಜಾಹೀರಾತು ಏಜೆನ್ಸಿಗಳು ಲಾಭದ ಉದ್ದೇಶಕ್ಕಾಗಿ ನಿರ್ಮಾಣವಾಗುತ್ತಿರುವುದು ನಿಜವೇ ;

(ಈ) ಹಣಕಾಸಿನ ಸಮಸ್ಯೆಯಿದೆ ಎಂಬ ಕಾರಣಕ್ಕೆ ಸಾರ್ವಜನಿಕ ಸಹಭಾಗಿತ್ವದಲ್ಲಿ ಅವುಗಳನ್ನು ನಿರ್ಮಿಸಲು ಸರ್ಕಾರ ತೀರ್ಮಾನಿಸಿದೆಯೇ ; ಇಲ್ಲಿಯವರೆಗೆ ಎಷ್ಟು ಸಾರ್ವಜನಿಕರ ಸಹಭಾಗಿತ್ವದಲ್ಲಿ ನಿರ್ಮಿಸಲಾಗಿದೆ ; ಎಲ್ಲೆಲ್ಲಿ ನಿರ್ಮಿಸಲಾಗಿದೆ; (ವಿವರ ನೀಡುವುದು)

(ಉ) ಗುತ್ತಿಗೆ ಪಡೆದ ಏಜೆನ್ಸಿಗಳು ಲಾಭದ ಉದ್ದೇಶದಿಂದ ಪಾದಚಾರಿಗಳಿಗೆ ಅಗತ್ಯವಿರುವ ಸ್ಥಳಗಳ ಬದಲು ಜಾಹೀರಾತು

ಪ್ರದರ್ಶನಕ್ಕೆ ಅನುಕೂಲವಾಗುವ ಸ್ಥಳಗಳಲ್ಲಿ ಸ್ಕೈವಾಕ್‌ಗಳ ನಿರ್ಮಾಣ ಮಾಡಲು ಸ್ಥಳ ಆಯ್ಕೆ ಮಾಡಿ ಕೊಟ್ಟಿರುವುದು ಮತ್ತು ಏಜೆನ್ಸಿಗಳ ಪ್ರಭಾವಕ್ಕೆ ಮಣಿದ ಪಾಲಿಕೆ ಅಧಿಕಾರಿಗಳು ಅನುಮತಿ ನೀಡುತ್ತಿರುವುದು ನಿಜವೇ ;

(ಊ) ಪಾದಚಾರಿಗಳಿಗೆ ತೀವ್ರ ತೊಂದರೆಯಾಗುತ್ತಿರುವ ಪ್ರದೇಶಗಳಲ್ಲಿ ಸ್ಕೈವಾಕ್ ನಿರ್ಮಿಸುವಂತೆ ಸ್ಥಳ ಗುರುತಿಸುವವರು ಯಾರು ;

(ಋ) ಈ ಹಿಂದೆ ಇಂತಿಷ್ಟು ಬಾಡಿಗೆ ನಿಗಧಿಪಡಿಸಲಾಗಿತ್ತು ; ಆದರೆ ಈಗ ಆ ಬಾಡಿಗೆ ತೆಗೆದುಹಾಕಿರುವುದಕ್ಕೆ ಕಾರಣವೇನು ; ೩೦ ವರ್ಷಗಳ ಕಾಲ ಜಾಹೀರಾತು ಅಳವಡಿಸಿಕೊಳ್ಳಲು ಪಾಲಿಕೆ ಅನುಮತಿ ನೀಡಿರುವುದರಿಂದ, ಪಾಲಿಕೆ ಬೊಕ್ಕಸಕ್ಕೆ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಸರ್ಕಾರದಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದರು) :-**

೨೧೩೫ (೨೪೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಪ್ರಮುಖ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು ವಿವರ ನೀಡುವುದು)

(ಆ) ದೇಶದ ಪ್ರಗತಿಪರ ರಾಜ್ಯಗಳ ಪೈಕಿ ರಾಜ್ಯ ಮುಂಚೂಣಿಯಲ್ಲಿದ್ದು, ಆದರೆ ಸರ್ಕಾರಿ ಸೇವೆಯಲ್ಲಿ ಜನರಿಗೆ ಪರಿಣಾಮಕಾರಿಯಾಗಿ ತಲುಪಿಸಲು ಅಧಿಕಾರಶಾಹಿ ಬಲವನ್ನೇ ಹೊಂದದೇ ಇರಲು ಕಾರಣವೇನು ; (ವಿವರ ನೀಡುವುದು)

(ಇ) ಹುದ್ದೆಗಳು ಖಾಲಿಯಾದ ಬಗ್ಗೆ ಮತ್ತು ಕಾಲಕಾಲಕ್ಕೆ ಭರ್ತಿ ಮಾಡಬೇಕಾದ ಹುದ್ದೆಗಳು ಖಾಲಿ ಉಳಿಯಲು ಕಾರಣವೇನು;

(ಈ) ಸಿಬ್ಬಂದಿ ಕೊರತೆ ನೀಗಿಸಲು ಸರ್ಕಾರ ತೆಗೆದುಕೊಂಡ ಮಾರ್ಗವೇನು ? (ವಿವರ ನೀಡುವುದು)

## ನಾಪತ್ತೆಯಾಗುತ್ತಿರುವ ಮಕ್ಕಳ ಮತ್ತು ಮಹಿಳೆಯರ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದರು) :–**

೨೧೩೬ (೨೪೩೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೧ ವರ್ಷದಲ್ಲಿ ನಾಪತ್ತೆಯಾಗಿರುವ ಹಾಗೂ ಅಪರಿಚಿತ ಶವ ಪತ್ತೆ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ವರ್ಷಾವಾರು ವಿವರ ನೀಡುವುದು)

(ಆ) ಈ ಪೈಕಿ ಹೆಣ್ಣು ಮಕ್ಕಳು ಹಾಗೂ ಮಹಿಳೆಯರು ಹೆಚ್ಚಾಗಿ ಕಾಣೆಯಾಗುತ್ತಿರುವುದು ನಿಜವೇ ;

(ಇ) ಈ ಪೈಕಿ ಪತ್ತೆಯಾದ ಪ್ರಕರಣಗಳ ಸಂಖ್ಯೆ ಎಷ್ಟು ; ಪತ್ತೆಯಾಗದೇ ಬಾಕಿ ಉಳಿದ ಪ್ರಕರಣಗಳ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು?

## ಬಿ.ಡಿ.ಎ. ಅಧಿಕಾರಿ /ನೌಕರರು ಬಿಡಿಎ ಅಸೋಸಿಯೇಷನ್ ರವರೊಡನೆ ಸೇರಿ ಅಕ್ರಮ ಎಸಗಿರುವ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) ಮತ್ತು ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದರು) :–**

೨೧೩೭ (೨೩೧೩+೨೩೧೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಬಿಡಿಎ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್‌ಗೆ ನೀಡಿರುವ ದೊಡ್ಡಕಲ್ಲಸಂದ್ರ ಗ್ರಾಮದ ವಸತಿ ಬಡಾವಣೆ ನಕ್ಷೆಯಲ್ಲಿ ಸಿ.ಎ. ನಿವೇಶನ ರಚಿಸಲಾಗಿದೆಯೇ ; ಇದ್ದಲ್ಲಿ ವಿವರ ನೀಡುವುದು;

(ಆ) ಇಲ್ಲದಿದ್ದಲ್ಲಿ ರಚಿಸದಿರಲು ಕಾರಣವೇನು ; ಈ ಅಕ್ರಮಕ್ಕೆ ಕಾರಣರಾದವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು;

(ಇ) ಲಿಂಗಧೀರನಹಳ್ಳಿ ಬಡಾವಣೆಯಲ್ಲಿ ಅಸೋಸಿಯೇಷನ್ ನವರು ಅಕ್ರಮವಾಗಿ ಮಾರಾಟ ಮಾಡಲಾಗಿದ್ದ ಸಿ.ಎ. ನಿವೇಶನದ ವಿಸ್ತೀರ್ಣವೆಷ್ಟು ; ಇದಕ್ಕೆ ಖಾತಾ ಮಾಡಿದವರು ಯಾರು ; ಇದನ್ನು ಯಾವ ದಿನಾಂಕದಂದು ಸ್ವಾಧೀನಕ್ಕೆ ತೆಗೆದುಕೊಳ್ಳಲಾಗಿದೆ ಮತ್ತು ಸಿ.ಎ. ನಿವೇಶನದ ಖಾತಾ ಮತ್ತು ಕ್ರಯಪತ್ರವನ್ನು ರದ್ದುಪಡಿಸಲಾಗಿದೆಯೇ ; ಇಲ್ಲದಿದ್ದಲ್ಲಿ ಇಷ್ಟು ತಿಂಗಳು ಕಳೆದರೂ ಕಾನೂನು ಪ್ರಕಾರ ಕ್ರಯಪತ್ರ ರದ್ದುಪಡಿಸದಿರಲು ಕಾರಣವೇನು;

(ಈ) ದೊಡ್ಡಕಲ್ಲಸಂದ್ರ ಮತ್ತು ಲಿಂಗಧೀರನಹಳ್ಳಿ ಬಡಾವಣೆಗಳ ಯಾವ್ಯಾವ ನಿವೇಶನಗಳು ಯಾವ್ಯಾವ ದಿನಾಂಕಗಳಂದು ಬಿಡುಗಡೆಯಾಗಿವೆ; ನಿವೇಶನ ಸಂಖ್ಯೆ ದಿನಾಂಕವಾರು ತಿಳಿಸುವುದು; ಇನ್ನೂ ಬಿಡುಗಡೆಯಾಗದಿರುವ ನಿವೇಶನಗಳೆಷ್ಟು ; ಬಿಡುಗಡೆಯಾಗದಿರುವ ನಿವೇಶನಗಳಿಗೆ ಖಾತಾ ಮಾಡಿಕೊಟ್ಟಿರುವುದು ನಿಜವೇ ;

(ಉ) ಕ್ರಯಪತ್ರ ಮಾಡಿಕೊಡದಿರುವ ಜಮೀನನ್ನು ಪರಿಷ್ಕೃತ ನಕ್ಷೆಯಲ್ಲಿ ಸೇರಿಸಲು, ಪ್ರಾಧಿಕಾರದಿಂದ ಬಿಡುಗಡೆಯಾಗದಿರುವ

ನಿವೇಶನಗಳಿಗೆ ಖಾತಾ ಮಾಡಲು ಹಾಗೂ ಸಿ.ಎ. ನಿವೇಶನಕ್ಕೆ ಖಾತಾ ಮಾಡುವ ಅಕ್ರಮಗಳಿಗೆ ಕಾರಣರಾದ ಅಧಿಕಾರಿ/ನೌಕರರ ಹೆಸರು ಮತ್ತು ಹುದ್ದೆವಾರು ವಿವರ ನೀಡುವುದು ; ಇವರುಗಳ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು ?

## ಬಿ.ಡಿ.ಎ. ನೌಕರರ ಕ್ಷೇಮಾಭಿವೃದ್ಧಿ ಸಂಘದ ಅವ್ಯವಹಾರಗಳು

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) ಮತ್ತು ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದರು) :–**

೨೧೩೮ (೨೩೧೪+೨೩೧೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಬಿಡಿಎ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್‌ಗೆ ದೊಡ್ಡಕಲ್ಲಸಂದ್ರ ಮತ್ತು ಲಿಂಗಧೀರನಹಳ್ಳಿ ಗ್ರಾಮಗಳ ಯಾವ್ಯಾವ ಸರ್ವೆ ನಂಬರ್‌ಗಳಲ್ಲಿ ಎಷ್ಟೆಷ್ಟು ವಿಸ್ತೀರ್ಣದ ಜಮೀನುಗಳನ್ನು ನೀಡಲಾಗಿದೆ ; ಈ ಸರ್ವೆ ನಂಬರ್‌ಗಳ ಒಟ್ಟು ವಿಸ್ತೀರ್ಣ ಎಷ್ಟು ; ಇದರಲ್ಲಿ ಪ್ರಾಧಿಕಾರವು ಎಷ್ಟನ್ನು ಸ್ವಾಧೀನಪಡಿಸಿಕೊಂಡಿದೆ ; ಈ ಸ್ವಾಧೀನಪಡಿಸಿಕೊಂಡಿದ್ದ ಜಮೀನಿನಲ್ಲಿ ಅಸೋಸಿಯೇಷನ್‌ಗೆ ನೀಡಿದ ನಂತರ ಉಳಿದಿರುವ ಜಮೀನು ಯಾರ ಸ್ವಾಧೀನದಲ್ಲಿದೆ;

(ಆ) ದೊಡ್ಡಕಲ್ಲಸಂದ್ರ ಮತ್ತು ಲಿಂಗಧೀರನಹಳ್ಳಿ ಗ್ರಾಮಗಳ ಪ್ರಸ್ತಾವಿತ (proposal) ಮತ್ತು ಪರಿಷ್ಕೃತ (modified) ಬಡಾವಣೆ ನಕ್ಷೆಗಳು

ಯಾವ ದಿನಾಂಕಗಳಂದು ಪ್ರಾಧಿಕಾರದಿಂದ ಮಂಜೂರಾಗಿವೆ; ಈ ನಾಲ್ಕು ನಕ್ಷೆಗಳು ಮಂಜೂರಾತಿಗಾಗಿ ಯಾರ್‍ಯಾರು ಸಹಿ ಮಾಡಿದ್ದಾರೆ ಎಂಬ ಹೆಸರು, ಹುದ್ದೆ ಮತ್ತು ದಿನಾಂಕವಾರು ಮಾಹಿತಿ ನೀಡುವುದು ; (ನಕ್ಷೆಗಳ ಪ್ರತಿಗಳನ್ನು ಒದಗಿಸುವುದು)

(ಇ) ಪ್ರಸ್ತಾವಿತ ನಕ್ಷೆಯಲ್ಲಿ ಒಳಗೊಳ್ಳದ ದೊಡ್ಡಕಲ್ಲಸಂದ್ರದ ಸ.ನಂ ೧೯(ಪಿ) ಹಾಗೂ ಲಿಂಗಧೀರನಹಳ್ಳಿಯ ಸ.ನಂ. ೧/೪ ಇತರೆ ಸರ್ವೆ ನಂಬರ್‌ಗಳ ಜಮೀನುಗಳನ್ನು ಪರಿಷ್ಕೃತ ನಕ್ಷೆಯಲ್ಲಿ ಅಕ್ರಮವಾಗಿ ಸೇರಿಸಿರುವುದು ನಿಜವೆ ; ಇಲ್ಲದಿದ್ದಲ್ಲಿ ಈ ಜಮೀನುಗಳಿಗೆ ಪ್ರಾಧಿಕಾರವು ಕ್ರಯಪತ್ರ ಮಾಡಿಕೊಟ್ಟಿದೆಯೇ; ಇದ್ದಲ್ಲಿ ಪ್ರತಿ ಒದಗಿಸುವುದು ;

(ಈ) ಕ್ರಯಪತ್ರ ಮಾಡಿಕೊಡದಿರುವ ಜಮೀನನ್ನು ಪರಿಷ್ಕೃತ ನಕ್ಷೆಯಲ್ಲಿ ಸೇರಿಸಲು ಪ್ರಾಧಿಕಾರದಿಂದ ಬಿಡುಗಡೆಯಾಗದಿರುವ ನಿವೇಶನಗಳಿಗೆ ಖಾತಾ ಮಾಡಿರುವ ಹಾಗೂ ಸಿ.ಎ. ನಿವೇಶಕ್ಕೆ ಖಾತಾ ಮಾಡುವ ಅಕ್ರಮಗಳಿಗೆ ಕಾರಣರಾದ ಅಧಿಕಾರಿ/ನೌಕರರ ಹೆಸರು ಮತ್ತು ಹುದ್ದೆವಾರು ವಿವರ ನೀಡುವುದು ; ಇವರುಗಳ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು ?

## ಮುಧೋಳದಲ್ಲಿ ಗ್ರಾಮೀಣ ಪೊಲೀಸ್ ಠಾಣೆ ನಿರ್ಮಾಣದ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದರು) :-**

೨೧೩೯ (೨೪೧೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಾಗಲಕೋಟೆ ಮುಧೋಳ ತಾಲ್ಲೂಕಿನಲ್ಲಿ ಗ್ರಾಮೀಣ ಪೋಲೀಸ್ ಠಾಣೆ ನಿರ್ಮಾಣ ಮಾಡುವ ಉದ್ದೇಶವನ್ನು ಸರ್ಕಾರ ಹೊಂದಿದೆಯೇ ; ಹಾಗಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು;

(ಆ) ಹಾಗಿದ್ದಲ್ಲಿ, ಠಾಣೆ ನಿರ್ಮಾಣ ಮಾಡಲು ಪ್ರಸ್ತಾವನೆ ಬಂದಿದೆಯೇ;

(ಇ) ಠಾಣೆ ನಿರ್ಮಾಣಕ್ಕೆ ಸಿಬ್ಬಂದಿಯ ಕೊರತೆ ಇದೆಯೇ? (ವಿವರ ನೀಡುವುದು)

## ಮುಧೋಳ ತಾಲ್ಲೂಕಿನ ಒಳಚರಂಡಿ ಮಂಡಳಿಯ ಕಾಮಗಾರಿ ಕುರಿತು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದರು) :-**

೨೧೪೦(೨೪೧೮) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲ್ಲೂಕಿನ ನಗರ ಸಭೆ ವ್ಯಾಪ್ತಿಯಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಕೈಗೊಂಡಿರುವ ಕಾಮಗಾರಿಗಳು ಹಾಗೂ ಅವುಗಳ ಅಂದಾಜು ವೆಚ್ಚ ಎಷ್ಟು ; ಹಾಗೂ ಕಾಮಗಾರಿಗೆ ನೀಡಿದ ಅವಧಿ ಎಷ್ಟು ; (ವಿವರ ನೀಡುವುದು)

(ಆ) ಸದರಿ ಕಾಮಗಾರಿಯಲ್ಲಿ ಕಳಪೆ ಕಾಮಗಾರಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು ;

(ಇ) ಯೂ.ಜಿ.ಡಿ ಯೋಜನೆ ಅಡಿ ಕಾಮಗಾರಿ ಮಾಡಿದ ಗುತ್ತಿಗೆದಾರರ ಹೆಸರು ಮತ್ತು ಕಾಮಗಾರಿ ನಡೆದ ಸ್ಥಳ ಯಾವುವು ; ಸದರಿ ಕಾಮಗಾರಿಗಳಲ್ಲಿ ಪೂರ್ಣ ಮತ್ತು ಅಪೂರ್ಣಗೊಂಡ ಕಾಮಗಾರಿಗಳಾವುವು ? (ವಿವರ ನೀಡುವುದು)

## ಕೌಶಲ್ಯಾಭಿವೃದ್ಧಿ ತರಬೇತಿ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು):-**

೨೧೪೧ (೨೪೧೯) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೌಶಲ್ಯಾಭಿವೃದ್ಧಿ ಯೋಜನೆಯಡಿ ಯಾವ ಯಾವ ತರಬೇತಿ ನೀಡಲಾಗುವುದು; ಇದಕ್ಕೆ ಇರುವ ಮಾನದಂಡಗಳೇನು; (ವಿವರ ನೀಡುವುದು)

(ಆ) ತರಬೇತಿಯನ್ನು ಯಾವ ಸಂಸ್ಥೆಯಿಂದ ನೀಡಲಾಗುತ್ತದೆ; ತರಬೇತಿ ನೀಡಲು ಸಂಸ್ಥೆಗೆ ಯಾವ ಮಾನದಂಡಗಳನ್ನು ನೀಡಲಾಗಿದೆ;

(ಇ) ಸಂಘ ಸಂಸ್ಥೆಗಳು ಅಥವಾ ಟ್ರಸ್ಟ್‌ಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಕೇಂದ್ರಗಳನ್ನು ವಹಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆಯೇ?

## ಸಕ್ಕರೆ ಕರ ನಿಧಿಯಿಂದ ರಸ್ತೆ ಅಭಿವೃದ್ಧಿಪಡಿಸಿದ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು):-**

೨೧೪೨ (೨೪೨೦) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೧೦ ವರ್ಷಗಳಿಂದ ಬಾಗಲಕೋಟೆ ಜಿಲ್ಲೆಯಲ್ಲಿರುವ ಸಕ್ಕರೆ ಕಾರ್ಖಾನೆಗಳಿಂದ ಸಂಗ್ರಹವಾದ ರಸ್ತೆ ಕರ ನಿಧಿ ಎಷ್ಟು; (ಸಕ್ಕರೆ ಕಾರ್ಖಾನೆ ಹೆಸರು, ಸಂಗ್ರಹವಾದ ಮೊತ್ತ, ತಾಲ್ಲೂಕುವಾರು ಪಟ್ಟಿ ವಿವರ ನೀಡುವುದು)

(ಆ) ಸಂಗ್ರಹವಾದ ಸಕ್ಕರೆ ಕರ ನಿಧಿಯಿಂದ ಅಭಿವೃದ್ಧಿ ಪಡಿಸಿದ ರಸ್ತೆಗಳಾವುವು? (ತಾಲ್ಲೂಕುವಾರು, ವಿವರ ನೀಡುವುದು)

L.C. F. 11

## ವಿಧಾನಸಭಾ ಕ್ಷೇತ್ರಗಳಲ್ಲಿ ಮಹಿಳಾ ಮತ್ತು ಪುರುಷ ಮತದಾರರು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :-**

೨೧೪೩ (೨೩೨೪) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ೨೨೪ ವಿಧಾನಸಭಾ ಕ್ಷೇತ್ರಗಳಲ್ಲಿರುವ ಮಹಿಳಾ ಮತ್ತು ಪುರುಷ ಮತದಾರರ ಸಂಖ್ಯೆ ಎಷ್ಟು; (ಕ್ಷೇತ್ರವಾರು ವಿವರ ನೀಡುವುದು)

(ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಮತದಾರರು ಎಷ್ಟು ಸಂಖ್ಯೆಯಲ್ಲಿದ್ದಾರೆ;

(ಇ) ಕಳೆದ ಒಂದು ವರ್ಷದಲ್ಲಿ ಯಾವ ಯಾವ ಕ್ಷೇತ್ರಗಳಲ್ಲಿ ಎಷ್ಟೆಷ್ಟು ಮತದಾರರನ್ನು ಹೊಸದಾಗಿ ಮತದಾರರ ಪಟ್ಟಿಗೆ ಸೇರ್ಪಡೆ ಮಾಡಿಕೊಳ್ಳಲಾಗಿದೆ; ಆ ಮತದಾರರ ವಿವರಗಳನ್ನು (ಕ್ಷೇತ್ರವಾರು) ನೀಡುವುದು?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ವಸತಿ ಮತ್ತು ವಾಣಿಜ್ಯ ಬಳಕೆಯ ಕಟ್ಟಡಗಳ ಅಧಿಕೃತ ಮತ್ತು ಅನಧಿಕೃತ ನಿರ್ಮಾಣ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :-**

೨೧೪೪ (೨೩೨೩) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದ ೧೯೮ ವಾರ್ಡ್‌ಗಳಲ್ಲಿ ಖಾಲಿಯಿರುವ ಒಟ್ಟು ನಿವೇಶನಗಳೆಷ್ಟು; ಆ ನಿವೇಶನಗಳ ಪೈಕಿ ಎಷ್ಟು ನಿವೇಶನಗಳು ವಸತಿ ಉದ್ದೇಶಕ್ಕೆ ಮತ್ತು ಎಷ್ಟು ನಿವೇಶನಗಳು ವಾಣಿಜ್ಯ ಬಳಕೆಗೆ ಮೀಸಲಿಡಲಾಗಿದೆ; (ವಿವರ ನೀಡುವುದು)

(ಆ) ಆ ನಿವೇಶನಗಳ ಪೈಕಿ ಎಷ್ಟು ನಿವೇಶನಗಳಲ್ಲಿ ವಸತಿ ಮತ್ತು ವಾಣಿಜ್ಯ ಕಟ್ಟಡಗಳನ್ನು ನಿರ್ಮಾಣ ಮಾಡದೆ ಖಾಲಿ ಬಿಡಲಾಗಿದೆ; (ವಿವರ ನೀಡುವುದು)

(ಇ) ವಸತಿ ಮತ್ತು ವಾಣಿಜ್ಯ ಬಳಕೆಯ ಎಷ್ಟು ಕಟ್ಟಡಗಳನ್ನು ಈಗಾಗಲೇ ನಿರ್ಮಾಣ ಮಾಡಲಾಗಿದೆ; ಅವುಗಳ ಪೈಕಿ ಎಷ್ಟು ಕಟ್ಟಡಗಳು ಮಂಜೂರಾತಿ ನೀಡಿದ ನಕ್ಷೆ ಮತ್ತು ಪರವಾನಗಿ ಪ್ರಕಾರ ನಿರ್ಮಾಣ ಮಾಡಲ್ಪಟ್ಟಿದೆ; ಎಷ್ಟು ಕಟ್ಟಡಗಳನ್ನು ಅನಧಿಕೃತವಾಗಿ ನಿರ್ಮಾಣ ಮಾಡಲಾಗಿದೆ; (ವಸತಿವಾರು ಮತ್ತು ವಾಣಿಜ್ಯವಾರು ಕಟ್ಟಡಗಳ ಪ್ರತ್ಯೇಕ ವಿವರ ನೀಡುವುದು)

(ಈ) ಹಾಗೆ ನಿಯಮಗಳನ್ನು ಉಲ್ಲಂಘಿಸಿ ನಿರ್ಮಾಣ ಮಾಡಲಾದ ಎಷ್ಟು ಕಟ್ಟಡಗಳು ಮತ್ತು ಎಷ್ಟು ಜನ ಮಾಲೀಕರ ಮೇಲೆ ಇದುವರೆಗೆ ಸರ್ಕಾರ ಕ್ರಮಗಳನ್ನು ತೆಗೆದುಕೊಂಡಿದೆ; ಆ ಕ್ರಮಗಳಾವುವು?

## ಕೇಂದ್ರ ಸರ್ಕಾರ ನೀಡುತ್ತಿರುವ ಅನುದಾನದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೪೫ (೨೩೫೩) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರದಿಂದ ಯೋಜನೆ ಅಲ್ಲದೆ ಇತರೆ ಯೋಜನೆಗಳಿಗೆ ಅನುದಾನ ಬರುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ಅಂತಹ ಯೋಜನೆಗಳು ಯಾವುವು; ಪ್ರತಿ ಯೋಜನೆಗಳಿಗೆ ೨೦೧೩-೧೪ ರಿಂದ ಇದುವರವಿಗೆ ಬಂದಿರುವ ಅನುದಾನದ ಹಣದ ಮೊತ್ತ ಎಷ್ಟು; ಖರ್ಚು ಮಾಡಿರುವ ಹಣ ಎಷ್ಟು? (ಪೂರ್ಣ ವಿವರವನ್ನು ಯೋಜನೆವಾರು ವರ್ಷಾವಾರು ನೀಡುವುದು)

## ಮಹಿಳೆಯರು ಮತ್ತು ಮಕ್ಕಳ ಮೇಲೆ ನಡೆದಿರುವ ದೌರ್ಜನ್ಯಗಳು ಮತ್ತು ಪರಿಹಾರ ನೀಡಿಕೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :-**

೨೧೪೬ (೨೩೨೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೪-೧೫, ೨೦೧೫-೧೬ ಮತ್ತು ೨೦೧೬-೧೭ನೇ ಸಾಲುಗಳಲ್ಲಿ ರಾಜ್ಯದಲ್ಲಿ ಮಹಿಳೆಯರು ಮತ್ತು ಮಕ್ಕಳ ಮೇಲೆ ನಡೆದಿರುವ ದೌರ್ಜನ್ಯಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು ಮತ್ತು ಪ್ರಕರಣವಾರು ವಿವರ ನೀಡುವುದು)

(ಆ) ಸದರಿ ಪ್ರಕರಣಗಳಲ್ಲಿ ಎಷ್ಟು ಜನ ಸಂತ್ರಸ್ಥೆಯರಿಗೆ ರಾಜ್ಯ ಸರ್ಕಾರದಿಂದ ನಿಯಮಾವಳಿಗಳ ರೀತ್ಯಾ ಪರಿಹಾರ ನೀಡಲಾಗಿದೆ; (ಪ್ರಕರಣವಾರು ಮಾಹಿತಿ ನೀಡುವುದು)

(ಇ) ಸದರಿ ಅವಧಿಯಲ್ಲಿ ಕೇಂದ್ರ ಸರ್ಕಾರದ ನಿರ್ಭಯ ನಿಧಿಯಿಂದ ಎಷ್ಟು ಪರಿಹಾರ ಮೊತ್ತವನ್ನು ಪಡೆದುಕೊಳ್ಳಲಾಗಿದೆ; ಆ ಪರಿಹಾರ ಮೊಬಲಗನ್ನು ಯಾವ ಯಾವ ಸಂತ್ರಸ್ಥೆಯರಿಗೆ ನೀಡಲಾಗಿದೆ? (ತಾಲ್ಲೂಕುವಾರು ಪ್ರಕರಣವಾರು ವಿವರ ನೀಡುವುದು)

## ಫೋಕ್ಸೊ ಕೇಸುಗಳ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :-**

೨೧೪೭ (೨೩೨೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೩-೨೦೧೪, ೨೦೧೪-೨೦೧೫, ೨೦೧೫-೨೦೧೬, ೨೦೧೬-೨೦೧೭ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಫೋಕ್ಸೊ

ಕೇಸುಗಳು ದಾಖಲಾಗಿವೆ; ಯಾವ ಯಾವ ಠಾಣೆಗಳಲ್ಲಿ ದಾಖಲಾಗಿವೆ; ಆಪಾದಿತರು ಯಾರು ಯಾರು; (ಠಾಣೆವಾರು ವಿವರ ನೀಡುವುದು)

(ಆ) ೨೦೧೩-೨೦೧೪, ೨೦೧೪-೨೦೧೫, ೨೦೧೫-೨೦೧೬, ೨೦೧೬-೨೦೧೭ನೇ ಸಾಲಿನಲ್ಲಿ ಸದರಿ ಪೋಕ್ಸೊ ಕೇಸಿನಲ್ಲಿ ಎಷ್ಟು ಕೇಸುಗಳು ಈಗಾಗಲೇ ಇತ್ಯರ್ಥವಾಗಿವೆ; ಹಾಗೂ ಎಷ್ಟು ಇತ್ಯರ್ಥವಾಗದೇ ಉಳಿದಿದೆ; (ಕೇಸುವಾರು ಪೊಲೀಸ್ ಠಾಣಾ ವಿವರ ನೀಡುವುದು)

(ಇ) ಈ ಮೇಲಿನ ಪೋಕ್ಸೊ ಕೇಸುಗಳಲ್ಲಿ ಸಂತ್ರಸ್ಥರಿಗೆ ಎಷ್ಟೆಷ್ಟು ಪರಿಹಾರ ಮೊತ್ತವನ್ನು ನೀಡಲಾಗಿದೆ; ಪರಿಹಾರವನ್ನು ಪಡೆದಿರುವ ಸಂತ್ರಸ್ಥರ ಸಂಖ್ಯೆ ಎಷ್ಟು? (ಪೂರ್ಣ ವಿವರ ನೀಡುವುದು)

## ಸುಪ್ರೀಂ ಕೋರ್ಟ್‌ನ ಮೀಸಲಾತಿ ಆದೇಶ ಪಾಲನೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೪೮ (೨೪೦೩) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸುಪ್ರೀಮ್ ಕೋರ್ಟ್ ಇತ್ತೀಚಿಗೆ ನೀಡಿದ ಪವಿತ್ರ ಮತ್ತು ಇತ್ಯಾದಿ ತೀರ್ಪಿನಿಂದಾಗಿ ಮುಂಬಡ್ತಿಯಲ್ಲಿ ಮೀಸಲಾತಿಯನ್ನು ನಿಷೇಧ ಮಾಡಲಾಗಿದೆಯೇ;

(ಆ) ಈ ತೀರ್ಪು ಯಾವ ಯಾವ ಹುದ್ದೆಗೆ ಅನ್ವಯ ಆಗುತ್ತದೆ; ತೀರ್ಪಿನ ಪ್ರಕಾರ ಯಾವ ಯಾವ ವರ್ಗಗಳಿಗೆ ಎಷ್ಟು ಪರ್ಸೆಂಟ್ ಮೀಸಲಾತಿ ನೀಡಬೇಕಿದೆ; (ತೀರ್ಪಿನ ಪ್ರತಿ ನೀಡುವುದು)

(ಇ) ಸುಪ್ರೀಮ್ ಕೋರ್ಟ್ ಆದೇಶದ ವಿರುದ್ಧ SC/ST ನೌಕರರ ಬಡ್ತಿ ಮೀಸಲಾತಿಯನ್ನು ರಕ್ಷಿಸಲು ತೆಗೆದುಕೊಂಡ ಕ್ರಮಗಳೇನು;

(ಈ) ಸುಪ್ರೀಮ್ ಕೋರ್ಟ್‌ನ ಈ ತೀರ್ಪು ಸಂವಿಧಾನದ ೮೫ನೇ ತಿದ್ದುಪಡಿ ಉಲ್ಲಂಘನೆಯಾಗುವುದಿಲ್ಲವೇ; ಹಾಗೂ ಈ ಹಿಂದೆ ೯ ಮಂದಿ ನ್ಯಾಯಾಧೀಶರು, ನೀಡಿರುವ ತೀರ್ಪಿಗೆ ವಿರುದ್ಧವಾಗಿರುವುದಿಲ್ಲವೇ; ಈ ಬಗ್ಗೆ ಸರ್ಕಾರದ ನಿಲುವೇನು?

## ಪೊಲೀಸ್ ಸಿಬ್ಬಂದಿಗಳಿಗೆ ಸಾರ್ವತ್ರಿಕ ರಜೆಯ ವೇತನ ನೀಡುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೪೯ (೨೪೦೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪೊಲೀಸ್ ಪೇದೆಯಿಂದ ಮುಖ್ಯ ಪೇದೆಯವರೆಗೆ ಸಾರ್ವತ್ರಿಕ ರಜೆಗಳಲ್ಲಿ ಕರ್ತವ್ಯ ನಿರ್ವಹಿಸಿದ ನೌಕರರಿಗೆ ತಿಂಗಳ ಪೂರ್ಣ ವೇತನ ನೀಡಲಾಗುತ್ತಿದೆಯೇ; ಅದೇ ರೀತಿ A.S.I ನಿಂದ S.I ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಸಾರ್ವತ್ರಿಕ ರಜೆಯ ಅರ್ಧ ವೇತನ ನೀಡಲಾಗುತ್ತಿದೆಯೇ;

(ಆ) A.S.I ನಿಂದ S.I ವರೆಗೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಸಾರ್ವತ್ರಿಕ ರಜೆಯಲ್ಲಿ ಕರ್ತವ್ಯ ನಿರ್ವಹಿಸಿದ ಪೂರ್ಣ ಪ್ರಮಾಣದ ವೇತನ ನೀಡದೆ ತಾರತಮ್ಯ ಮಾಡುತ್ತಿದ್ದು, ಇದನ್ನು ಹೋಗಲಾಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಪೊಲೀಸ್ ಸಿಬ್ಬಂದಿಗಳಿಗೆ ಅಧಿವೇಶನದ ಸಂದರ್ಭದಲ್ಲಿ ಭತ್ಯೆ ನೀಡಲಾಗುತ್ತಿದೆಯೇ;

(ಈ) ಹಾಗಿದ್ದಲ್ಲಿ, ಶಾಸಕರ ಮತ್ತು ಇತರೆ ಗಣ್ಯ ವ್ಯಕ್ತಿಗಳ ಬಳಿ ಕೆಲಸ ಮಾಡುತ್ತಿರುವ ಪೊಲೀಸ್ ಸಿಬ್ಬಂದಿಗಳಿಗೆ ಏಕೆ ನೀಡಲಾಗುತ್ತಿಲ್ಲ; ಈ ಸೌಲಭ್ಯವನ್ನು ಎಲ್ಲಾ ಶಾಸಕರು/ಮಂತ್ರಿಗಳ ಬಳಿ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್‌ಗಳಿಗೆ ನೀಡಲು ಕ್ರಮ ಜರುಗಿಸಲಾಗುವುದೇ?

## ಹೊರ ಗುತ್ತಿಗೆ ಆಧಾರದಲ್ಲಿ ನೇಮಕಗೊಂಡ ನೌಕರರ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೫೦ (೨೪೦೪) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ರಾಜ್ಯದ ವಿವಿಧ ಇಲಾಖೆ/ನಿಗಮ/ಮಂಡಳಿಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು;

(ಆ) ಯಾವ ಯಾವ ವೃಂದಗಳಲ್ಲಿ ನೇಮಕ ಮಾಡಿಕೊಳ್ಳಲಾಗಿದೆ, ಈ ಹುದ್ದೆಗಳಲ್ಲಿ ನೇಮಕಗೊಂಡಿರುವ ಅಧಿಕಾರಿ/ನೌಕರರಿಗೆ ನೀಡಲಾಗುತ್ತಿರುವ ವೇತನವೆಷ್ಟು;

(ಇ) ಗುತ್ತಿಗೆ ಏಜೆನ್ಸಿಗಳ ಮುಖಾಂತರ ಗುತ್ತಿಗೆದಾರರಿಗೆ ನೀಡುತ್ತಿರುವ ಪ್ರತಿ ಹುದ್ದೆಗಳಿಗೆ ನಿಗಧಿಪಡಿಸಿರುವ ವೇತನ ಎಷ್ಟು; ಗುತ್ತಿಗೆದಾರರು ನೌಕರರಿಗೆ ನೀಡುತ್ತಿರುವ ವೇತನ ಎಷ್ಟು?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ನಿರ್ಮಿಸಿರುವ ವಾಣಿಜ್ಯ ಮಳಿಗೆಗಳ ಹಂಚಿಕೆ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೫೧ (೨೪೦೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಇದುವರೆವಿಗೆ ಎಷ್ಟು ವಾಣಿಜ್ಯ ಮಳಿಗೆಗಳನ್ನು ಎಲ್ಲೆಲ್ಲಿ ನಿರ್ಮಿಸಲಾಗಿದೆ;

(ಆ) ನಿರ್ಮಿಸಿದ ಮಳಿಗೆಗಳನ್ನು ಸಾರ್ವಜನಿಕರಿಗೆ ಹಂಚಿಕೆ ಮಾಡಲು ಯಾವ ನಿಯಮಗಳನ್ನು ಪಾಲಿಸಲಾಗಿದೆ; ಆದೇಶದ ಪ್ರತಿಯನ್ನು ನೀಡುವುದು;

(ಇ) ನಿರ್ಮಿಸಿದ ಮಳಿಗೆಗಳನ್ನು ಹಂಚಿಕೆ ಮಾಡುವಾಗ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳಿಗೆ ಮೀಸಲಾತಿ ಪಾಲಿಸಲಾಗಿದೆಯೇ; ಇದುವರೆವಿಗೆ ಎಷ್ಟೆಷ್ಟು ಸಂಖ್ಯೆಯ ಮಳಿಗೆಗಳನ್ನು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳಿಗೆ ನೀಡಲಾಗಿದೆ; ಯಾರು ಯಾರಿಗೆ ನೀಡಲಾಗಿದೆ; (ಹೆಸರು ಮತ್ತು ವಿಳಾಸ, ಜಾತಿ ಇತ್ಯಾದಿ ವಿವರಗಳನ್ನು ನೀಡುವುದು)

(ಈ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಹೆಚ್.ಎಸ್.ಆರ್. ಮತ್ತು ಓ.ಎಂ.ಬಿ.ಆರ್. ಬಡಾವಣೆಗಳಲ್ಲಿ ನಿರ್ಮಿಸಿರುವ ಒಟ್ಟು ನಿವೇಶನಗಳ ಸಂಖ್ಯೆ ಎಷ್ಟು; ಯಾವ ಯಾವ ಅಳತೆಯ ಎಷ್ಟೆಷ್ಟು ನಿವೇಶನಗಳನ್ನು ನಿರ್ಮಿಸಲಾಗಿದೆ;

(ಉ) ಈ ಎರಡು ಬಡಾವಣೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಯಾವ ಯಾವ ಅಳತೆಯ ಎಷ್ಟೆಷ್ಟು ಸಂಖ್ಯೆಯ ನಿವೇಶನಗಳನ್ನು ನೀಡಲಾಗಿದೆ; ಹಾಗೂ ಈ ಎರಡು ಬಡಾವಣೆಗಳಲ್ಲಿ ಹಂಚಿಕೆಯಾಗದೆ ಉಳಿದಿರುವ ನಿವೇಶನಗಳೆಷ್ಟು? (ವಿವರಗಳನ್ನು ನೀಡುವುದು)

## ರಾಜ್ಯದಲ್ಲಿ ಮಹಿಳಾ ಪೊಲೀಸ್ ಠಾಣೆಗಳನ್ನು ಹೆಚ್ಚಿಸುವ ಕುರಿತು

**ಶ್ರೀಮತಿ ವೀಣಾ ಅಚ್ಚಯ್ಯ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು):-**

೨೧೪೨ (೨೩೧೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಮಹಿಳಾ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ಈ ಠಾಣೆಗಳನ್ನು ಮತ್ತಷ್ಟು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)

(ಇ) ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಎಷ್ಟು ಠಾಣೆಗಳನ್ನು ಹೊಸದಾಗಿ ಆರಂಭಿಸಲಾಗುತ್ತಿದೆ;

(ಈ) ಸದರಿ ಮಹಿಳಾ ಪೊಲೀಸ್ ಠಾಣೆಗಳನ್ನು ಉನ್ನತೀಕರಿಸಿ, ತಾಂತ್ರಿಕವಾಗಿ ಮೇಲ್ದರ್ಜೆಗೇರಿಸಿ, ಮತ್ತಷ್ಟು ಮಹಿಳಾ ಸ್ನೇಹಿಯನ್ನಾಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

## ಜ್ಯೋತಿ ಸಂಜೀವಿನಿ ಯೋಜನೆಯಲ್ಲಿ ಎಲ್ಲಾ ಖಾಯಿಲೆಗಳಿಗೆ ವೈದ್ಯಕೀಯ ಚಿಕಿತ್ಸೆಗೆ ಅವಕಾಶ ಕಲ್ಪಿಸುವ ಕುರಿತು

**ಶ್ರೀಮತಿ ವೀಣಾ ಅಚ್ಚಯ್ಯ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು):-**

೨೧೪೩ (೨೩೧೨) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಜ್ಯೋತಿ ಸಂಜೀವಿನಿ ಯೋಜನೆಯಡಿ ಸರ್ಕಾರಿ ನೌಕರರು ಹಾಗೂ ಅವರ ಅವಲಂಬಿತರಿಗೆ ಯಾವೆಲ್ಲ ಖಾಯಿಲೆ/ರೋಗಗಳಿಗೆ ವೈದ್ಯಕೀಯ ಚಿಕಿತ್ಸೆ ಕಲ್ಪಿಸಲಾಗಿದೆ; (ನಿಯಮಗಳ ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಯೋಜನೆಯಡಿ ವೈದ್ಯಕೀಯ ಚಿಕಿತ್ಸೆಗೆ ಅವಕಾಶ ಕಲ್ಪಿಸದೆ ಇರುವ ಇತರೆ ಎಲ್ಲಾ ಖಾಯಿಲೆ/ರೋಗಗಳ ಚಿಕಿತ್ಸೆಗೂ ಅವಕಾಶ ಕಲ್ಪಿಸಿ, ಬೇರೆ ಕಡೆ ಚಿಕಿತ್ಸೆ ಪಡೆದು ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ಕಾರ್ಯಾಲಯಗಳಿಗೆ ಅಲೆಯುವುದನ್ನು ತಪ್ಪಿಸಲು ಎಲ್ಲಾ ಖಾಯಿಲೆಗಳಿಗೆ ಚಿಕಿತ್ಸೆಯನ್ನು ಈ ಯೋಜನೆಯಡಿ ತರುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ;

(ಇ) ನೌಕರ/ಅಧಿಕಾರಿ ಹಾಗೂ ಅವರ ಅವಲಂಬಿತರಿಗೆ ಎಲ್ಲಾ ಖಾಯಿಲೆಗಳಿಗೆ ಚಿಕಿತ್ಸೆ ಹಾಗೂ ಹೊರರೋಗಿ (ಓಪಿಡಿ) ಸೇವೆಗಳನ್ನು ಕೂಡ ನೋಂದಾಯಿತ ಆಸ್ಪತ್ರೆಗಳಲ್ಲಿ ಪಡೆಯುವಂತೆ ನಿಯಮಗಳನ್ನು ಮಾರ್ಪಡಿಸಲಾಗುವುದೇ? (ಸಂಪೂರ್ಣ ವಿವರ ನೀಡುವುದು)

## ಏಳನೇ ವೇತನ ಆಯೋಗ ರಚನೆ ಕುರಿತು

**ಶ್ರೀಮತಿ ವೀಣಾ ಅಚ್ಚಯ್ಯ ಎಸ್. (ವಿಧಾನ ಸಭೆಯಿಂದ ಚುನಾಯಿತರಾದವರು):-**

೨೧೫೪ (೨೩೧೧) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಸರ್ಕಾರಿ ನೌಕರರ ಬಹುದಿನಗಳ ಬೇಡಿಕೆಯಾದ ಏಳನೇ ವೇತನ ಆಯೋಗವನ್ನು ರಚಿಸಲಾಗಿದೆಯೇ;

(ಆ) ರಚಿಸಿದ್ದಲ್ಲಿ, ಸದರಿ ಆಯೋಗವು ಯಾವ ಕಾಲಮಿತಿಯೊಳಗೆ ತನ್ನ ಶಿಫಾರಸ್ಸುಗಳನ್ನು ಸರ್ಕಾರಕ್ಕೆ ಸಲ್ಲಿಸುವುದು;

(ಇ) ಕೇಂದ್ರ ಹಾಗೂ ರಾಜ್ಯ ಸರ್ಕಾರಿ ನೌಕರರ ವೇತನ ಹಾಗೂ ಭತ್ಯೆಗಳ ನಡುವೆ ತುಂಬಾ ವ್ಯತ್ಯಾಸವಿರುವುದರಿಂದ, ಆಯೋಗದ ಶಿಫಾರಸ್ಸುಗಳನ್ನು ಯಾವ ದಿನಾಂಕದಿಂದ ಪೂರ್ವಾನ್ವಯಗೊಳಿಸಲಾಗುವುದು?

## ಚಾಮರಾಜನಗರ ಖಾಸಗಿ ಬಸ್ ನಿಲ್ದಾಣದ ಅಭಿವೃದ್ಧಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೧೫೫ (೨೩೨೨) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಾಮರಾಜನಗರದ ಅಂಬೇಡ್ಕರ್ ಕ್ರೀಡಾಂಗಣದ ಪಕ್ಕದಲ್ಲಿರುವ ಖಾಸಗಿ ಬಸ್ ನಿಲ್ದಾಣವು ಅವ್ಯವಸ್ಥೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪ್ರಯಾಣಿಕರ, ಚಾಲಕರ ನಿರ್ವಾಹಕರ ಅನುಕೂಲಕ್ಕಾಗಿ ಇಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಕ್ರಮ ಜರುಗಿಸಲಾಗುವುದೇ;

(ಆ) ಮಳೆ ಬಂದಾಗ ಬಸ್ ನಿಲ್ದಾಣದಲ್ಲಿ ನೀರು ನಿಲ್ಲುತ್ತಿದ್ದು, ಇದು ಸರಾಗವಾಗಿ ಹರಿದುಹೋಗುವಂತೆ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲಾಗುವುದೇ;

(ಇ) ಚಾಲಕರು ಮತ್ತು ನಿರ್ವಾಹಕರ ಅನುಕೂಲಕ್ಕಾಗಿ ನಿರ್ಮಿಸಲಾಗುತ್ತಿದ್ದ ವಿಶ್ರಾಂತಿ ಗೃಹ ಅರ್ಧಕ್ಕೆ ನಿಂತಿದ್ದು ಇದನ್ನು ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುವುದೇ?

## ಮೈಸೂರಿನಲ್ಲಿರುವ ಅಕ್ರಮ ಶುದ್ಧ ನೀರಿನ ಘಟಕಗಳು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೧೫೬ (೨೩೨೧) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ನಗರದಲ್ಲಿರುವ ಖಾಸಗಿ ಶುದ್ಧ ಕುಡಿಯುವ ನೀರಿನ ಘಟಕಗಳ (ಪ್ಯಾಕೇಜ್ ಡ್ರಿಂಕಿಂಗ್ ವಾಟರ್) ಸಂಖ್ಯೆ ಎಷ್ಟು; ಇವುಗಳಲ್ಲಿ ನಿಮಯಗಳ ಪ್ರಕಾರ ಐ.ಎಸ್.ಐ. ಅನುಮೋದನೆ ಪಡೆದಿರುವ ಘಟಕಗಳು ಎಷ್ಟು; ಐ.ಎಸ್.ಐ. ಅನುಮೋದನೆ ಪಡೆಯದ ಘಟಕಗಳ ಬಗ್ಗೆ ಕ್ರಮ ಜರುಗಿಸಲಾಗಿದೆಯೇ;

(ಆ) ಈ ಖಾಸಗಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ತಪಾಸಣೆ ಮಾಡಲಾಗುತ್ತಿದೆಯೇ; ಮತ್ತು ಇವರು ಸರಬರಾಜು ಮಾಡುವ ನೀರಿನ ಕ್ಯಾನ್‌ಗಳಿಗೆ ಬೆಲೆಯನ್ನು ನಿಗಧಿಪಡಿಸಲಾಗಿದೆಯೇ;

(ಇ) ಶುದ್ಧ ಕುಡಿಯುವ ನೀರಿನ ಕ್ಯಾನ್‌ಗಳನ್ನು ನಿಯಮಗಳ ಪ್ರಕಾರ ಸ್ವಚ್ಛಗೊಳಿಸದೇ, ನೀರನ್ನು ವೈಜ್ಞಾನಿಕವಾಗಿ ಸರಿಯಾದ ರೀತಿಯಲ್ಲಿ ಸಂಸ್ಕರಿಸದೇ, ಹೆಚ್ಚು ಬೆಲೆಯನ್ನು ನಿಗಧಿಪಡಿಸಿ ನೀರನ್ನು ಮಾರಾಟ ಮಾಡುವ ಪ್ರಕರಣಗಳು ಹೆಚ್ಚಾಗಿದ್ದು, ಈ ಬಗ್ಗೆ ಪರಿಶೀಲಿಸಿ ಕ್ರಮ ಜರುಗಿಸಲಾಗುವುದೇ?

## ಮೈಸೂರು ನಗರದಲ್ಲಿರುವ ಅನಧಿಕೃತ ಆಟೋ ನಿಲ್ದಾಣದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೧೫೭ (೨೩೨೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ನಗರದಲ್ಲಿ ನಗರ ಸಾರಿಗೆ ಬಸ್ ನಿಲ್ದಾಣದ ಎರಡೂ ಕಡೆ ಸಯ್ಯಾಜಿ ರಾವ್ ರಸ್ತೆಯಲ್ಲಿ, ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಗ್ರಾಮೀಣ ಬಸ್ ನಿಲ್ದಾಣದ ಬಳಿ, ರೈಲುನಿಲ್ದಾಣದ ಬಳಿ, ಎಲ್ಲೆಂದರಲ್ಲಿ ಆಟೋಗಳು ನಿಂತಿದ್ದು, ವಾಹನ ಸಂಚಾರಕ್ಕೆ ಜನ ಸಂಚಾರಕ್ಕೆ ಅಡೆ ತಡೆ ಉಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಆಟೋಗಳಿಗೆ ಸೂಕ್ತ ನಿಲ್ದಾಣಗಳನ್ನು ಗುರುತಿಸಿ ಅಲ್ಲಿಯೇ ಅವುಗಳನ್ನು ನಿಲ್ಲಿಸಲು ಹಾಗೂ ಸದರಿ ನಿಲ್ದಾಣಗಳಿಂದ, ಮೈಸೂರು ನಗರದ ಪ್ರಮುಖ ಪ್ರವಾಸಿ ಸ್ಥಳಗಳಿಗೆ, ಬಡಾವಣೆಗಳಿಗೆ ಇರುವ ದೂರ, ಅಂದಾಜು ಆಟೋದರ ಮಾಹಿತಿಯುಳ್ಳ ಬೋರ್ಡ್‌ಗಳನ್ನು ಬರೆದು ಹಾಕಿ ಪ್ರಯಾಣಿಕರ, ರಾಜ್ಯ ಹಾಗೂ ಹೊರ ರಾಜ್ಯಗಳಿಂದ ನಗರಕ್ಕೆ ಬರುವ ಪ್ರವಾಸಿಗರ ಶೋಷಣೆಯನ್ನು ತಪ್ಪಿಸಲು ಕ್ರಮ ಜರುಗಿಸಲಾಗುವುದೇ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋಮು ಪ್ರಚೋದನೆಗೆ ನೀಡುತ್ತಿರುವ ವ್ಯಕ್ತಿಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೫೮ (೨೩೫೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋಮು ಪ್ರಚೋದನೆಗೆ ನೀಡುತ್ತಿರುವ ವ್ಯಕ್ತಿಗಳ ಮೇಲೆ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಆ) ಶಾಂತಿ ಸೌಹಾರ್ದ ಪ್ರಕಟಿಸುವ ಸಂಘಟನೆಗಳನ್ನು ಹತೋಟಿಗೆ ತರಲು ಇಲಾಖೆ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಪೊಲೀಸ್ ಬಲ ವೃದ್ಧಿಸಲು ಪ್ರಸ್ತುತ ಕೈಗೊಂಡ ಕ್ರಮಗಳೇನು; ಇಲಾಖೆಯ ಮುಂದಿರುವ ಯೋಜನೆಗಳಾವುವು; (ವಿವರ ನೀಡುವುದು)

(ಈ) ಮಂಗಳೂರು ನಗರದಲ್ಲಿ ಸಿ.ಸಿ. ಕ್ಯಾಮರಾಗಳನ್ನು ಕಮಿಷನರೇಟ್ ವ್ಯಾಪ್ತಿಯಲ್ಲಿ ಸಂಪೂರ್ಣವಾಗಿ ಅಳವಡಿಸಲಾಗಿದೆಯೇ; ಈ ಬಗ್ಗೆ ಖರ್ಚು ಮಾಡಿದ ಹಣವೆಷ್ಟು; ಸಿ.ಸಿ. ಕ್ಯಾಮರಾ ಮೂಲಕ ಎಲ್ಲಾ ಅಪರಾಧಿಗಳನ್ನು ಪತ್ತೆ ಹಚ್ಚಲಾಗಿದೆಯೇ? (ವಿವರ ನೀಡುವುದು)

## ಎರವಲು ಸೇವೆಯಲ್ಲಿ ಕರ್ತವ್ಯ

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೫೫ (೨೪೫೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ವಿವಿಧ ಇಲಾಖೆಗಳಿಂದ ಎರವಲು ಸೇವೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವೃಂದವಾರು, ಇಲಾಖೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಿ.ಬಿ.ಎಂ.ಪಿ.ಯ ಎರವಲು ಸೇವೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳಿಗೆ ಮಾಹೆಯಾನ ವೇತನ ಹಾಗೂ ಇತರೆ ಭತ್ಯೆಗಳನ್ನು ನೀಡಲು ಮೀಸಲಿಟ್ಟಿರುವ ಹಣವೆಷ್ಟು; (ಮಾಹಿತಿ ನೀಡುವುದು)

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ವಿವಿಧ ಇಲಾಖೆಗಳಿಂದ ಎರವಲು ಸೇವೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ಸೇವೆಯನ್ನು ಎಷ್ಟು ಅವಧಿಯವರೆಗೆ ಪಡೆಯಲು ಉದ್ದೇಶಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಅಧಿಕಾರಿ/ಸಿಬ್ಬಂದಿಗಳು ಎಷ್ಟು ವರ್ಷಗಳಿಂದ ಎರವಲು ಸೇವೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ; (ವೃಂದಾವಾರು, ಇಲಾಖೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕೊರತೆಯಿರುವ ಅಧಿಕಾರಿ/ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲು ಕ್ರಮಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಕೊರತೆಯಿರುವ ಅಧಿಕಾರಿ/ಸಿಬ್ಬಂದಿಗಳನ್ನು ನೇಮಕಾತಿ ಮಾಡಿಕೊಳ್ಳಲಾಗುವುದು ಯಾವಾಗ? (ಸಂಪೂರ್ಣ ಮಾಹಿತಿ ನೀಡುವುದು)

## ವಿಧಾನ ಪರಿಷತ್ತಿನ ಸದಸ್ಯರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಹೆಚ್ಚಿಸುವ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳಿಯ ಸಂಸ್ಥೆಗಳ ಕ್ಷೇತ್ರ):-**

೨೧೬೦ (೨೪೫೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ವಿಧಾನ ಪರಿಷತ್ ಸದಸ್ಯರಿಗೆ ಮತ್ತು ವಿಧಾನ ಸಭೆ ಸದಸ್ಯರಿಗೆ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಒಂದೇ ಮಾದರಿಯಲ್ಲಿ ಅನುದಾನ ಬಿಡುಗಡೆಯಾಗುತ್ತಿದ್ದು, ವಿಧಾನ ಪರಿಷತ್ ಸದಸ್ಯರ ಕ್ಷೇತ್ರವು ಇಡೀ ಜಿಲ್ಲೆ ಆಗಿರುವುದರಿಂದ ಅಭಿವೃದ್ಧಿ ಕಾರ್ಯಗಳಿಗೆ ಅನುದಾನದ ಕೊರತೆಯಾಗುತ್ತಿರುವುದರಿಂದ ಅನುದಾನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ;

(ಆ) ಇದ್ದಲ್ಲಿ, ಯಾವ ಹಂತದಲ್ಲಿದೆ; ಅನುಷ್ಠಾನಗೊಳಸಲು ಬೇಕಾಗಿರುವ ಕಾಲಾವಕಾಶವೆಷ್ಟು?

## ಮಹಿಳಾ ಪೊಲೀಸ್ ಠಾಣೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನ ಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೬೧ (೨೩೩೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿರುವ ಒಟ್ಟು ಮಹಿಳಾ ಪೊಲೀಸ್ ಠಾಣೆಗಳೆಷ್ಟು; ಎಲ್ಲೆಲ್ಲಿ ಇವೆ; (ವಿವರವಾದ ಮಾಹಿತಿ ನೀಡುವುದು)

(ಆ) ಹೊಸದಾಗಿ ಮಹಿಳಾ ಪೊಲೀಸ್ ಠಾಣೆಗಳನ್ನು ಮಾಡಬೇಕೆಂಬ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ, ಎಷ್ಟು ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆ; (ವಿವರ ನೀಡುವುದು)

(ಇ) ಹೀಗೆ ಪ್ರಸ್ತಾವನೆ ಸಲ್ಲಿಸಿದ ಠಾಣೆಗಳು ಪ್ರಾರಂಭಗೊಂಡಿವೆಯೇ; ಪ್ರಾರಂಭಗೊಳ್ಳದೇ ಇದ್ದಲ್ಲಿ, ಸರ್ಕಾರ ತೆಗೆದುಕೊಳ್ಳುವ ಕ್ರಮವೇನು?

## ನಕಲಿ ಪಾಸ್‌ಪೋರ್ಟ್ ಪ್ರಕರಣಗಳ ಕುರಿತು

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು):–**

೨೧೬೨ (೨೩೪೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಕಲಿ ಪಾಸ್‌ಪೋರ್ಟ್ ಬಳಸಿ ಸಿಕ್ಕಿಬಿದ್ದಿರುವ ಪ್ರಕರಣಗಳೆಷ್ಟು; ಅವುಗಳ ಬಗ್ಗೆ ಕೈಗೊಂಡ ಕ್ರಮಗಳೇನು; ಅವುಗಳು ಈಗ ಯಾವ ಹಂತದಲ್ಲಿವೆ;

(ಆ) ಬಾಂಗ್ಲಾ ವಲಸಿಗರು ಕರ್ನಾಟಕದಲ್ಲಿ ನೆಲಸಿರುವ ನಕಲಿ ವಿಳಾಸ ನೀಡಿ ಪಾಸ್‌ಪೋರ್ಟ್ ಮಾಡಿಸಿಕೊಂಡ ಪ್ರಕರಣಗಳು ಬೆಳಕಿಗೆ ಬಂದಿವೆಯೇ;

(ಇ) ಬಂದಿದ್ದಲ್ಲಿ, ಅಂತಹ ಪ್ರಕರಣಗಳ ಸಂಖ್ಯೆ ಎಷ್ಟು; ಅವುಗಳು ಈಗ ಯಾವ ಹಂತದಲ್ಲಿವೆ;

(ಈ) ನಕಲಿ ಪಾಸ್‌ಪೋರ್ಟ್ ಪ್ರಕರಣಗಳನ್ನು ತಡೆಗಟ್ಟಲು ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು?

## ಕೆ.ಎಂ.ಆರ್.ಪಿ. ಯೋಜನೆ ಬಗ್ಗೆ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು):-**

೨೧೬೩ (೨೩೪೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಕೆ.ಎಂ.ಆರ್.ಪಿ. ಯೋಜನೆ ಅಡಿಯಲ್ಲಿ ೨೦೦೭ನೇ ಸಾಲಿನಿಂದ ಪಡೆದಿರುವ ಸಾಲದ ಮೊತ್ತ ಎಷ್ಟು; (ವಿವರ ನೀಡುವುದು)

(ಆ) ಸದರಿ ಯೋಜನೆ ಅಡಿಯಲ್ಲಿ ಪಡೆದಿರುವ ಸಾಲದ ಹಣವನ್ನು ಯಾವ ಕಾಮಗಾರಿಗೆ ಉಪಯೋಗಿಸಲಾಗಿದೆ;

(ಇ) ಸದರಿ ಸಾಲದ ಮೊತ್ತಕ್ಕೆ ಪಾವತಿಸಿರುವ ಅಸಲು ಮತ್ತು ಬಡ್ಡಿ ಎಷ್ಟು; (ವಿವರ ನೀಡುವುದು)

(ಈ) ಮೂಲ ಬಡ್ಡಿಯನ್ನು ಹೊರತುಪಡಿಸಿ ಹೆಚ್ಚುವರಿಯಾಗಿ ಪಾವತಿಸಿರುವ ಬಡ್ಡಿಯ ವಿವರ ನೀಡುವುದು;

(ಉ) ಹೆಚ್ಚುವರಿ ಬಡ್ಡಿ ಪಾವತಿಸಿದ್ದಲ್ಲಿ, ಅದಕ್ಕೆ ಕಾರಣಕರ್ತರಾದ ಅಧಿಕಾರಿಗಳ ವಿವರ ಹಾಗೂ ಸದರಿಯವರುಗಳ ವಿರುದ್ಧ ಕೈಗೊಂಡಿರವ ಕ್ರಮವೇನು?

LC.F.113

## ಪೊಲೀಸ್ ಕಾನ್‌ಸ್ಟೇಬಲ್‌ಗಳಿಗೆ ಮತ್ತು ಸಬ್ ಇನ್ಸ್‌ಪೆಕ್ಟರ್‌ಗಳಿಗೆ ನೀಡಲಾಗುತ್ತಿದ್ದ ಕಿಟ್ ಸೌಲಭ್ಯವನ್ನು ರದ್ದುಗೊಳಿಸಿರುವ ಬಗ್ಗೆ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು):-**

೨೧೬೪ (೨೩೪೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಪೊಲೀಸ್ ಇಲಾಖೆಯಲ್ಲಿ ಕಾನ್‌ಸ್ಟೇಬಲ್‌ಗಳು ಮತ್ತು ಸಬ್ ಇನ್ಸ್‌ಪೆಕ್ಟರ್‌ಗಳಿಗೆ ಸಮವಸ್ತ್ರ ಸೇರಿದಂತೆ ಇತರ ಸಾಮಗ್ರಿ ಒಳಗೊಂಡ ಕಿಟ್ ವಿತರಣೆ ಪದ್ಧತಿಯನ್ನು ನಿಲ್ಲಿಸಿರುವುದು ನಿಜವೇ; ಸದರಿ ಕಿಟ್‌ನಲ್ಲಿ ಅಡಕವಾಗಿರುತ್ತಿದ್ದ ಸಾಮಾಗ್ರಿಗಳು ಯಾವುವು;

(ಆ) ಸದರಿ ಕಿಟ್ ವಿತರಣೆ ಪದ್ಧತಿಯನ್ನು ನಿಲ್ಲಿಸಿ, ಅದರ ಬದಲಾಗಿ ಯಾವ ವ್ಯವಸ್ಥೆ ಮಾಡಲಾಗಿದೆ; ಈ ವ್ಯವಸ್ಥೆಯಿಂದ ಸಿಬ್ಬಂದಿಗೆ ಅನಾನುಕೂಲವಾಗಿರುವುದಿಲ್ಲವೇ;

(ಇ) ಕಿಟ್ ವಿತರಣೆ ಪದ್ಧತಿಯನ್ನು ಯಾವ ಕಾರಣಕ್ಕಾಗಿ ನಿಲ್ಲಿಸಲಾಗಿದೆ;

(ಈ) ಸದರಿ ಕಿಟ್ ವಿತರಣೆ ಪದ್ಧತಿಯನ್ನು ಪುನರಾರಂಭಿಸಲಾಗುವುದೆ?

## ಕೆರೆ ಸಂಜೀವಿನಿ ಯೋಜನೆಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು):-**

೨೧೬೫ (೨೩೪೯) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೆರೆ ಸಂಜೀವಿನಿ ಯೋಜನೆಯನ್ವಯ ಮಂಗಳೂರು ನಗರದಲ್ಲಿ ಅಭಿವೃದ್ಧಿಗಾಗಿ ಗುರುತಿಸಿದ ಕೆರೆಗಳ ಸಂಖ್ಯೆ ಎಷ್ಟು; ಕೆರೆ ಅಭಿವೃದ್ಧಿಗೆ ನೀಡಿದ ಅನುದಾನವೆಷ್ಟು; (ವಿವರ ನೀಡುವುದು)

(ಆ) ಮಂಗಳೂರು ನಗರದ ಎಲ್ಲಾ ಕೆರೆಗಳಿಗೆ ಕೊಳಚೆ ನೀರು (DRAINAGE WATER) ಆವರಿಸಿರುವುದರಿಂದ ಕೆರೆಗಳ ಅಭಿವೃದ್ಧಿ ಯೋಜನೆಯ ಖರ್ಚು ಮಾಡಿದ ಅನುದಾನ ಉಪಯೋಗಕ್ಕೆ ಬಂದಂತಾಗಿದೆಯೇ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಮಂಗಳೂರು ನಗರ ಭೌತಿಕ ತೆರೆದ ಬಾವಿಗಳಿಗೆ ನೀರು ಮತ್ತು ಕೊಳಚೆ ಆವರಿಸಿರುವುದರಿಂದ ಕುಡಿಯಲು ಸಾಧ್ಯವಾಗದಿರುವ ಬಗೆಗೆ ಮಹಾನಗರಪಾಲಿಕೆ ಕೈಗೊಂಡ ಕ್ರಮಗಳೇನು;

(ಈ) ಮಂಗಳೂರು ಮಹಾನಗರಪಾಲಿಕೆಯ ವ್ಯಾಪ್ತಿಯಲ್ಲಿ ಕೊಳಚೆ ನೀರು ಪಸರಿಸಲು ಪ್ರಮುಖ ಕಾರಣಗಳೇನು? (ವಿವರ ನೀಡುವುದು)

## ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ ಯೋಜನೆಗೆ ಮೀಸಲಿಟ್ಟ ಅನುದಾನದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೬೬ (೨೩೫೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೌಶಲ್ಯ ಅಭಿವೃದ್ಧಿ ಯೋಜನೆಗೆ ಮೀಸಲಿಟ್ಟ ಅನುದಾನ ಎಷ್ಟು; ಸ್ವ-ಉದ್ಯೋಗಕ್ಕಾಗಿ ಈ ಯೋಜನೆಯಲ್ಲಿರುವ ಅವಕಾಶಗಳೇನು; (ವಿವರ ನೀಡುವುದು)

(ಆ) ಉದ್ಯೋಗವನ್ನು ಕಂಡುಕೊಳ್ಳಲು ಇಲಾಖೆಯ ಮುಂದಿರುವ ಪ್ರಸ್ತಾವನೆಗಳೇನು; ರಾಜ್ಯದಲ್ಲಿರುವ ನಿರುದ್ಯೋಗಿ ಯುವಕರ ನಿರ್ದಿಷ್ಟ ಸಂಖ್ಯೆ ವಿವರವನ್ನು ಇಲಾಖೆ ಹೊಂದಿದೆಯೇ; (ವಿವರ ನೀಡುವುದು)

(ಇ) ಉದ್ಯೋಗವನ್ನು ದೊರಕಿಸಲು ಯಾವ ಮಾನದಂಡವನ್ನು ಅನುಸರಿಸಲಾಗುತ್ತಿದೆ; (ವಿವರ ನೀಡುವುದು)

(ಈ) ೨೦೧೫-೧೬, ೨೦೧೬-೧೭, ೨೦೧೭-೧೮ರಲ್ಲಿ ಕೌಶಲ್ಯ ಅಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಲ್ಲಿ ತರಬೇತಿ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಲೇರಿಯಾ ರೋಗದ ಬಗ್ಗೆ

**ಶ್ರೀ ಐವನ್ ಡಿ ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು):-**

೨೧೬೭ (೨೩೪೮) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಂಗಳೂರು ನಗರ ಮಲೇರಿಯಾ ರೋಗದಲ್ಲಿ ಪ್ರಥಮ ಸ್ಥಾನದಲ್ಲಿದೆ ಎಂದು ವರದಿ ಆಗಿರುವುದು ನಿಜವೇ; ಮಲೇರಿಯಾ ರೋಗ ತಡೆಗಟ್ಟಲು ಮಹಾನಗರಪಾಲಿಕೆ ವಿಫಲಗೊಂಡಿದೆ ಎಂದು ದೂರುಗಳಿರಲು ಕಾರಣಗಳೇನು; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಲೇರಿಯಾ ರೋಗದ ಸಂಖ್ಯೆ ಹೆಚ್ಚಾಗಲು ಕಾರಣಗಳೇನು, ಮತ್ತು ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ೨೦೧೫-೧೬, ೨೦೧೬-೧೭, ಮತ್ತು ೨೦೧೭-೧೮ನೇ ವರ್ಷಗಳಲ್ಲಿ ಮಲೇರಿಯಾ ನಿಯಂತ್ರಣಕ್ಕಾಗಿ ಮಹಾನಗರಪಾಲಿಕೆ ಖರ್ಚು ಮಾಡಿದ ಹಣವೆಷ್ಟು; ರೋಗ ಪತ್ತೆ ಹಚ್ಚಿದ ರೋಗಿಗಳ ಸಂಖ್ಯೆ ಎಷ್ಟು; ಗಣಮುಖಗೊಂಡವರ ಸಂಖ್ಯೆ ಎಷ್ಟು; ಮರಣ ಹೊಂದಿದವರ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಮಂಗಳೂರು ನಗರದಲ್ಲಿ ವಾಸಿಸುತ್ತಿರುವ ಪೌರಕಾರ್ಮಿಕರ ವಸತಿ ಗೃಹಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೬೮ (೨೩೫೦) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ನಗರದಲ್ಲಿ ವಾಸಿಸುತ್ತಿರುವ ಪೌರಕಾರ್ಮಿಕರ ವಸತಿ ಗೃಹಗಳ ನಿರ್ಮಾಣ ಕಾರ್ಯ ಪೂರ್ಣಗೊಳ್ಳುವುದು ಯಾವಾಗ ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಆ) ಮಂಗಳೂರು ನಗರಪಾಲಿಕೆ ವ್ಯಾಪ್ತಿಯಲ್ಲಿ ಪ್ರಸ್ತುತ ವಾಸವಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು; ಸ್ವಂತ ಮನೆ ಹೊಂದಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು; ಸರ್ಕಾರಿ ನಿವೇಶನಕ್ಕಾಗಿ ಅರ್ಜಿಹಾಕಿದ ಕಾರ್ಮಿಕರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಪರಿಶಿಷ್ಟಜಾತಿ/ಪರಿಶಿಷ್ಟ ವರ್ಗಗಳ ಕಾಲೋನಿಗಳ ಅಭಿವೃದ್ಧಿಗೆ ಮಹಾನಗರಪಾಲಿಕೆ ಕೈಗೊಂಡಿರುವ ಕ್ರಮಗಳೇನು; ನಗರದಲ್ಲಿರುವ ಒಟ್ಟು ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ಕಾಲೋನಿಗಳು ಎಷ್ಟು; ಎಷ್ಟು ಕುಟುಂಬಗಳು ವಾಸವಾಗಿವೆ; (ವಿವರ ನೀಡುವುದು)

(ಈ) ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ಮಕ್ಕಳಿಗೆ ವಿದ್ಯಾರ್ಥಿ ವೇತನ ಮತ್ತು ವಸತಿ ನಿಲಯಗಳಲ್ಲಿ ಶಿಕ್ಷಣ ಪಡೆಯಲು ಅವಕಾಶ ನೀಡಲಾಗಿದೆಯೇ? (ವಿವರ ನೀಡುವುದು)

# ಹಾವೇರಿ ಜಿಲ್ಲೆಯಲ್ಲಿ ಯಶಸ್ವಿನಿ ಯೋಜನೆಯಡಿ ನೋಂದಾಯಿತ ರೈತಾಪಿ ಜನರ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):-**

೨೧೬೯ (೨೩೪೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾವೇರಿ ಜಿಲ್ಲೆಯಲ್ಲಿ ಯಶಸ್ವಿನಿ ಯೋಜನೆಯಡಿಯಲ್ಲಿ ನೋಂದಾಯಿತರಾಗಿರುವ ರೈತಾಪಿ ಜನರ ಸಂಖ್ಯೆ ಎಷ್ಟು; ಇವರಲ್ಲಿ ಎಷ್ಟು ಜನರಿಗೆ ಯಶಸ್ವಿನಿ ಕಾರ್ಡ್‌ಗಳನ್ನು ನೀಡಲಾಗಿದೆ; ಎಷ್ಟು ಕಾರ್ಡ್‌ಗಳನ್ನು ಇನ್ನೂ ನೀಡಬೇಕಾಗಿದೆ; ಇನ್ನೂ ಸದಸ್ಯರಾಗಬೇಕಾಗಿರುವವರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಆ) ಯಶಸ್ವಿನಿ ಯೋಜನೆಗೆ ಸದಸ್ಯರಾದ ದಿನಾಂಕದಿಂದಲೇ ಸದಸ್ಯತ್ವದ ಕಾರ್ಡ್‌ಗಳನ್ನು ನೀಡಲು ಹಾಗೂ ಈ ಯೋಜನೆಯ ಸೌಲಭ್ಯಗಳನ್ನು ವಿಸ್ತರಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?

ಶ್ರೀನಿವಾಸ

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. 053/800 ಪ್ರತಿಗಳು/04-06-2017